ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 47 ಸಂಚಿಕೆ- 47 | PAGE- 8 ಪುಟ-8 | ಬುಧುವಾರ 26.03.2025 | RS.2/- ಬೆಲೆ 2/-

# ಬೆಳಿಗ್ಗೆ 'ಮನಿ' ಸಂಜೆ 'ಹನಿ' ಸರ್ಕಾರ : ನಿಖಿಲ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.25: ಬೆಳಿಗ್ಗೆ ಮನಿ ಸಂಜೆ ಹನಿ ಸರ್ಕಾರವಾಗಿದೆ ಎಂದು ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹನಿಟ್ರಾಪ್ ಯತ್ನ ಆಗಿದೆ ಎಂದು ಸದನದಲ್ಲಿ ವಿಷಯ ಪ್ರಸ್ತಾಪಿಸಿರುವ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರು ಏಕೆ ನಾಲ್ಕೈದು ದಿನಗಳಿಂದ ಮೀನಾಮೇಷ ಎಣಿಸುತ್ತಿದ್ದಾರೆ ಎಂದು ಪ್ರಶ್ನಿಸಿದರು.

ಒಂದು ಕುರ್ಚಿಗೋಸ್ಕರ ಈ ಮಟ್ಟದ ರಾಜಕಾರಣ ನಡೆಯುತ್ತಿದೆ. ಸಿಡಿ ಫ್ಯಾಕ್ಟರಿ ಮಾಲೀಕ ಯಾರು?, ಆ ಮಹನೀಯ ಯಾರು? ಎಂಬುದನ್ನು ಹೊರಗಡೆ ತನ್ನಿ. ನಾವು ಆ ಪುಣ್ಯಾತ್ಮನನ್ನು ನೋಡಲು ಕಾತರದಿಂದ ಕಾಯುತ್ತಿದ್ದೇವೆ. ದೂರು ಕೊಡಿ ಎಂದು ಸಚಿವ ರಾಜಣ್ಣ ಅವರನ್ನು ಆಗ್ರಹಿಸಿದರು.

ವಿಧಾನಸೌಧ ದೇವಾಲಯವಿದ್ದಂತೆ. ಅಲ್ಲಿ ವಿಷಯಾಧಾರಿತ ಚರ್ಚೆಗಳಾಗಬೇಕು. ನಮ್ಮಂತಹ ಯುವಕರಿಗೆ ಮಾರ್ಗದರ್ಶನವಾಗುವ ಚರ್ಚೆಯಾಗಬೇಕು. ಆದರೆ ಹನಿಟ್ರಾಪ್ ವಿಚಾರ ಪ್ರಸ್ತಾಪವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಸೌಹಾರ್ದಯುತವಾಗಿ ಬಗೆಹರಿಸಿ :

ಮೇಕೆದಾಟು ಯೋಜನೆಗೆ ತಕರಾರು ತೆಗೆದಿರುವ ತಮಿಳುನಾಡಿನ ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಅವರ ಜೊತೆಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತುಕತೆ ನಡೆಸಿ ಸೌಹಾರ್ದಯುತವಾಗಿ ಬಗೆಹರಿಸಿಕೊಳ್ಳಲು ಮುಂದಡಿ ಇಡಬೇಕು. ಈ ನಿಟ್ಟಿನಲ್ಲಿ



ವೇದಿಕೆ ಸಿದ್ಧಪಡಿಸಬೇಕು. ನಾವು ನೆಲ, ಜಲ, ಭಾಷೆ ವಿಚಾರದಲ್ಲಿ ಎಲ್ಲದಕ್ಕೂ ಸಿದ್ಧವಿದ್ದೇವೆ. ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಗುತ್ತಿಗೆ ಕಾಮಗಾರಿಗಳಲ್ಲಿ ಒಂದು ಸಮುದಾಯಕ್ಕೆ ಮೀಸಲಾತಿ ಕಲ್ಪಿಸಿ ಓಲೈಕೆ ರಾಜಕಾರಣ ಮಾಡುವುದನ್ನು ಸರ್ಕಾರ ಬಿಟ್ಟು ಹಿಂದುಳಿದಿರುವ ಎಲ್ಲಾ ಸಮುದಾಯಗಳಿಗೂ ಕಾರ್ಯಕ್ರಮ ರೂಪಿಸಬೇಕು ಎಂದು ಅವರು ಆಗ್ರಹಿಸಿದರು.

ಧರ್ಮಾಧರಿತ ಮೀಸಲಾತಿ ಕೊಡಬಾರದು ಎಂದು ನ್ಯಾಯಾಲಯದ ತೀರ್ಪುಗಳಿವೆ. ಆದರೆ ಕಾಂಗ್ರೆಸ್ ಸರ್ಕಾರ ಇತರ ಅಲ್ಪಸಂಖ್ಯಾತ ಸಮುದಾಯಗಳನ್ನು ಕಡೆಗಣಿಸಿ ಒಂದು ಸಮುದಾಯಕ್ಕೆ ಮಾತ್ರ ಮೀಸಲು ಕಲ್ಪಿಸಲು ಮುಂದಾಗಿದೆ. ಧರ್ಮಾಧರಿತ ಮೀಸಲಾತಿ ವಿಚಾರದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಒಗ್ಗಟ್ಟಿನ ಹೋರಾಟ ಮಾಡಿವೆ.

ಈ ಸಂಬಂಧ ರಾಜ್ಯಪಾಲರಿಗೂ ಜಂಟಿಯಾಗಿ ಮನವಿ ಸಲ್ಲಿಸಲಾಗಿದೆ. ಕಾಂಗ್ರೆಸ್ ಹಾಗೂ ಸರ್ಕಾರದ ವಿರುದ್ಧ ಸದನದ ಒಳಹೊರಗೆ ಹೋರಾಟ ನಡೆಸಿದ್ದು, ಯಾವುದೇ ಗೊಂದಲವಿಲ್ಲ ಎಂದರು.

ಲೋಕಸಭೆ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಕಾಂಗ್ರೆಸ್ ನಾಯಕರು ಸಂವಿಧಾನ ಪುಸ್ತಕವನ್ನು ಕೈಯಲ್ಲಿ ಹಿಡಿದರೆ ಸಾಲದು. ಅದನ್ನು ಅನುಷ್ಠಾನ ಮಾಡಲು ತಿಳಿವಳಿಕೆ ಪಡೆಯಬೇಕು. ಲೋಕಸಭೆ ಚುನಾವಣೆಯಲ್ಲಿ ನಮ್ಮ ವಿರುದ್ಧ ಸಂವಿಧಾನ ಬದಲಾವಣೆ ಮಾಡುತ್ತಾರೆ ಎಂಬ ಅಪಪ್ರಚಾರ ಮಾಡಿದರು. ಈಗ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರೇ ಸಂವಿಧಾನ ಬದಲಾವಣೆ ಮಾತನ್ನಾಡಿದ್ದಾರೆ ಎಂದು ವ್ಯಂಗ್ಯವಾಡಿದರು.

ನಟ್ಟು, ಬೋಲ್ಟು ಟೈಟು :

ಡಿ.ಕೆ.ಶಿವಕುಮಾರ್ ಅವರ ಮನಃಸ್ಥಿತಿ ಏನೆಂಬುದು ಜನರಿಗೆ ಗೊತ್ತಿದೆ. ಸಂವಿಧಾನ ಬದಲಾವಣೆ ಬಗ್ಗೆ ಅವರು ಮಾತನಾಡಿದ್ದಾರೆ. ನಾಲಿಗೆ ಮತ್ತು ತಲೆಯ ನಡುವೆ ನಟ್ಟು, ಬೋಲ್ಟು ಸಡಿಲವಾಗಿವೆ. ಸ್ಪ್ಯಾನರ್ ಅವರ ಪಕ್ಷದಲ್ಲಿದೆ. ಆ ಪಕ್ಷ ಟೈಟು ಮಾಡದಿದ್ದರೆ

(2ನೇ ಪುಟ ನೋಡಿ)

## ವಿದ್ಯುತ್ ದರ ಹೆಚ್ಚಳ: ಶೆಟಕಾರ ಖಂಡನೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 25 : ನಮ್ಮ ರಾಜ್ಯದಲ್ಲಿ ಇದೀಗ ವಿದ್ಯುತ್‌ದರ ಮುಂದಿನ ಮೂರು ವರ್ಷಗಳಿಗೆ ಅಂದರೆ ಹಣಕಾಸು ವರ್ಷ 2025-26 ರೂ 36 ಪೈಸೆ ಪ್ರತಿ ಯೂನಿಟ್‌ಗೆ, 2026-27-ಕ್ಕೆ ರೂ 35 ಪೈಸೆ ಪ್ರತಿ ಯೂನಿಟ್ಗೆ, 2027-28ಕ್ಕೆ ರೂ 34 ಪೈಸೆ ಪ್ರತಿ ಯೂನಿಟ್‌ಗೆ ಹೆಚ್ಚಳ ಮಾಡಿ ಆದೇಶಿಸಿರುವದು ದುರದುಷ್ಟಕರ ಹಾಗೂ ಖಂಡನಿಯ. ಆರ್ಥಿಕ ಮುಗ್ಗಟ್ಟು ಅನುಭವಿಸುತ್ತಿದ್ದಾರೆ, ಈಗ ವಿದ್ಯುತ್‌ದರ ಏರಿಕೆಯ ಭಾರಿ ಪರಿಣಾಮಗಳಿಂದ ಉದ್ಯಮಗಳು ನಡೆಸುವದು




ಕಷ್ಟವಾಗಿದೆ. ಅಲ್ಲದೆ ಎಷ್ಟೋ ಉದ್ಯಮಗಳು ಮುಚ್ಚಲ್ಪಡುತ್ತಿವೆ. ಇದು ಗೃಹ ಜ್ಯೋತಿ ಫಲಾನುಭವಿಗಳಲ್ಲದವರಿಗೆ, ವಾಣಿಜ್ಯ ಬಳಕೆ ಗ್ರಾಹಕರಿಗೆ, ರೈತರುಗಳಿಗೆ ಹಾಗು ಕೈಗಾರಿಕೊದ್ಯಮಿಗಳಿಗೆ ಪರಿಷ್ಕೃತ ವಿದ್ಯುತ್ ದರ ಏರಿಕೆ ಹೊರೆಯಾಗಿದೆ. ಈಗ 1ನೇ ಎಪ್ರಿಲ್ 2025 ರಿಂದಲೇ ಆದೇಶಿಸಿರುವದು ಖಂಡನಿಯ.

ಈ ಕ್ರಮವನ್ನು ಆಕ್ಷೇಪಿಸುತ್ತೇವೆ. ಹಾಗೆಯೇ ಈ ಪರಿಷ್ಕರಣೆ ಆದೇಶ ಜಾರಿಗೆ ತರದೇ ಹಿಂಪಡೆಯಲು ಒತ್ತಾಯಿಸುತ್ತೇವೆ. ವಿದ್ಯುತ್ ಏರಿಳಿತ ತಡೆಗಟ್ಟಿ ಸತತ ವಿದ್ಯುತ್ ಪೂರೈಕೆಯಾಗಬೇಕು ಹಾಗು ಇಲಾಖೆ ಜನರಿಗೆ ಗುಣಮಟ್ಟದ ವಿದ್ಯುತ್ ಪೂರೈಕೆಯಲ್ಲಿ ಸುಧಾರಣೆ-ಯಾಗದೇ ಪರಿಷ್ಕೃತ ವಿದ್ಯುತ್ ದರ ಏರಿಕೆ ಮಾಡಿದುದ್ದು, ರಾಜ್ಯದ ಜನರು ಎಲ್ಲವು ಸಹಿಸಿಕೊಳ್ಳುತ್ತಾರೆ ಎಂಬತ್ತಾಗಿದೆ ಜನರ ಹಿತಾಸಕ್ತಿಗಳನ್ನು ಲೆಕ್ಕಿಸದೆ ಇರುವದು ವಿಷಾದನೀಯವಾಗಿದೆ.

## ಬಿಜೆಪಿಯವರು ಹುಟ್ಟು ಸುಳ್ಳುಗಾರರು:ರಾಮಲಿಂಗಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.25: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರರು ಸಂವಿಧಾನ ಬದಲಾವಣೆ ಕುರಿತಂತೆ ಮಾತನಾಡಿಲ್ಲ. ಬಿಜೆಪಿಯವರು ಹುಟ್ಟು ಸುಳ್ಳುಗಾರರಾಗಿದ್ದು ಹೇಳಲಾರದ್ದನ್ನು ಹೇಳಿದ್ದಾರೆ ಎಂದು ಸಾಧಿಸಲು ಹೊರಟಿದ್ದಾರೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.



ಅವರು ಸುದ್ದಿಗಾರರೊಂದಿಗೆ ಮಾತನಾಡಿ ಸಂವಿಧಾನ ಬದಲಾವಣೆ ಮಾಡುವುದು ಶಿವಕುಮಾರರಿಂದ ಸಾಧ್ಯವಾ ?. ಸಂವಿಧಾನ ಬದಲಾವಣೆ ಏನಾದರೂ ಮಾಡಬೇಕಾದರೆ ಸಂಸತ್ತು ಮಾಡಬೇಕು. ಲೋಕಸಭೆ ಹಾಗು ರಾಜ್ಯಸಭೆಯಲ್ಲಿ ನಮಗೆ ಬಹುಮತವಿಲ್ಲದಿದ್ದಾಗ ಸಂವಿಧಾನ ಬದಲಾವಣೆ ಕಾಂಗ್ರೆಸ್ ಪಕ್ಷದಿಂದ ಮಾಡಲಿಕ್ಕಾಗುತ್ತಾ, ಎಂಬ ಸಾಮಾನ್ಯ ಜ್ಞಾನ ಬಿಜೆಪಿಯವರಿಗಿಲ್ಲ. ಬಿಜೆಪಿಯವರು ಬೆಳಗಿನಿಂದ ಸಂಜೆಯವರೆಗೆ ಬರಿ ಸುಳ್ಳು ಹೇಳುವುದನ್ನು ಕಾಯಕ ಮಾಡಿಕೊಂಡಿದ್ದಾರೆ. ಸುಮ್ಮನೇ ಏನಾದರೂ ವಿವಾದ ಸೃಷ್ಟಿ ಮಾಡುವುದು ಅವರ ಹವ್ಯಾಸವಾಗಿದೆ ಎಂದು ಅವರು ಲೇವಡಿ ಮಾಡಿದರು.

## ಪಶು, ಮೀನುಗಾರಿಕೆ ವಲಯ ಆರ್ಥಿಕತೆಗೆ ಬೆನ್ನೆಲುಬು: ಸಚಿವ ವೆಂಕಟೇಶ





ಬಿವಿಎಸ್‌ಸಿ-ಎಎಚ್‌ನಲ್ಲಿ 15 ಚಿನ್ನದ ಪದಕ ಪಡೆದ ಬೆಂಗಳೂರು ಪಶು ವೈದ್ಯಕೀಯ ಮಹಾವಿದ್ಯಾಲಯದ ರವೀನಾ ಕೆ.ಎಸ್ ಗೈರಾಗಿದ್ದರೆ ಸಹಪಾಠಿ ಬೆಂಗಳೂರು ಪಶು ವೈದ್ಯಕೀಯ ಮಹಾವಿದ್ಯಾಲಯದ ಆದಿತ್ಯಾ ಚಿದಾನಂದ 9 ಚಿನ್ನದ ಪದಕಗಳನ್ನು ಸ್ವೀಕರಿಸಿದರು. ಬೀದರ ಪಶು ಕಾಲೇಜಿನ ಭಾಗ್ಯಶ್ರೀ ಮತ್ತು ಶಿವಮೊಗ್ಗ ಪಶು ಕಾಲೇಜಿನ ವಿಶ್ವಾಸ ತಲಾ 4, ಹಾಸನ ಪಶು ಕಾಲೇಜಿನ ಶ್ರೇಯಸ್ ಹಾಗೂ ಗದಗ ಪಶು ಕಾಲೇಜಿನ ಚಾಂದನಿ ಎನ್. ಅವರು ತಲಾ 2 ಪದಕಗಳನ್ನು ಮುಡಿಗೇರಿಸಿಕೊಂಡರು. ಬಿ.ಟೆಕ್ (ಹೈನು ತಂತ್ರಜ್ಞಾನ)ನಲ್ಲಿ ಬೆಂಗಳೂರು ಹೈನು ವಿಜ್ಞಾನ ಕಾಲೇಜಿನ ವೈದೇಹಿ ಬಿ.ಟಿ 4, ಕಲಬುರ್ಗಿ ಹೈನು ಕಾಲೇಜಿನ ವರ್ಷಾ ಎ.ಎಂ 3 ಚಿನ್ನದ ಪದಕ, ಬಿಎಫ್‌ಎಸ್‌ಸಿಯಲ್ಲಿ ಮಂಗಳೂರಿನ ಮೀನುಗಾರಿಕಾ ಕಾಲೇಜಿನ ಸುಹಾಸ್ ಎಂ. ಅವರು 3 ಚಿನ್ನದ ಪದಕಗಳನ್ನು ಸ್ವೀಕರಿಸಿದರು. ಎಂವ್ಹಿಎಸ್‌ಸಿಯಲ್ಲಿ ಬೆಂಗಳೂರು ಪಶು ಕಾಲೇಜಿನ ದಕ್ಷೀತ್ ಪಿಎಲ್ 6, ಅನುಶ್ರೀ ಎನ್‌ಆರ್ 3, ನೇಹಾ ಬಣಕಾರ, ಅನುಶಾ ಎಂಎನ್ ಮತ್ತು ಕಾವೇರಿ ಎನ್.ಈ ತಲಾ 2 ಚಿನ್ನದ ಪದಕಕ್ಕೆ ಭಾಜನರಾದರು. ಪಶು ವೈದ್ಯಕೀಯ ಕಾಲೇಜು ಬೀದರನ ಮೊನಿಕಾ ಎಂ. 3 ಚಿನ್ನದ ಪದಕ ಪಡೆದರು.

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 25 : ಗ್ರಾಮೀಣಾಭಿವೃದ್ಧಿಯಲ್ಲಿ ಕೃಷಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ವಲಯಗಳು ಪ್ರಮುಖ ಪಾತ್ರವನ್ನು ವಹಿಸುತ್ತವೆ ಎಂದು ಪಶು ಸಂಗೋಪನೆ ಸಚಿವರು ಮತ್ತು ವಿವಿ ಸಹ ಕುಲಾಧಿಪತಿ ಕೆ. ವೆಂಕಟೇಶ ಹೇಳಿದರು.

ನಗರದ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಮಂಗಳವಾರ (ಮಾ.25) ನಡೆದ 14ನೇ ಘಟಿಕೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು 2.9 ಕೋಟಿ ಜಾನುವಾರುಗಳಿವೆ ಮತ್ತು ಮೀನುಗಾರಿಕೆ ವಲಯವು 1.6 ಮಿಲಿಯನ್ ಜನರಿಗೆ ಉದ್ಯೋಗವನ್ನು ಒದಗಿಸಿಕೊಟ್ಟಿದೆ.

ರಾಜ್ಯದ ಆರ್ಥಿಕತೆಗೆ ಈ ವಲಯಗಳು ಬೆನ್ನೆಲುಬಾಗಿವೆ. ಈ ವಲಯಗಳ ಅಭಿವೃದ್ಧಿಗೆ ನುರಿತ ವೃತ್ತಿಪರರನ್ನು ಪೂರೈಸುವಲ್ಲಿ ವಿಶ್ವವಿದ್ಯಾಲಯ ಮಹತ್ವದ ಕೊಡುಗೆ ನೀಡುತ್ತಿದೆ ಎಂದರು.

ಕರ್ನಾಟಕದ ಪಶು ಸಂಗೋಪನಾ ವಲಯವು ವಿಶಾಲವಾಗಿದೆ. ಜೂನೋಟಿಕ್

(2ನೇ ಪುಟ ನೋಡಿ)

## ನೀರಾವರಿ ಸೌಲಭ್ಯ ವಿಸ್ತರಿಸಲು ಕ್ರಮ:ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.25: ಕ್ಷೇತ್ರದಲ್ಲಿ ನೀರಾವರಿ ಸೌಲಭ್ಯ ವಿಸ್ತರಿಸಲು ಯೋಜನೆ ರೂಪಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ರೈತರೊಬ್ಬರ ಹೊಲದಲ್ಲಿ ಕರ್ನಾಟಕ ವೀರಶೈವ ಲಿಂಗಾಯತ

(2ನೇ ಪುಟ ನೋಡಿ)

## ರಾಜಣ್ಣಗೆ ಪರಮೇಶ್ವರ್ ನ್ಯಾಯ ಕೊಡಿಸೋ ಕೆಲ್ಸ ಮಾಡ್ತಾರೆ: ಡಿಕೆಶಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.25: ಗೃಹ ಸಚಿವ ಪರಮೇಶ್ವರ್ ಅವರು ರಾಜಣ್ಣ ಅವರಿಗೆ ನ್ಯಾಯ ಕೊಡಿಸುವ ಕೆಲಸ ಮಾಡುತ್ತಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ರಾಜಣ್ಣ ನೀಡಿದ ಮನವಿಗೆ ಸಂಬಂಧಿಸಿದಂತೆ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಗೃಹ ಸಚಿವರು ನಮ್ಮ ಪಕ್ಷದ ಹಿರಿಯ ಸಚಿವರು, ಪಕ್ಷದ ಅಧ್ಯಕ್ಷರು ಸಹ ಆಗಿದ್ದವರು.



ಅವರು ಸದನದಲ್ಲಿ ತನಿಖೆ ಮಾಡುತ್ತೇವೆ ಎಂದಿದ್ದರು. ಸಿಎಂ ಸಿದ್ದರಾಮಯ್ಯನವರು ಸಹ ತನಿಖೆ ನಡೆಸುವುದಾಗಿ ಹೇಳಿದ್ದರು ಎಂದರು.

ಯಾರಿಗೆಲ್ಲ ಅನ್ಯಾಯ ಆಗಿದೆಯೋ ಅವರಿಗೆ ನ್ಯಾಯ ಕೊಡಿಸೋ ಕೆಲಸ ಪರಮೇಶ್ವರ್ ಮಾಡುತ್ತಾರೆ ಎಂದು ತಿಳಿಸಿದರು.

ಹನಿಟ್ರ್ಯಾಪ್ ಪ್ರಕರಣ ಪಕ್ಷಕ್ಕೆ ಮುಜುಗರ ತಂದಿದೆಯಾ ಎಂಬ ಪ್ರಶ್ನೆಗೆ, ಇದನ್ನು ನನಗೆ ಕೇಳಬೇಡಿ. ನೀವು ಯಾರನ್ನು ಕೇಳಬೇಕೋ ಎಂದುಕೊಂಡಿದ್ದೀರೋ ಅವರನ್ನು ಕೇಳಿ ಎನ್ನುವ ಮೂಲಕ ಡಿಕೆಶಿ ಅಡ್ಡಗೋಡೆ ಮೇಲೆ ದೀಪ ಇಟ್ಟಂತೆ ಮಾತನಾಡಿದರು.

## ಹನಿಟ್ರ್ಯಾಪ್ ಪ್ರಕರಣ: ಉನ್ನತ ಮಟ್ಟದ ತನಿಖೆಗೆ ರಾಜಣ್ಣ ಮನವಿ





ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.25: ರಾಜ್ಯ ರಾಜಕಾರಣ ಮಾತ್ರವಲ್ಲದೆ ರಾಷ್ಟ್ರಮಟ್ಟದಲ್ಲೂ ಭಾರಿ ಸದ್ದು ಮಾಡುತ್ತಿರುವ ಹನಿಟ್ರ್ಯಾಪ್ ಪ್ರಕರಣದ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಸಹಕಾರ ಸಚಿವ ಕೆಎನ್ ರಾಜಣ್ಣ ಅವರು ಮಂಗಳವಾರ ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಿದ್ದಾರೆ.

ಇಂದು ಸಂಜೆ ಬೆಂಗಳೂರಿನ ಸದಾಶಿವನಗರದಲ್ಲಿರುವ ಗೃಹ ಸಚಿವ ಪರಮೇಶ್ವರ ಅವರ ನಿವಾಸಕ್ಕೆ ಭೇಟಿ ನೀಡಿದ ರಾಜಣ್ಣ ಅವರು, ಹನಿಟ್ರ್ಯಾಪ್ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸುವಂತೆ ಲಿಖಿತ ಮನವಿ ನೀಡಿದರು.

ಬಳಿಕ ರಾಜಣ್ಣ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ

(2ನೇ ಪುಟ ನೋಡಿ)

## ಜಿಲ್ಲೆಯಾದ್ಯಂತ ಹೆಚ್ಚು ಹೆಚ್ಚು ಕೃಷಿ ಹೊಂಡ ನಿರ್ಮಿಸಿ:ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ :ಮಾ.25: ರೈತರಿಗೆ ಹಾಗೂ ಅಂತರ್ಜಲ ಹೆಚ್ಚಳಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಸಾವಿರಾರು ಕೃಷಿ ಹೊಂಡಗಳನ್ನು ನಿರ್ಮಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಾ, ಬಡ, ಮಧ್ಯಮ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಕೃಷಿಕರಿಗೆ ಅನುಕುಲವಾಗುವ ನಿಟ್ಟಿನಲ್ಲಿ ಸರಕಾರದ ಅನುದಾನವನ್ನು ಬಳಸಿ ಜಿಲ್ಲೆಯಾದ್ಯಂತ ಪ್ರತಿವರ್ಷ ಒಂದು ಸಾವಿರ ಕೃಷಿ ಹೊಂಡಗಳನ್ನು ನಿರ್ಮಿಸುವಂತೆ ಕೃಷಿ ಇಲಾಖೆ ಜಂಟಿ ನಿರ್ದೇಶಕರಾದ ಜಿಯಾವುಲ್ಲಾ ಅವರಿಗೆ ತಿಳಿಸಿದರು.

ರೈತ ಸಂಪರ್ಕ ಕೇಂದ್ರ ಅಧಿಕಾರಿಗಳು, ಜಲಾನಯನ ಅಧಿಕಾರಿಗಳು ಈ ನಿಟ್ಟಿನಲ್ಲಿ ಕ್ರಿಯಾಶೀಲರಾಗಿ ರೈತರಲ್ಲಿ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಆರ್ಥಿಕತೆಗೆ ಬೆನ್ನೆಲುಬು: ಸಚಿವ ವೆಂಕಟೇಶ

ರೋಗಗಳ ನಿಯಂತ್ರಣ, ಪಶುಗಳ ಆರೋಗ್ಯ ರಕ್ಷಣೆ ಮತ್ತು ಮೀನುಗಾರಿಕೆ ವಲಯದ ಸುಸ್ಥಿರ ಅಭಿವೃದ್ಧಿ ಸರ್ಕಾರದ ಆದ್ಯತೆಗಳಾಗಿವೆ. ಇತ್ತೀಚಿನ ವರದಿಗಳ ಪ್ರಕಾರ, ಜೂನೋಟಿಕ್ ರೋಗಗಳಿಂದಾಗಿ ಕರ್ನಾಟಕವು ಪ್ರತಿ ವರ್ಷ ಗಮನಾರ್ಹ ಆರ್ಥಿಕ ನಷ್ಟವನ್ನು ಅನುಭವಿಸುತ್ತಿದೆ. ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದ ಯಶಸ್ಸಿಗೆ ಮತ್ತು ಈ ಸವಾಲುಗಳನ್ನು ಎದುರಿಸಲು ಯುವ ವೃತ್ತಿಪರರ ಪಾತ್ರ ಪ್ರಮುಖವಾಗಿದೆ ಎಂದರು.

ಪಶು ಸಂಗೋಪನೆ ಮತ್ತು ಮೀನುಗರಿಕೆ ವಲಯಗಳ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಒತ್ತು ನೀಡುತ್ತಿದೆ. ಪಶು ಭಾಗ್ಯ, ಕ್ಷೀರ ಭಾಗ್ಯ ಮತ್ತು ಮೀನು ಸಿರಿ ಮುಂತಾದ ಯೋಜನೆಗಳನ್ನು ಜಾರಿಗೆ ತಂದಿದ್ದು, ಈ ಕಾರ್ಯಕ್ರಮಗಳ ಯಶಸ್ಸಿಗೆ ನಿಮ್ಮಂತಹ ಯುವ ವೃತ್ತಿಪರರ ಸಹಕಾರ ಅತ್ಯಗತ್ಯವಾಗಿದೆ. ಪದವೀಧರರು ತಮ್ಮ ಸಂಬಂಧಿತ ಕ್ಷೇತ್ರಗಳಲ್ಲಿ ಮುಂಚೂಣಿಯಲ್ಲಿರಲು ನಿರಂತರವಾಗಿ ವಿಕಸನಗೊಳ್ಳಬೇಕು. ನೈಜ ಪ್ರಪಂಚದ ಉದ್ಯಮದ ಪ್ರಸ್ತುತತೆಯಿಂದ ತುಂಬಿರಬೇಕು ಮತ್ತು ಉದ್ಯಮಶೀಲತೆಯ ಮನೋಭಾವವನ್ನು ಹೊಂದಿರಬೇಕು. ನೀವು ಕೇವಲ ಪದವೀಧರರಲ್ಲ, ಬದಲಿಗೆ ಕರ್ನಾಟಕದ ಭವಿಷ್ಯದ ಶಿಲ್ಪಿಗಳು. ನಿಮ್ಮ ಜ್ಞಾನದಿಂದ ರಾಜ್ಯದ ಭವಿಷ್ಯ ಉಜ್ವಲವಾಗಲಿ ಎಂದು ಹರಿಸಿದರು.

ಬ್ರಿಟಿಷ್ ಪದ್ದತಿ ಬದಲಾಗಲಿ: ವಿಶ್ವವಿದ್ಯಾಲಯಗಳ ಘಟಿಕೋತ್ಸವದಲ್ಲಿ ಬ್ರಿಟಿಷ್ ಕಾಲದ ಪದ್ಧತಿಗಳನ್ನು ಕೈಬಿಟ್ಟು ಬದಲಾವಣೆ ತಂದುಕೊಳ್ಳಬೇಕು. ಸಮಾರಂಭದಲ್ಲಿ ಸೇರುವವರು ಕನ್ನಡಿಗರು. ಇಂಗ್ಲಿಷನಲ್ಲಿ ಭಾಷಣ ಮಾಡಿದರೆ ಯಾವ ಪ್ರಯೋಜವಿದೆ. ಹೀಗಾಗಿ ಮುಂದಿನ ಘಟಿಕೋತ್ಸವದಲ್ಲಿ ಬದಲಾವಣೆಗೆ ಕುಲಪತಿಗಳಿಗೆ ಸೂಚಿಸಿದ್ದು, ಇದಕ್ಕೆ ಅವರು ಸಮ್ಮತಿ ನೀಡಿದ್ದಾರೆ ಎಂದು ಸಚಿವರು ಹೇಳಿದರು. ಕುಲಪತಿ ಪ್ರೊ. ಕೆ.ಸಿ ವೀರಣ್ಣ ಅವರು ಸಂಕ್ಷಿಪ್ತ ವರದಿ ವಾಚಿಸಿದರು. ಕುಲಸಚಿವ ಪಿ.ಟಿ ರಮೇಶ, ಸಂಶೋಧನಾ ನಿರ್ದೇಶಕ ಡಾ. ಬಿ.ವಿ ಶಿವಪ್ರಕಾಶ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ವಿಶ್ರಾಂತ ಕುಲಪತಿ ಪ್ರೊ. ಹೊನ್ನಪ್ಪಗೊಳ ಸೇರಿದಂತೆ ಆಡಳಿತ ಮಂಡಳಿಯ ಸದಸ್ಯರು, ಅಕಾಡೆಮಿಕ್ ಕೌನ್ಸಿಲ್ ಸದಸ್ಯರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

ಘಟಿಕೋತ್ಸವದಲ್ಲಿ ಒಟ್ಟು 634 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಇದರಲ್ಲಿ 417 ಸ್ನಾತಕ ಪದವೀಧರರು, 187 ಸ್ನಾತಕೋತ್ತರ ಹಾಗೂ 88 ಡಾ–ಕ್ಟರೇಟ್ ಪದವಿಧರರು ಸೇರಿದ್ದರು. 127 ಪದವೀಧರರು ಉಪಸ್ಥರಾಗಿ ಪದವಿ ಸ್ವೀಕರಿಸಿದರು. ಜತೆಗೆ ಒಟ್ಟು 46 ಪ್ರತಿಭಾನ್ವಿತ ಸ್ನಾತಕ, ಸ್ನಾತಕೋತ್ತರ ಮತ್ತು ಡಾಕ್ಟರೇಟ್ ಪದವಿಧರರಿಗೆ ಚಿನ್ನದ ಪದಕಗಳನ್ನು ನೀಡಿ ಗೌರವಿಸಲಾಯಿತು. ಅದರಲ್ಲಿ 35 ವಿವಿ ಪದಕಗಳುಮತ್ತು 61 ಪ್ರಾಯೋಜಿತ ಚಿನ್ನದ ಪದಕಗಳು ಸೇರಿದ್ದವು. ಪಶು ಸಂಗೋಪನೆ ಸಚಿವರಾದ ಸಹ ಕುಲಾಧಿಪತಿ ಕೆ. ವೆಂಕಟೇಶ್, ಪುಣೆ ಐಸಿಎಂಆರ್– ರಾಷ್ಟ್ರೀಯ ವೈರಾಲಜಿ ಸಂಸ್ಥೆಯ ನಿರ್ದೇಶಕ ಡಾ. ನವೀನಕುಮಾರ ಮತ್ತು ಕುಲಪತಿ ಕೆ.ಸಿ ವೀರಣ್ಣ ಸಾಥ್ ನೀಡಿದರು.

### ಹೊಂಡ ನಿರ್ಮಿಸಿ:ಸಚಿವ ಈಶ್ವರ ಖಂಡ್ರೆ

ಜಾಗೃತಿ ಮೂಡಿಸಿ ರೈತರ ಜಮೀನಿನಲ್ಲಿ ಹೆಚ್ಚಿನ ಕೃಷಿ ಹೊಂಡಗಳನ್ನು ನಿರ್ಮಿಸಬೇಕೆಂದು ಸಚಿವರು ತಿಳಿಸಿದರು. ಮಳೆ ಕಡಿಮೆಯಾಗಿ ನೀರಿನ ಅಭಾವವಾದಲ್ಲಿ ನೀರು ಸಂಗ್ರಹಣೆಗೆ ರೈತರಿಗೆ ಅನುಕೂಲವಾಗುತ್ತದೆಂದರು. ಈ ವರ್ಷ 334 ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆ ಎಂದು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು.

ತೊಗರಿ ಬೆಳೆ ಹಾನಿ: ಪಕ್ಕದ ಕಲ್ಬುರ್ಗಿ ಜಿಲ್ಲೆಯಲ್ಲಿ ನೆಟ್ಟೆ ರೋಗದಿಂದ ತೊಗರಿ ಬೆಳೆಗೆ ಸಾಕಷ್ಟು ಹಾನಿಯಾಗಿದ್ದು, ಬೀದರ ಜಿಲ್ಲೆಯಲ್ಲಿ ಒಣ ಬೇರು ರೋಗದಿಂದಾಗಿರುವ ಹಾನಿ (ಆಡಿಥಿ ಡಿಂಂಣ ಡಿಂಣ) ಬಗ್ಗೆ ತಕ್ಷಣವೇ ವರದಿ ಸಲ್ಲಿಸುವಂತೆ ಕೃಷಿ ಜಂಟಿ ನಿರ್ದೇಶಕರಿಗೆ ಸೂಚಿಸಿದರು.70 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಸಂಭವಿಸುವ ಹಿನ್ನಲೆಯಲ್ಲಿ: ಬೇಸಿಗೆ ಹಿನ್ನೆಲೆಯಲ್ಲಿ ಜಿಲ್ಲೆಯ ಯಾವುದೇ ಜನವಸತಿ ಪ್ರದೇಶದಲ್ಲಿ ಜನರಿಗೆ ಹಾಗೂ ಜಾನುವಾರುಗಳಿಗೆ ಮುನ್ನೆಚ್ಚರಿಕೆ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಎಲ್ಲಿಯಾದರೂ ಸಮಸ್ಯೆ ಕಂಡು ಬಂದಲ್ಲಿ 24 ಗಂಟೆಗಳಲ್ಲಿ ಬಗೆಹರಿಸುವಂತೆ ಕಟ್ಟುನಿಟ್ಟಾಗಿ ಸೂಚಿಸಿದರು.

ಔರಾದ್ ತಾಲ್ಲೂಕಿನ ರಕ್ಷಾಳ ಹಾಗೂ ಕರ್ಕಿಹಾಳ ಗ್ರಾಮ, ಭಾಲ್ಕಿ ತಾಲ್ಲೂಕಿನ ಜೈನಾಪುರ ಹಾಗೂ ಧಾರಜವಾಡಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿದ ಬಗ್ಗೆ ಗ್ರಾಮಸ್ಥರು ತಮಗೆ ಅಹವಾಲು ನೀಡಿದ ತಕ್ಷಣವೇ ಬಗೆಹರಿಸುವಂತೆ ಸಚಿವರು ತಿಳಿಸಿದರು.

ಸಧ್ಯ 70 ಗ್ರಾಮಗಳಲ್ಲಿ ನೀರಿನ ಸಮಸ್ಯೆ ಸಂಭವಿಸುವ ಮುನ್ನೆಚ್ಚರಿಕೆಯಾಗಿ ಕ್ರಮಗಳನ್ನು ಕೈಗೊಳ್ಳಲಾಗಿದೆ. ಕಮಲನಗರದ ಐದು ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಉಳಿದೆಡೆ ಕೊಳವೆ ಬಾವಿಗಳನ್ನು ಸಹ ಬಳಸಲಾಗಿದೆ ಎಂದು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು.ಪತ್ರಿಕೆಗಳ ವರದಿಗೆ ಸ್ಪಂದಿಸಿ: ಪತ್ರಿಕೆಗಳಲ್ಲಿ ಪ್ರಕಟಗೊಳ್ಳುವ ಸಮಸ್ಯೆಯಾತ್ಮಕ ವರದಿಗಳಿಗೆ ಅಧಿಕಾರಿಗಳು ತಕ್ಷಣವೇ ಸ್ಪಂದಿಸಿ ಸಮಸ್ಯೆಯನ್ನು ಪರಿಶೀಲಿಸಿ ಬಗೆಹರಿಸುವಂತೆ ಸಚಿವರು ಅಧಿಕಾರಿಗಳಿಗೆ ತಿಳಿಸಿದರು.

ಎಸ್.ಎಸ್.ಎಲ್.ಸಿ. ಪರೀಕ್ಷೆಗಳು ಆರಂಭವಾಗಿದ್ದು, ಈ ಬಾರಿ ಉತ್ತಮ ಫಲಿತಾಂಶ ಬರುವ ನಿರೀಕ್ಷೆಯಲ್ಲಿ ಅದಿಕಾರಿಗಳು ಇದ್ದಾರೆ. ಶೇ. 70 ರಷ್ಟು ಬರಲಿದೆಯೆಂದು ಸಚಿವರು ಆಶಿಸಿದರು. ಕೆ.ಕೆ.ಆರ್.ಡಿ.ಬಿಯ ಮೈಕ್ರೋ ಹಾಗೂ ಮ್ಯಾಕ್ರೊ ಅನುದಾನದ ಕಾಮಗಾರಿಗಳಲ್ಲಿ ಗುಣಮಟ್ಟದ ಕಾಪಾಡುವಂತೆ ಸಚಿವರು ಸೂಚಿಸಿದರು.

ಈ ಸಭೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಎಂ.ಎಂ.ವಾನತಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಕ್ರಮ:ಸಚಿವ ಈಶ್ವರ ಖಂಡ್ರೆ

ಅಭಿವೃದ್ಧಿ ನಿಗಮದ 204–25ನೆಯ ಸಾಲಿನ ಗಂಗಾಕಲ್ಯಾಣ ಯೋಜನೆಯಡಿ ಕೊಳವೆ ಬಾವಿ ಕೊರೆಸುವ ಕಾರ್ಯಕ್ಕೆ ಮಂಗಳವಾರ ಚಾಲನೆ ನೀಡಿ ಅವರು ಮಾತನಾಡಿದರು.

ತಾಲೂಕಿನಲ್ಲಿ ಸರಕಾರದ ವಿವಿಧ ಯೋಜನೆಯಡಿ ಕೋಟ್ಯಾಂತರ ರೂ ಅನುದಾನದಲ್ಲಿ ಕಾಲುವೆ ಆಧುನೀಕರಣ, ಕೆರೆ, ಬಾಂದಾರ, ಬ್ರಿಜ್‌ಕಂ ಬ್ಯಾರೇಜ ನಿರ್ಮಿಸಿ ಮಳೆಯಾಶ್ರಿತ ಭೂಮಿಯನ್ನು ನೀರಾವರಿ ಪ್ರದೇಶವನ್ನಾಗಿಸುವ ಪ್ರಯತ್ನ ಮಾಡಲಾಗುತ್ತಿದೆ. ಇದರಿಂದ ರೈತರು ನೀರಾವರಿ ಸೌಲಭ್ಯ ಸದ್ಬಳಕೆ ಮಾಡಿಕೊಂಡು ವರ್ಷದಲ್ಲಿ ಮರ್‍ನಾಲ್ಕು ಬೆಳೆಗಳನ್ನು ಬೆಳೆದು ಆರ್ಥಿಕವಾಗಿ ಸಬಲರಾಗುತ್ತಿದ್ದಾರೆ ಎಂದರು.

ಜತೆಗೆ ಸರಕಾರದ ವಿವಿಧ ಗಂಗಾಕಲ್ಯಾಣ ಯೋಜನೆಯಡಿ ಅರ್ಹ ರೈತರನ್ನು ಆಯ್ಕೆ ಮಾಡಿ ಬೊರವೇಲ್ ಕೊರೆಸಿ ಕೊಡಲಾಗುತ್ತಿದೆ. ರೈತರು ಸರಕಾರದ ಯೋಜನೆಗಳನ್ನು ಸದುಪಯೋಗ ಪಡಿಸಿಕೊಂಡು ಆರ್ಥಿಕವಾಗಿ ಪ್ರಗತಿ ಸಾಧಿಸಬೇಕು ಎಂದರು. ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದಡಿ ತಾಲೂಕಿಗೆ ಹೆಚ್ಚುವರಿಯಾಗಿ 46 ಕೊಳವೆ ಬಾವಿ ಮಂಜೂರು ಮಾಡಿಸಿದ್ದೇನೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಕೊಳವೆ ಬಾವಿ ಮಂಜೂರು ಮಾಡಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪುರಸಭೆ ಅಧ್ಯಕ್ಷೆ ಶಶಿಕಲಾ ಅಶೋಕ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಮಾಜಿ ಅಧ್ಯಕ್ಷ ಬಸವರಾಜ ವಂಕೆ, ಪ್ರಮುಖರಾದ ಚಂದ್ರಶೇಖರ ವಂಕೆ, ಕುಪೇಂದ್ರ ವಂಕೆ, ಅಶೋಕ ವಂಕೆ, ರಾಜಕುಮಾರ ಬೆಲ್ಲಾಳೆ, ಸತೀಶ ಬಾಮ್ನೆ, ವೀರಶೈವ ಲಿಂಗಾಯತ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಅರುಣ ಹಡಗಲಿ ಸೇರಿದಂತೆ ಹಲವರು ಇದ್ದರು.

### ಮಟ್ಟದ ತನಿಖೆಗೆ ರಾಜಣ್ಣ ಮನವಿ

ಪರಮೇಶ್ವರ ಅವರು, ಈ ವಿಚಾರದಲ್ಲಿ ನಾನು ದೂರು ಸ್ವೀಕರಿಸಲು ಸಾಧ್ಯವಿಲ್ಲ. ಪೊಲೀಸ್ ಠಾಣೆಯಲ್ಲೇ ದೂರು ಸಲ್ಲಿಸಬೇಕು. ನಾನು ಮನವಿ ಮಾತ್ರ ಸ್ವೀಕರಿಸಿದ್ದೇನೆ. ಈ ಮನವಿ ಆಧಾರದ ಮೇಲೆ ಕಾನೂನು ತಜ್ಞರ ಜೊತೆ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿ ಅಂತಿಮ ತೀರ್ಮಾನ ತೆಗೆದುಕೊಳ್ಳುತ್ತೇವೆ ಎಂದರು.

ರಾಜಣ್ಣ ಅವರು ಸದನದಲ್ಲಿ ತಮಗೂ ಹನಿಟ್ರ್ಯಾಪ್ ಮಾಡಲು ಯತ್ನಿಸಲಾಗಿದೆ. ಈ ಬಗ್ಗೆ ಗೃಹ ಸಚಿವರಿಗೆ ಮನವಿ ಕೊಡುತ್ತೇನೆ ಎಂದು ಹೇಳಿದ್ದರು. ಇದು ನಿಜಾ ಆಗಿದ್ರೆ ಉನ್ನತ ಮಟ್ಟದ ತನಿಖೆ ಮಾಡುವುದಾಗಿ ಹೇಳಿದ್ದೆ. ಆದ್ರೆ, ರಾಜಣ್ಣ ಅವರಿಗೆ ಪೂರ್ವ ನಿಯೋಜಿತ ಕೆಲಸದ ನಡುವೆ ನನಗೆ ಮನವಿ ಕೊಡಲು ಆಗಲಿಲ್ಲ. ಇಂದು ನನಗೆ ಮನವಿ ಕೊಟ್ಟಿದ್ದಾರೆ. ವಿಧಾನಸಭೆಯಲ್ಲ ಪ್ರಸ್ತಾಪಿಸಿದಂತೆ ಮನವಿ ಕೊಟ್ಟಿದ್ದು, ಮುಂದಿನ ಕ್ರಮದ ಬಗ್ಗೆ ಸಿಎಂ ಜೊತೆ ಚರ್ಚೆ ಮಾಡುತ್ತೇವೆ ಎಂದರು.

ಬಳಿಕ ಮಾತನಾಡಿದ ರಾಜಣ್ಣ ಅವರು, ಹನಿಟ್ರ್ಯಾಪ್ ಸಂಬಂಧ ಸದನದಲ್ಲಿ ನನ್ನ ಹೆಸರನ್ನು ಪ್ರಸ್ತಾಪಿಸಲಾಗಿತ್ತು. ಆ ಕಾರಣದಿಂದ ನಾನು ದೂರು ಸಲ್ಲಿಸಿದ್ದೇನೆ. ಈ ರೀತಿಯ ಕೆಟ್ಟ ಚಾಳಿ ಸಾರ್ವಜನಿಕ ಜೀವನದಲ್ಲಿ ಮುಂದುವರೆಯಬಾರದು ಎಂದರು.

ದೂರು ನೀಡಿದರೆ ತನಿಖೆ ನಡೆಸುವುದಾಗಿ ಗೃಹ ಸಚಿವರು ಭರವಸೆ ನೀಡಿದ್ದರು. ಅದರಂತೆ ಇಂದು ನಾನು ದೂರು ಸಲ್ಲಿಸಿದ್ದೇನೆ ಎಂದರು.

### ಸಂಜೆ 'ಹನಿ' ಸರ್ಕಾರ : ನಿಖಿಲ್

ಮುಂದಿನ ದಿನಗಳಲ್ಲಿ ನಾಡಿನ ಜನರೇ ನಟ್ಟು, ಬೋಲ್ಟು ಟೈಟು ಮಾಡುತ್ತಾರೆ ಎಂದು ಟೀಕಿಸಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ 2 ವರ್ಷದಲ್ಲಿ 2.25 ಲಕ್ಷ ಕೋಟಿ ರೂ. ಸಾಲ ಮಾಡಿದೆ. ಮಾಡಿರುವ ಸಾಲವನ್ನು ತೀರಿಸುವ ಸಾಲ ಮಾಡಿರುವ ಸರ್ಕಾರವಿದೆ. ಪ್ರತಿಯೊಬ್ಬರ ಮೇಲೆ 14 ಸಾವಿರ ರೂ. ಸಾಲದ ಹೊರೆಯನ್ನು ಹೊರೆಸಿದೆ ಎಂದು ಆರೋಪಿಸಿದರು.ಸ್ಮಾರ್ಟ್ ಮೀಟರ್ : ಮರು ಟೆಂಡರ್ ಕರೆಯಲು ನಿಖಿಲ್ ಆಗ್ರಹರಾಜ್ಯದಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆ ವಿಚಾರದಲ್ಲಿ ಅಕ್ರಮವಾಗಿದೆ ಎಂದು ಆರೋಪಿಸಿದ ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಮರು ಟೆಂಡರ್ ಕರೆಯಬೇಕು ಎಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದರು. ತಾಂತ್ರಿಕ ಹಾಗೂ ಆರ್ಥಿಕ ಅರ್ಹತೆ ಇಲ್ಲದ ಕಂಪನಿಗೆ ಸ್ಮಾರ್ಟ್ ಮೀಟರ್ ಅಳವಡಿಕೆ ಟೆಂಡರ್ ನೀಡಲಾಗಿದೆ ಎಂದು ಆರೋಪಿಸಿದರು.

ಟೆಂಡರ್ ನೀಡುವ ವಿಚಾರದಲ್ಲಿ ಪಾರದರ್ಶಕತೆ ಕಾಯ್ದೆಯ ನಿಯಮಗಳನ್ನು ಉಲ್ಲಂಘಿಸಲಾಗಿದೆ. ಹಲವು ಆಕ್ರಮಗಳು ನಡೆದಿವೆ ಎಂದು ದೂರಿದರು.

ಕೇಂದ್ರ ಇಂಧನ ಇಲಾಖೆ ಆರ್‌ಡಿಎಸ್‌ಎಸ್ ಯೋಜನೆಯಡಿ 3 ಲಕ್ಷ ಕೋಟಿ ರೂ.ಗೂ ಹೆಚ್ಚು ಹಣವಿಟ್ಟಿದ್ದು ರಾಜ್ಯಗಳಿಗೆ ಸಹಾಯಧನ, ಅನುದಾನ, ಸಾಲ ನೀಡುತ್ತಿದೆ. ಈಗಾಗಲೇ 19.79 ಕೋಟಿ ಸ್ಮಾರ್ಟ್ ಮೀಟರ್ ರಾಷ್ಟದಲ್ಲಿ ಅಳವಡಿಕೆಯಾಗಿದೆ. ಆದರೆ ರಾಜ್ಯಸರ್ಕಾರ ಈ ಯೋಜನೆಯಿಂದ ಹೊರಬಂದಿದೆ. ಯಾವ ಕಾರಣಕ್ಕಾಗಿ ಈ ಯೋಜನೆಯಿಂದ ಹೊರಬಂದಿದೆ ಎಂಬುದನ್ನು ಇಂಧನ ಸಚಿವರು ಹಾಗೂ ಇಲಾಖಾಧಿಕಾರಿಗಳು ಉತ್ತರಿಸಬೇಕು ಎಂದು ಒತ್ತಾಯಿಸಿದರು.

ಇದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಸಿಂಗಲ್ ಫೇಸ್ ಸ್ಮಾರ್ಟ್ ಮೀಟರ್ ದರ ಮಾರುಕಟ್ಟೆಯಲ್ಲಿ 900 ರೂ. ಇದೆ. ಕೇರಳ, ಆಸ್ಸಾಂ, ತೆಲಂಗಾಣ, ಹಿಮಾಚಲ ಪ್ರದೇಶದಲ್ಲಿ ಇದೇ ದರ ಇದೆ. ಆದರೆ ಕರ್ನಾಟಕದಲ್ಲಿ 4,998 ರೂ. ಇದೆ. ಸಿಂಗಲ್ ಫೇಸ್ –2 ಸ್ಮಾರ್ಟ್ ಮೀಟರ್‌ನ ಮಾರುಕಟ್ಟೆ ದರ 2.400 ರೂ. ಇದ್ದು, ರಾಜ್ಯದಲ್ಲಿ ಸಾವಿರ ರೂ. ಇದೆ. ಅದೇ ರೀತಿ ತ್ರಿ ಫೇಸ್ ಮೀಟರ್ ದರ 2,500 ರೂ. ಮಾರುಕಟ್ಟೆ ದರವಿದ್ದರೆ 28 ಸಾವಿರ ರೂ. ರಾಜ್ಯದಲ್ಲಿದೆ ಎಂದು ಮಾಹಿತಿ ನೀಡಿದರು.

ಛತ್ತೀಸ್‌ಗಢದಲ್ಲಿ ಸ್ಮಾರ್ಟ್ ಮೀಟರ್ ಅಳವಡಿಕೆಗೆ ಶುಲ್ಕ ವಿಧಿಸುತ್ತಿಲ್ಲ. ನಿರ್ವಹಣೆ ಶುಲ್ಕ 57 ರೂ. ಇದೆ. ಮಾಸಿಕ ನಿರ್ವಹಣಾ ವೆಚ್ಚ 68.4 ರೂ. ಇದೆ. ತೆಲಂಗಾಣದಲ್ಲಿ 66.50 ರೂ.ಗಳಿದ್ದರೆ ಕರ್ನಾಟಕದಲ್ಲಿ ಸ್ಮಾರ್ಟ್ ಮೀಟರ್ ನಿರ್ವಹಣಾ ವೆಚ್ಚ ಪ್ರತಿ ತಿಂಗಳು 71 ರೂ. ಇದೆ. ಪ್ರತಿ ಗ್ರಾಹಕರಿಗೆ ಇದರಿಂದ 8,520 ರೂ. ಹೊರೆಯಾಗಲಿದೆ ಎಂದು ಆರೋಪಿಸಿದರು.

ಜಾಗತಿಕ ಟೆಂಡರ್ ಕರೆದಾಗ ಕನಿಷ್ಠ 45 ದಿನ ಸಮಯ ನೀಡಲಾಗುತ್ತದೆ. ಆದರೆ 34 ದಿನಕ್ಕೆ ಸ್ಮಾರ್ಟ್ ಮೀಟರ್ ಟೆ–ಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿದೆ. ದಾವಣಗೆರೆ ಮೂಲದ ರಾಜಶ್ರೀ ಎಲೆಕ್ಟ್ರಿಕಲ್ಸ್ ಗೆ ಟೆಂಡರ್ ನೀಡಲಾಗಿದೆ. ಅದು ಕಂಬ ನಿರ್ಮಾಣ ಮಾಡುವ ಸಂಸ್ಥೆಯಾಗಿದೆ. ಹಣಕಾಸು ವಿಚಾರದಲ್ಲೂ ಅರ್ಹತೆ ಇಲ್ಲ, ಅಲ್ಲದೆ ಈ ಟೆಂಡರ್ ಬಗ್ಗೆ ಸಾರ್ವಜನಿಕ ಪ್ರಕಟಣೆಯೂ ನೀಡಿಲ್ಲ ಎಂದು ವಾಗ್ದಾಳಿ ನಡೆಸಿದರು.ಸ್ಮಾರ್ಟ್ ಮೀಟರ್ ಟೆಂಡರ್ ಅಳವಡಿಕೆ ಮೌಲ್ಯ 4,800 ಕೋಟಿ ರೂ. ಆಗಿದ್ದು, ಇದರ ಎರಡರಷ್ಟು ವಹಿವಾಟನ್ನು ಟೆಂಡರ್ ಪಡೆಯುವ ಸಂಸ್ಥೆ ಹೊಂದಿರಬೇಕು. ಶೇ.30 ರಷ್ಟು ಹಣಕಾಸು ಸಾಮರ್ಥ್ಯ ಹೊಂದಿರಬೇಕು ಎಂದಿದೆ. ಆ ಸಾಮರ್ಥ ಟೆಂಡರ್ ಪಡೆದ ಸಂಸ್ಥೆಗಿಲ್ಲ. ಸ್ಮಾರ್ಟ್ ಮೀಟರ್ ಸಾಫ್ಟ್‌ವೇರ್ ನಿರ್ವಹಣೆಗೆ ಉತ್ತರಪ್ರದೇಶದಲ್ಲಿ ಕಪ್ಪು

ಪಟ್ಟಿಗೆ ಸೇರಿದ ಕಂಪನಿಗೆ ರಾಜಶ್ರೀ ಎಲೆಕ್ಟ್ರಿಕಲ್ಸ್ ಉಪಗುತ್ತಿಗೆ ನೀಡಿದೆ.ಇಂಧನ ಇಲಾಖೆಯಲ್ಲಿ ಐಟಿ ಘಟಕವಿಲ್ಲವೇ?, ಪರಿಣಿತ ಎಂಜಿನಿಯರ್‌ಗಳಿಲ್ಲವೇ? ಎಂದು ಪ್ರಶ್ನಿಸಿದ ಅವರು, 15,500 ಕೋಟಿಗಳಷ್ಟು ಲೂಟಿಯಾಗಿದೆ. ಪಾರದರ್ಶಕವಾಗಿ ಮರು ಟೆಂಡರ್ ಕರೆಯಬೇಕು. ಇಲ್ಲದಿದ್ದರೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ್ ರೊಂದಿಗೆ ಮಾತನಾಡಿ ದೊಡ್ಡಮಟ್ಟದಲ್ಲಿ ನಡೆದಿರುವ ಸ್ಮಾರ್ಟ್ ಮೀಟರ್ ಅಕ್ರಮವನ್ನು ತಾರ್ಕಿಕ ಹಂತಕ್ಕೆ ಕೊಂಡೊಯ್ಯಲಾಗುವುದು ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ವಿಧಾನಪರಿಷತ್ ಸದಸ್ಯ ಜವರಾಯಿಗೌಡ, ಜೆಡಿಎಸ್ ಮಾಧ್ಯಮ ಸಂಯೋಜಕ ಎಲ್. ಗಂಗಾಧರ ಮೂರ್ತಿ, ರಾಜ್ಯ ವಕ್ತಾರ ಎಂ.ಎನ್.ದೇವರಾಜು ಮತ್ತಿತರರು ಉಪಸ್ಥಿತರಿದ್ದರು.


## ಯುಗಾದಿ ಹಾಗೂ ರಂಜಾನ್ ಹಬ್ಬದ ಪ್ರಯುಕ್ತ ವಿಶೇಷ ರೈಲು ಸಂಚಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.25:ಯುಗಾದಿ ಮತ್ತು ರಂಜಾನ್ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಸರಿದೂಗಿಸಲು ಹಾಗೂ ಪ್ರಯಾಣಿಕರ ಬೇಡಿಕೆ ಮೇರೆಗೆ ಕೆಳಕಂಡ ದಿನಾಂಕಗಳಂದು ಕಲಬುರಗಿ ಹಾಗೂ ಬೆಂಗಳೂರಿನ ನಡುವೆ ಎರಡು ಹೆಚ್ಚುವರಿ ವಿಶೇಷ ರೈಲು ಸಂಚರಿಸಲಿವೆ ಎಂದು ಕೇಂದ್ರ ರೈಲ್ವೆ ವಲಯದ ಸೋಲಾಪುರ ವಿಭಾಗದ ಕಚೇರಿಯ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಎಸ್‌ಎಂವಿಟಿ ಬೆಂಗಳೂರು–ಕಲಬುರಗಿ ವಿಶೇಷ ಎಕ್ಸ್‌ಪ್ರೆಸ್ ರೈಲು (ರೈಲು ಸಂಖ್ಯೆ 06519) ಮಾರ್ಚ್ 28ರಂದು ಶುಕ್ರವಾರ ರಾತ್ರಿ 9.15ಕ್ಕೆ ಎಸ್‌ಎಂವಿಟಿ ಬೆಂಗಳೂರಿನಿಂದ ಹೊರಟು, ಮರುದಿನ ಬೆಳಿಗ್ಗೆ 7.40ಕ್ಕೆ ಕಲಬುರಗಿಗೆ ತಲುಪಲಿದೆ. ನಂತರ ಈ ವಿಶೇಷ (ರೈಲು ಸಂಖ್ಯೆ 06520) ಮಾರ್ಚ್ 29ರಂದು ಶನಿವಾರ ಬೆಳಿಗ್ಗೆ 9.35ಕ್ಕೆ ಕಲಬುರಗಿಯಿಂದ ಹೊರಟು ಅದೇ ದಿನ ರಾತ್ರಿ 8ಕ್ಕೆ ಎಸ್‌ಎಂವಿಟಿ ಬೆಂಗಳೂರು ತಲುಪಲಿದೆ.

## ಅಪ್ರತಿಮ ಹುತಾತ್ಮ ಕ್ರಾಂತಿಕಾರಿಗಳ ಸ್ಮರಣೆ



ಮಲ್ಲಮ್ಮ ನುಡಿ ವಾರ್ತೆ

ಔರಾದ:ಮಾ.25:ಬ್ರಿಟಿಷರ ಸಾಮ್ರಾಜ್ಯದ ವಿರುದ್ಧ ಹೋರಾಡಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಹುತಾತ್ಮ ಕ್ರಾಂತಿಕಾರಿಗಳನ್ನು ಇಡೀ ದೇಶವೇ ಸ್ಮರಿಸಿ ಗೌರವಿಸುತ್ತಿದೆ ಎಂದು ಪ್ರಾಂಶುಪಾಲ ನವೀಲಕುಮಾರ ಉತ್ಕಾರ್ ಹೇಳಿದರು.

ಸಂತಪುರ್ ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಅಪ್ರತಿಮ ಕ್ರಾಂತಿಕಾರಿಗಳ ಹುತಾತ್ಮ ದಿನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತಮಾತೆಯ ಸುಪುತ್ರರಾದ ಭಗತ್ ಸಿಂಗ್, ಸುಖದೇವ್ ಮತ್ತು ರಾಜಗುರು ರವರ ಬಲಿದಾನ ಇಡೀ ಭಾರತೀಯ ಪ್ರಜೆಗಳಿಗೆ ಭಾರತ ಮಾತೆ ರಕ್ಷಣೆಗಾಗಿ ಸದಾ ಸಿದ್ದರಾಗಿದ್ದೇವೆ ಎಂಬುದನ್ನು ಪ್ರೇರೇಪಿಸುತ್ತದೆ ಎಂದರು.

ಉಪನ್ಯಾಸಕರರ ಶಿವಪುತ್ರ ಧರಣಿ, ವನದೇವಿ ಎಕ್ಕಳೆ, ಪ್ರಿಯಾಂಕಾ ಗೊನ್ನಳ್ಳಿಕರ್, ಅಶ್ವಿನಿ ಹಿಂದೊಡ್ಡಿ ಪ್ರತಿಭಾವಂತ ವಿದ್ಯಾರ್ಥಿಗಳಾದ ವೈಷ್ಣವಿ, ಪ್ರಿಯಾಂಕಾ,ಮಾಸುಮಾ ಇದ್ದರು.

## ದೇಶದ ಪ್ರಗತಿಯಲ್ಲಿ ಮಹಿಳೆಯ ಪಾತ್ರ ಹಿರಿದು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.25:ಪುರುಷರು ಮತ್ತು ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಸರಿ ಸಮಾನರಾಗಿ ನಡೆದಾಗ ಮಾತ್ರ ದೇಶದ ಪ್ರಗತಿ ಸಾಧ್ಯ ಎಂದು ಪ್ರಾಚಾರ್ಯ ಲಕ್ಷ್ಮಣ ಕಾಂಬಳೆ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೆಣ್ಣು ಸಮಾಜದ ಕಣ್ಣು. ಹೆಣ್ಣೊಂದು ಕಲಿತರೆ ಶಾಲೆ ತೆರೆದಂತೆ ಎಂಬ ಹೇಳಿಕೆಗಳು ಹೆಣ್ಣಿನ ಮಹತ್ವದ ಕುರಿತು ಮಾಹಿತಿ ನೀಡುತ್ತವೆ ಎಂದರು.

ಡಾ. ಜೈಶ್ರೀ ಪಿ. ಮಾತನಾಡಿ, ಮಹಿಳೆಯರು ಮನಸ್ಸು ಮಾಡಿದರೆ ಏನನ್ನಾದರೂ ಸಾಧಿಸಬಹುದು. ಮಹಿಳೆಯರು ತಮಗೆ ದೊರೆಯುತ್ತಿರುವ ಅವಕಾಶಗಳಿಗಾಗಿ ಅಂಬೇಡ್ಕರ್ ಅವರಿಗೆ ಸದಾ ಚಿರ ಋಣಿಯಾಗಿರಬೇಕು ಎಂದು ಹೇಳಿದರು.ಮಹಿಳಾ ಅಭಿವೃದ್ಧಿ ಕೋಶದ ಸಂಯೋಜಕ ರಘುನಂದನ ಮಾತನಾಡಿದರು.

ಈ ಸಂದರ್ಭದಲ್ಲಿ

ಎಲ್ಲಾ ಮಹಿಳಾ ಸಿಬ್ಬಂದಿ ವರ್ಗದವರಿಗೆ, ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಪ್ರಮುಖರಾದ ಬಸವರಾಜೇಶ್ವರಿ ನಾಗಮ್ಮ ಬಂಗರಗಿ, ವಿಜಯಲಕ್ಷ್ಮಿ, ಸ್ವಪ್ನ, ತುಪ್ಪದ ವೀರಣ್ಣ,

ಹೇಮಾವತಿ ಪಾಟೀಲ, ರವಿ ಮೇಟಿ, ಸಹನಾ, ಸಿಂಧು ಉಪಸ್ಥಿತರಿದ್ದರು.

## ಖತಗಾಂವದಲ್ಲಿ ಇಫ್ತಾರ ಕೂಟ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ :ಮಾ.25: ತಾಲೂಕಿನ ಖತಗಾಂವ ಗ್ರಾಮದಲ್ಲಿ ಪವಿತ್ರ ರಂಜಾನ ಹಬ್ಬದ ನಿಮಿತ್ತ ಮುಸ್ಲಿಂ ಬಾಂಧವರಿಗೆ ಇಫ್ತಾರ ಕೂಟ ನಡೆಯಿತು.ಮುಖಂಡ ಪ್ರಮೋದ ಧರಣೆ ಅವರು ಹನುಮಾನ ಮಂದಿರದಲ್ಲಿ ಖಾಂಡ ನಿಮಿತ್ತ ಊಟದ ವ್ಯವಸ್ಥೆ ಮಾಡಿದ್ದರು ಆದರೆ ಮುಸ್ಲಿಂ ಸ್ನೇಹಿತರು ಊಟ ಮಾಡಲಿಲ್ಲ ಎಂಬ ಕಾರಣಕ್ಕೆ ಇವರು ಇಫ್ತಾರ ಕೂಟವನ್ನು ಏರ್ಪಡಿಸಿದ್ದು, ಇದಕ್ಕೆ ಪ್ರಶಂಸೆ ವ್ಯಕ್ತವಾಗಿದೆ.ಮದನೂರ ಪಿಕೆಪಿಎಸ್ ಮಾಜಿ ಉಪಾಧ್ಯಕ್ಷ ಆನಂದ ಪಾಟೀಲ್ ಮಾತನಾಡಿ, ಇಫ್ತಾರ ಕೂಟಗಳು ಶಾಂತಿ, ಸೌಹಾರ್ದತೆ ಕಾಪಾಡಿಕೊಂಡು ಬರುವಲ್ಲಿ ಸಹಕಾರಿಯಾಗಿವೆ. ಇಂತಹ ಇಫ್ತಾರ ಕೂಟಗಳಲ್ಲಿ ಎಲ್ಲಾ ಹಿಂದೂ ಮುಸ್ಲಿಮರು ಭಾಗವಹಿಸಿ ಸೌಹಾರ್ದತೆ ಬೆಳೆಸುವ ಅಗತ್ಯ ಇದೆ ಎಂದರು.

ಮುಖಂಡ ಪ್ರಮೋದ ಧರಣೆ ಮಾತನಾಡಿ, ಸಾಮಾಜಿಕ ಬದ್ಧತೆಯಲ್ಲಿ ಸೌಹಾರ್ದತೆ ಮೆರೆಯೋಣ, ಸಹೋದರತ್ವ ಮೆರೆಯೋಣ. ವೈಶಿಷ್ಟ ವ್ಯತ್ಯಾಸವಿರುವ ವಿಭಿನ್ನ ಸಮುದಾಯಗಳು ಸೇರಿ ಒಂದು ಸಾಮಾಜಿಕ ಸಾಮರಸ್ಯ ಮತ್ತು ಬದ್ಧತೆಯನ್ನು ಅರಸುವ ನಮ್ಮ ಸಮಾಜವು ವೈವಿಧ್ಯಮಯ ಜನಾಂಗ, ಭಾಷೆ, ಧರ್ಮ ಹಾಗೂ ಸಂಸ್ಕೃತಿಯನ್ನು ಒಳಗೊಂಡಿದೆ ಎಂದರು.

ಗ್ರಾ.ಪಂ. ಸದಸ್ಯ ಇಸ್ಮಾಯಿಲ್ ಸೈಯ್ಯದ, ಪ್ರವೀಣ ಧರಣೆ, ಶಾಂತಕುಮಾರ ಗುಡಮೆ, ಪ್ರದೀಪ ನೀಲಂಗೆ, ಪಾಶಾಸಾಬ ಸೈಯ್ಯದ, ಅಜರ ಬಾಗವಾನ, ಇಸ್ಮಾಯಿಲ್ ಶೇಖ, ಅಸೀಫ ಸೈಯ್ಯದ, ಮತೀನ ಚಾಕೂರೆ, ಅಕ್ಬರ ಸೈಯ್ಯದ, ಪಾಶುಸಾಬ ಸೈಯ್ಯದ, ಹಮಜತ ಸೈಯ್ಯದ ಹಾಗೂ ಇತರರು ಇದ್ದರು.

# ಅಭಿನವ ಘನಲಿಂಗ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ ಭಿತ್ತಿ ಪತ್ರಿಕೆ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 25 ಇಲ್ಲಿನ ತಿಪುರಾಂತಿನ ಸಂಸ್ಥಾನ ಗವಿಮಠದಲ್ಲಿದಿನಾಂಕ10/04/2025 ರಂದು ಜರುಗುಲಿರುವ ಶ್ರೀ ಘನಲಿಂಗ ರುದ್ರಮುನಿ ಜಾತ್ರಾ ಮಹೋತ್ಸವ ಮತ್ತು ಕರ್ನಾಟಕ ರಾಜ್ಯ 13ನೆಯ ಚುಟುಕು ಸಾಹಿತ್ಯ ಸಮ್ಮೇಳನ ಹಾಗೂ ಅಭಿನವ ಘನಲಿಂಗ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದ ಭಿತ್ತಿ ಪತ್ರಿಕೆಯು ಪೂಜ್ಯ ಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಹಸ್ತದಿಂದ ಬಿಡುಗಡೆ ಮಾಡಲಾಯಿತು. ಇದೆ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಧನರಾಜ್ ತಾಳಂಪಳ್ಳಿ,ಅರ್ಜುನ್ ಕನಕ, ಪ್ರೊ.ಸೂರ್ಯಕಾಂತ ಶೀಲವಂತ, ಮಲ್ಲಿಕಾರ್ಜುನ್ ಅಲಗೂಡೆ,ಪ್ರೊ. ರುದ್ರೇಶ್ವರ ಗೋರ್ಟಾ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಶಾಂತಲಿಂಗ ಮಠಪತಿ. ಮಲ್ಲಿಕಾರ್ಜುನ್ ಪಾಟೀಲ್ ಹಳ್ಳಿ, ಶ್ರೀಶೈಲ್ ವಾತಡೆ, ಅಶೋಕ ಪಾಟೀಲ,ಸಂತೋಷ ಮಾಲಗರ ಸೇರಿದಂತೆ ಅನೇಕರು ಇದ್ದರು.

# ಎಲ್ಲಡೆ ನೈತಿಕತೆಯ ಕೊರತೆ ಎದ್ದು ಕಾಣುತ್ತಿದೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 25 ಇಲ್ಲಿ ಆಯೋಜಿಸಿದ್ದ ಇಫತಾರ ಕೂಟದಲ್ಲಿ ಮಾತನಾಡಿ ಎಸ್. ವಾಯ. ಎಮ್. ಅಧ್ಯಕ್ಷರಾದ ರಿಯಾಜ ಪಟೇಲ್ ಮಾತನಾಡಿ ಇಫತಾರ ಕೂಟದ ಮಹತ್ವದ ಬಗ್ಗೆ ತಿಳಿಸಿದರು. ಎಸ್. ಐ. ಓ ಜಿಲ್ಲಾ ಅಧ್ಯಕ್ಷರಾದ ಜಾವಿದ ಮತೀನ್ ಮಾತನಾಡಿ ಇಂದು ನೈತಿಕತೆ ಕೊರತೆ ಎದ್ದು ಕಾಣುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಹಿರಿಯರಾದ ಗುರನಾಥ್ ಗಡ್ಡೆ ಮಾತನಾಡಿದರು. ಈ ಸಂದರ್ಭದಲ್ಲಿ ಎಸ್. ಐ. ಓ. ದ ತಾಲೂಕ ಅಧ್ಯಕ್ಷರಾದ ಜಭಿಖಾನ್. ಕಾರ್ಯದರ್ಶಿ ಫೈಯಮೂದಿನ್. ಮಾಧ್ಯಮ ಉತ್ಸುವಾರಿ ರೌಫ್ ಅಲ್ಲಿ. ಪತ್ರಕರ್ತರಾದ ನಾಗಪ್ಪಾ ನಿಣ್ಣೆ. ಡಿ.ಕೆ.ಪ್ರಹ್ಲಾದ.ಉದಯಕುಮಾರ್ ಮುಳೆ. ಶಿವಪುತ್ರ ಪಾಟೀಲ. ನೈಮೂದಿನ ಚಾಬುಕ ಸವಾರ. ಮುರಷದ. ಕಲ್ಯಾಣರಾವ ಮದರಗಾಂವಕರ್.ಜಾಕಿರ್ ಸೌಂಡಕೆ. ಅಕ್ಬರ್ ಅಲಿ. ಕುತಬೊದ್ದೀನ್. ಸೌದ. ಶಿವಕುಮಾರ ಸ್ವಾಮೀ. ಮಲ್ಲಿಕಾರ್ಜುನ ಬಂಡೆ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



ಚಿಟಗುಪ್ಪ:– ಇಲ್ಲಿಯ ಸರ್ಕಾರಿ ಕನ್ಯ ಪ್ರೌಢ ಶಾಲೆಯಲ್ಲಿ ಉರ್ದು ಮಾಧ್ಯಮ ಶಿಕ್ಷಕರಿಂದ ಆಯೋಜಿಸಿದ್ದ ಇಫ್ತಾರ್ ಕೊಟದಲ್ಲಿ ಶಾಲೆಯ ಪ್ರಭಾರಿ ಮುಖ್ಯ ಗುರುಗಳಾದ ಬಸವರಾಜ ಮೇತ್ರೆ, ಶಿಕ್ಷಕರಾದ ಸಂಜೀವನ ಭೋಸ್ಲೆ, ಗುಂಡಪ್ಪ, ಕೋರಿ, ಹಸನ್, ಪಂಚಶೀಲಾ ಕಟ್ಟಿಮನಿ, ಸಾದಿಯಾ ಸುಲ್ತಾನಾ, ಶಿಲ್ಪಾ, ಬ್ಲೇಸಿ ರಾಣಿ, ಚಂದ್ರಕಾಂತ, ಮಲ್ಲಮ್ಮಾ, ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ, ಶ್ರೀನಿವಾಸ ಕೋಡಂಬಲ್, ರಾಜಕುಮಾರ ಆರ್. ಹಡಪದ ಸೇರಿದಂತೆ ಇತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

ಅಲ್ಪಸಂಖ್ಯಾತರ ಒಲೈಕೆಯೆ ಆಗಿದೆ ಹೊರತು ಅಭಿವೃದ್ಧಿ ಬಜೆಟ್ ಅಲ್ಲ.

# ಕಲಬುರಗಿಯಲ್ಲಿ ಬಿ.ವೈ ವಿಜಯೇಂದ್ರ ಹೇಳಿಕೆ.



ಯಡಿಯೂರಪ್ಪ ಅವರಿಗೂ ಕಲಬುರಗಿಗೂ ಅವಿನಾಭ ಸಂಬಂಧ ಇದೆ.

ಮುಖ್ಯಮಂತ್ರಿ ಇದ್ದಾಗ ಯಡಿಯೂರಪ್ಪ ಅವರು ಸಾಕಷ್ಟು ಕ್ಯಾಬಿನೆಟ್ ಮೀಟಿಂಗ್ ಮಾಡಿದ್ದಾರೆ.

ನಾನು ಕಲಬುರಗಿಯಿಂದ ಕೂಡ ಕಲಬುರಗಿಯಿಂದ ಮದುವೆ ಆಗಿರೋದು.

ಇವಾಗ ನನ್ನ ಸಹೋದರನ ಮಗ ಸುಭಾಷ್ ಗೆ ಇಲ್ಲಿಂದ ಹುಡುಗಿ ಜೊತೆ ಮದುವೆ ನಿಶ್ಚಯ ಆಗಿದೆ.

ಲಿಂಗರಾಜ ಅಪ್ಪಾ ಅವರ ಮಗಳನ್ನ ನಮ್ಮ ಮನೆಗೆ ತೆಗೆದುಕೊಳ್ಳುತ್ತೆವೆಟ

ಹನಿ ಟ್ರ್ಯಾಪ್ ಬಗ್ಗೆ ಹೆಚ್ಚು ಚರ್ಚೆ ಮಾಡಲ್ಲ ಸದನದಲ್ಲಿ ಚರ್ಚೆ ಆಗಿದೆ.

ಎಂಟೈರ್ ಎಪಿಸೋಡ್ ಇದರ ಬಗ್ಗೆ ಆಡಳಿತದ ಪಕ್ಷದಲ್ಲಿ ಮುಖ್ಯಮಂತ್ರಿ ಕುರ್ಚಿಗೆ ಸುತ್ತುವರೆದಿರುವ ಪ್ರಕರಣ ಇದು.

ಅವರು ದೂರು ಕೊಡಲಿ ದೂರು ಕೊಟ್ಟ ಮೇಲೆ ಏನಾಗುತ್ತೆ ನೋಡೋಣ.

ಎಲ್ಲಾ ಸಚಿವರು ಹೇಳಿಕೆ ಕೊಡ್ತಿದ್ದಾರೆ ,ಆದ್ರೆ ಇವತ್ತು ಚರ್ಚೆ ಆಗಬೇಕಿರೋದು .

ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಿನಿಂದ ಅಲ್ಪಸಂಖ್ಯಾತರ ಒಲೈಕೆ ಮಾಡ್ತಿದೆ.

ಬಿಜೆಪಿ ಮುಸ್ಲಿಂರ ವಿರೋಧಿ ಅಲ್ಲ ಆದ್ರೆ ಮುಸ್ಲಿಂರಿಗೆ ತೃಪ್ತಿ ಮಾಡುವ ಮೂಲಕ ಹಿಂದುಗಳಿಗೆ ಅಪಮಾನ ಮಾಡುವ ಕೆಲಸ ಆಗ್ತಿದೆ.

ರಾಜ್ಯದ ಮುಖ್ಯಮಂತ್ರಿ ಕಾಂಗ್ರೆಸ್ ಸರ್ಕಾರ ಮಾಡ್ತಿದೆ ಇದರ ವಿರುದ್ಧ ಬಿಜೆಪಿ ಹೋರಾಟಕ್ಕೆ ಕರೆ ಕೊಟ್ಟಿದೆ

ಬಜೆಟ್ ನಲ್ಲಿ ಅಲ್ಪಸಂಖ್ಯಾತರ ಒಲೈಕೆಯೆ ಆಗಿದೆ ಹೊರತು ಅಭಿವೃದ್ಧಿ ಬಜೆಟ್ ಅಲ್ಲ.

ಈಗ ತಾನೆ ಜೆ ಡಿ ಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಜೊತೆ ಮಾತಾಡಿದ್ದೆನೆ.

ಇವತ್ತು ನಾಳೆ ಕಲಬುರಗಿಯ ಕಾರ್ಯಕ್ರಮ ಮುಗಿಸಿ ಬೆಂಗಳೂರಿಗೆ ಹೊಗ್ತೆನೆ.

ಬೆಂಗಳೂರಿಗೆ ಹೋದ ಮೇಲೆ ಕುಮಾರಸ್ವಾಮಿ ಜೊತೆ ಚರ್ಚೆ ಮಾಡ್ತೆನೆ.

ಎಲ್ಲವು ಸರಿ ಇದೆ ಅವರು ಕೂಡ ನಮಗೆ ಬೆಂಬಲ ಕೊಡ್ತಾರೆ.

ರಾಜಣ್ಣ ದಿನಕ್ಕೊಂದು ಹೇಳಿಕೆ ಕೊಡ್ತಿದ್ದಾರೆ ಅವರು ಹೇಳಿಕೆ ಕೊಡೊದನ್ನ ನಿಲ್ಲಲಿ.

ಸಿಎಂ ಕುರ್ಚಿಗೆ ಹನಿ ಟ್ರ್ಯಾಪ್ ಸಂಬಂಧ ಪ್ರಕರಣವನ್ನ ಸತೀಶ್ ಜಾರಕಿಹೊಳಿ , ಮತ್ತು ರಾಜಣ್ಣ ಅವರಿಗೆ ಈ ಪ್ರಶ್ನೆ ಕೇಳಬೇಕು.

ಕಾಂಗ್ರೆಸ್ ನಲ್ಲಿ ಆಂತರಿಕ ಗೊಂದಲದಿಂದ ಪ್ರಕರಣ ಹೊರ ಬರ್ತಿದೆ

ನಾನು ಆವಾಗ್ಲೆನೆ ಹೇಳಿದ್ದೆ ಮುಂದಿನ ದಿನಗಳಲ್ಲಿ ಕ್ಷಿಪ್ರ ಬೆಳವಣಿಗೆ ನಡೆಯುತ್ತಿದೆ.

ಹಿಂದೆ ಪರಿಷತ್ ನಲ್ಲಿ ಧರ್ಮೆಗೌಡರನ್ನ ಕಾಂಗ್ರೆಸ್ ಸದಸ್ಯರು ಪೀಠದಿಂದನೆ ಹೊರ ಹಾಕಿದ್ರು.

ನಾನು ಇವತ್ತು 18 ಶಾಸಕರ ಅಮಾನತ್ತು ಯಾಕೆ ಮಾಡಿದ್ದಾರೆ ಅಂತಾ ಕೇಳ್ತಿದ್ದೆನೆ.

ಅಲ್ಪಸಂಖ್ಯಾತರ ಒಲೈಕೆ ಬಗ್ಗೆ ನಾವು ಹೋರಾಟ ಮಾಡೋದಕ್ಕೆ ಮುಂದಾಗಿದ್ದೆವೆ.

ಶಾಸಕರ ವರ್ತನೆ ಸರಿಯಿಲ್ಲ ಅಂದ್ರೆ ಅವರ ಅಧಿಕಾರಕ್ಕೆ ಸಿಮೀತವಾದಂತೆ ಅಮಾನತ್ತು ಮಾಡಬಹುದಾಗಿತ್ತು.

ಆದ್ರೆ ಆರು ತಿಂಗಳು ಅಮಾನತ್ತು ಮಾಡುವುದು ಕಾನೂನು ಬಾಹಿರವಾಗಿದೆ.

ಅಮಾನತ್ತಿನ ಜೊತೆಗೆ ಕಂಡಿಷನ್ಸ್ ಹಾಕಿರೋದು ಸಂವಿಧಾನ ವಿರೋಧಿ ನಡೆ.

ಯಾವುದೋ ಕೆಟ್ಟಗಳಿಗೆಯಲ್ಲಿ ನಮ್ಮವರು ಈ ರೀತಿ ನಡೆದು– ಕೊಂಡಿದ್ದಾರೆ.

ಆದ್ರೆ ಅಮಾನತ್ತು ಮಾಡಿರೋದು ಆ ಕ್ಷೇತ್ರದ ಜನರಿಗೆ ಮಾಡಿರುವ ಅಪಮಾನ ಇದಾಗಿದೆ.

# ಅನಾಥ ಹಾಗೂ ನಿರ್ಗತಿಕ, ಕಡುಬಡವ ಮಕ್ಕಳಿಗೆ ಉಚಿತ ಶಿಕ್ಷಣ ನೀಡುತ್ತಿರುವ ಶ್ರೀ ಸಿದ್ದಗಂಗಾ ಶಿಕ್ಷಣ ಸಂಸ್ಥೆ.



ಮಲ್ಲಮ್ಮ ನುಡಿ ವಾರ್ತೆ

ಕಲಕೇರಿ:ವಿಧ್ಯಾರ್ಥಿಗಳಿಗೆಶಿಕ್ಷಣವನ್ನು ನೀಡುವದರ ಜೊತೆಗೆ ಅವರಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸುವದು ಮುಖ್ಯವಾಗಿದೆ. ವಿಧ್ಯಾರ್ಥಿಗಳನ್ನು ಕೆವಲ ಅಂಕಗಳಿಕೆಗಾಗಿ ಅವರನ್ನು ತಯಾರು ಮಾಡುವ ಬದಲಾಗಿ ದೇಶದ ಸತ್ಪಜೆಯಾಗಿ ಹೊರಹೊಮ್ಮುವಂತ ನೈತಿಕ ಶಿಕ್ಷಣದ ಅವಶ್ಯಕತೆಯಿದ್ದು ಈ ಕೆಲಸವನ್ನು ತುರಕನಗೇರಿಯ ಶ್ರೀ ಸಿದ್ದಗಂಗಾ ಶಿಕ್ಷಣ ಸಂಸ್ಥೆ ಈ ಭಾಗದ ಅನಾಥ ಹಾಗೂ ನಿರ್ಗತಿಕ,ಕಡುಬಡವ ಮಕ್ಕಳಿಗೆ ಉಚಿತ ಶಿಕ್ಷಣ ನೀಡುವದರ ಮೂಲಕವಾಗಿ ಮಾಡುತ್ತಿದೆ ಎಂದು ದೇವರಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಕುದರಿಸಾಲೋಡಗಿ ಅವರು ಹೇಳಿದರು.

ಕಲಕೇರಿ ಸಮಿಪದ ತುರಕುನಗೇರಿ ಗ್ರಾಮದಲ್ಲಿ ಶನಿವಾರ ಸಂಜೆ ನಡೆದ ಶ್ರೀ ಸಿದ್ದಗಂಗಾ ಕಿರಿಯ ಪ್ರಾಥಮಿಕ ಶಾಲೆಯ 7 ನೇ ವರ್ಷದ ವಾರ್ಷಿಕೋತ್ಸವ ಹಾಗೂ ತುಮಕುರಿನ ಸಿದ್ದಗಂಗಾ ಮಠದ ಲಿಂ. ಶ್ರೀ ಶಿವಕುಮಾರ ಸ್ವಾಮಿಜಿಯವರ 118 ನೇ ಜಯಂತ್ಯೋತ್ಸವ ಹಾಗೂ ವಿವಿದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ "ಸಿದ್ದಗಂಗಾ ಶ್ರೀ ಕಾಯಕ ರತ್ನ" ಹಾಗೂ "ಸಿದ್ದಗಂಗಾ ಶ್ರೀ ರತ್ನ"

ಪ್ರಶಸ್ತಿವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಸಂಸ್ಥೆಯ ಕಾರ್ಯದರ್ಶಿ ಶಾಮಶುದ್ದಿನ ಇನಾಮದಾರ ಅವರು ಹುಟ್ಟಿನಿಂದ ಇಸ್ಲಾಂ ಧರ್ಮದವರಾದರು ಅವರು ತಮ್ಮ ಬಾಲ್ಯದ ಶಿಕ್ಷಣವನ್ನು ಸಿದ್ದಗಂಗಾ ಮಠದಲ್ಲಿ ಪಡೆದಿರುವ ಹಿನ್ನೆಲೆಯಲ್ಲಿ ಇಗೆ ತುರಕುನಗೇರಿಯಲ್ಲಿ ಸಿದ್ದಗಂಗಾ ಶ್ರೀಗಳ ಹೆಸರಿನಲ್ಲಿ ಅನಾಥ ನಿರ್ಗತಿಕ.ಕಡುಬಡವ ಮಕ್ಕಳಿಗೆ ಉಚಿತ ಶಿಕ್ಷಣ ನಿಡುತ್ತಿರುವದು ನಿಜಕ್ಕೂ ಶ್ಲಾಘನೀಯವಾಗಿದೆ. ಮುಂದಿನ ದಿನಮಾನಗಳಲ್ಲಿ ಈ ಸಂಸ್ಥೆ ಇನ್ನೂ ಹೆಚ್ಚಿನ ಸಾಧನೆ ಮಾಡುವಂತಾಗಲಿ


ಎಂದು ಶುಭಹಾರೈಸಿದರು. ಗುಂಡಕನಾಳದ ಗುರುಲಿಂಗ ಶಿವಾಚಾರ್ಯರು,ಮಳಖೇಡದ ಅಲ್ಲಾಜ್ ಸೈಯ್ಯದಶಾ ಮುಸ್ತಪಾ ಖಾದ್ರಿ,ಕಲಕೇರಿ ಹಿರೇಮಠದ ಸಿದ್ದರಾಮ ಶಿವಾಚಾರ್ಯರು ಮಾತನಾಡಿ, ಮಾನವ ಜೀವನ ಅಮೂಲ್ಯವಾದದ್ದು ಧರ್ಮದ ಆದರ್ಶ ಮೌಲ್ಯಗಳನ್ನು ಜೀವನದ ಪರಿಪಾಲನೆಯಲ್ಲಿ ಅಳವಡಿಸಿಕೊಂಡಾಗ ಬದುಕು ಸಾರ್ಥಕವಾಗುತ್ತದೆ, ಹುಟ್ಟು ಎಷ್ಟು ಸಹಜವೋ ಸಾವು ನಿಶ್ಚಿತವಾದುದೆಂದು ತಿಳಿದುಕೊಂಡು ಬದುಕಿನಲ್ಲಿ ಒಂದಿಷ್ಟು ಓಳಿತನ್ನು ಮಾಡಲು ಮುಂದಾಗಬೇಕು ಈ ದಿಸೇಯಲ್ಲಿ ತುರಕುನಗೇರಿಯ ಸಿದ್ದಗಂಗಾ ಶಿಕ್ಷಣ

ಸಂಸ್ಥೆಯ ನಿಜಕ್ಕೂ ಎಲ್ಲರಿಗೂ ಪ್ರೇರಣೆಯಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಅನುಗ್ರಹ ಕಣ್ಣಿನ ಆಸ್ಪತ್ರೆಯ ಡಾ.ಪ್ರಭುಗೌಡ ಲಿಂಗದಳ್ಳಿ, ದಲಿತ ವಿಧ್ಯಾರ್ಥಿ ಪರಿಷತ್ತಿನ ರಾಜ್ಯಾಧ್ಯಕ್ಷ ಶ್ರೀನಾಥ ಪೂಜಾ–ರಿ.ಸೇರಿದಂತೆ ಇತರರು ಮಾತನಾಡಿದರು. ಸಂಸ್ಥೆಯ ಕಾರ್ಯದರ್ಶಿ ಶಾಮಶುದ್ದಿನ್ ಇನಾಮದಾರ ಪ್ರಸ್ತಾವಿಕವಾಗಿ ಮಾತನಾಡಿದರು. ಇದೇ ವೇಳೆ ವಿವಿದ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸಿದ್ದಗಂಗಾ ಶ್ರೀ ಕಾಯಕ ರತ್ನ ಹಾಗೂ ಸಿದ್ದಗಂಗಾ ಶ್ರೀ ರತ್ನ ಮತ್ತು ಸಿದ್ದಗಂಗಾ ಶ್ರೀ ಬಾಲಪ್ರತಿಭೆ ರತ್ನ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಲಲಿತಾ ದೊಡ್ಡಮನಿ. ಸೈಯ್ಯದ್ ಶಕಿಲ ಅಹ್ಮದ ಖಾಜಿ,ಮಾವಿನಭಾವಿಯ ಬಸವರಾಜ್ ದೇವರು,ಬೆಕಿನಾಳದ ಮಹೇಶ ಮುತ್ಯಾ.ಪ್ರಕಾಶ ಪೂಜಾರಿ, ಫಿರಮಮ್ಮದ ಇನಾಮದಾರ, ಅಹ್ಮದಸಾಬ ಜಾಡಗಾರ, ಜಾವೀದ್ ಕರ್ನಾಳ, ಸಿದ್ದು ಬುಳ್ಳಾ, ಕನಕರಾಜ್ ವಡ್ಡರ್, ಸಿದ್ದನಗೌಡ ಬಿರಾದಾರ,ಹಣಮಂತ ವಡ್ಡರ್, ಸಿಆರ್‌ಪಿ ಎಸ್ ಎಲ್ ನಾಲ್ಕೋಡಿ, ಬಾಗ್ಯಶ್ರೀ ಸುದಾ–ಕರ, ಯಮನೂರಿ ಸಿಂದಗಿರಿ, ಜೆ ಬಿ ಕುಲಕರ್ಣಿ, ಡಿ ಎನ್ ಚಿಕ್ಕಮಠ,ಕಾಶಿನಾಥ ತಾಳಿಕೋಟಿ ಸೇರಿದಂತೆ ಇತರರು ಇದ್ದರು.

ಜ್ಞಾನಗಂಗೋತ್ರಿ ಶಾಲೆಯಲ್ಲಿ ಚಿಣ್ಣರ ಕಲರವ

# ಶೈಕ್ಷಣಿಕ ಬಲವರ್ಧನೆಗೆ ಸರ್ವರ ಪ್ರಯತ್ನ ಅಗತ್ಯ : ರಮೇಶ ಬಡಿಗೇರ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಪ್ರಸ್ತುತ ಸ್ಪರ್ಧಾತ್ಮಕ ದಿನಗಳಲ್ಲಿ ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಬಲವರ್ಧನೆಯಾಗಲು ಪಾಲಕರ ಕಾಳಜಿ, ಶಿಕ್ಷಕ ಸಮುದಾಯದ ಪ್ರಯತ್ನ ಮತ್ತು ವಿದ್ಯಾರ್ಥಿಗಳ ಕ್ರಿಯಾಶೀಲತೆ ಮುಖ್ಯವಾಗಿದೆ ಎಂದು ನಗರಸಭೆ ಪೌರಾಯುಕ್ತ ರಮೇಶ ಬಡಿಗೇರ ತಿಳಿಸಿದರು. ನಗರದ ಜ್ಞಾನಗಂಗೊತ್ರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ 8ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಕಷ್ಟಪಟ್ಟು ಕಲಿತಾಗ ಅದರ ಪ್ರತಿಫಲ ದೊರಕುತ್ತದೆ, ಉಳಿಪೆಟ್ಟು ತಿಂದ ಕಲ್ಲು ವಿಗ್ರಹವಾಗುತ್ತದೆ, ಅದೇರೀತಿ ಕಲಿಕೆಯಲ್ಲಿ ಅವಿರತ ಪರಿಶ್ರಮ ಹಾಕಬೇಕು, ಸಾಧನೆ ಮಾಡಿದಾಗ ಮಾತ್ರ ಯಶಸ್ಸು ಸಿಗುತ್ತದೆ ಎಂದ ಅವರು, ಉತ್ತಮ ಮಕ್ಕಳ ಸಂಖ್ಯೆಯೊಂದಿಗೆ ಕನ್ನಡ ಮಾಧ್ಯಮ ಶಾಲೆ ಅಚ್ಚುಕಟ್ಟಾಗಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ವಾರ್ಡ್ ನಗರಸಭೆ ಸದಸ್ಯ ಲಾಲ ಅಹ್ಮದ್ ಖುರೇಶಿ ಮಾತನಾಡಿ, ಹಳೇಪೇಟೆಯ ಭಾಗದಲ್ಲಿ ಎಲ್ಲಾ ವರ್ಗದ ಸಮುದಾಯದ ವಿದ್ಯಾರ್ಥಿಗಳಿಗೆ ಕಡಿಮೆ ಶುಲ್ಕದಲ್ಲಿ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ನೀಡುತ್ತಿರುವ ಸಂಸ್ಥೆಯ ಕಾರ್ಯ ಶ್ಲಾಘನೀಯವಾಗಿದ್ದು, ಸದಾಕಾಲ ನಮ್ಮೆಲ್ಲರ ಸಹಕಾರವಿದೆ ಎಂದರು. ವೇದಿಕೆ ಮೇಲೆ ಆಶ್ರಯ ಕಮಿಟಿ ಅಧ್ಯಕ್ಷ ವಸಂತ ಸುರಪುರಕರ, ಪ್ರಮುಖರಾದ ಕರಬಸ್ಸಪ್ಪ ಬಿರಾಳ, ಶಾಂತಪ್ಪ ಕಟ್ಟಿಮನಿ, ಬಸವರಾಜ ನಾಯ್ಕಲ್, ಹಯ್ಯಾಳಪ್ಪ, ಕೊನೇರಾಚಾರ್ಯ ಸಗರ, ಸಂಸ್ಥೆಯ ಅಧ್ಯಕ್ಷ ಮುರುಳಿಧರ ಸುಂಬಡ,ಸೇರಿದಂತೆ ಪ್ರಮುಖರು ಉಪಸಿತರಿದ್ದರು. ಸಂಸ್ಥೆಯ ವತಿಯಿಂದ ಸರ್ವರನ್ನು ಗೌರವಿಸಲಾಯಿತು, ಎಂಟನೇ ತರಗತಿ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡಲಾಯಿತು, ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು, ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ಹೂಗಾರ, ನಾಗರಾಜ ಪತ್ತಾರ, ಗುರಣ್ಣ ಬಾದ್ಯಾಪುರ ಸೇರಿದಂತೆ, ಸಮಸ್ತ ಶಿಕ್ಷಕರು, ಪಾಲಕರು ಇದ್ದರು,ನಾರಾಯಣಾಚಾರ್ಯ ಸಗರ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು.

# ಪ್ರಾಢಶಾಲಾ ಸಹ ಶಿಕ್ಷಕರ ಸಂಘದಿಂದ ಮನವಿ ಪತ್ರ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮಾ 25 ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘ ತಾಲೂಕು ಘಟಕ ಹಾಗೂ ಹುಲಸುರು ವತಿಯಿಂದ ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಕಲಬುರ್ಗಿರವರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಿದ್ದವೀರಯ್ಯ ರುದ್ನೂರ ರವರ ಮೂಲಕ 9ನೇ ತರಗತಿ ವಿದ್ಯಾರ್ಥಿಗಳಿಗೆ ಮೇ1 ರಿಂದ ವಿಶೇಷ ತರಗತಿಗಳನ್ನು ನಡೆಸಬೇಕೆಂಬ ವಿಚಾರ ಕೈಬಿಡುವ ಕುರಿತು ಮನವಿ ಸಲ್ಲಿಸಲಾಯಿತು.ಈ ಸಂದರ್ಭದಲ್ಲಿ ತಾಲುಕ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷರಾದ ವಿಜಯ ಕುಮಾರ್ ಮಾನೆ. ಕಾರ್ಯದರ್ಶಿಗಳಾದ ಬಸವರಾಜ ಮನೂಳೆ. ಹುಲಸುರ ತಾಲೂಕ ಅದಕ್ಷರಾದ ಸೂರ್ಯಕಾಂತ ಅಡಕೆ. ಕಾರ್ಯದರ್ಶಿಗಳಾದ ಮದನ ಪಟೇಲ್. ರಾಜ್ಯ ಸಂಘಟನಾ ಕಾರ್ಯದರ್ಶಿ ಸುಧಾಕರ ಮೂಳೆ. ಜಿಲ್ಲಾ ಸಂಘಟನಾ ಕಾರ್ಯದರ್ಶಿ ಮಾಧವ ಗಣೇಶ್. ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷ ಶಿವಕುಮಾರ್ ಪತಂಗೆ. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಂತೋಷ್ ಅಕ್ಕಣ್ಣ. ಸರಕಾರಿ ನೌಕರರ ಸಂಘದ ನಿರ್ದೇಶಕ ವಿಜಯ ಕುಮಾರ್ ಪಟ್ನೆ ಮತ್ತು ಎರಡು ತಾಲೂಕಿನ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಎಲ್ಲ ಪದಾಧಿಕಾರಿಗಳು ಹಾಗು ತಾಲೂಕಿನ ಪ್ರೌಢ ಶಾಲೆಗಳ ಶಿಕ್ಷಕರು ಉಪಸ್ಥಿತಿರಿದ್ದರು.

# ಎಫ್–2 ಅರವಳ್ಳಿ ಐ.ಪಿ ಫೀಡರ್‌ನ ವಿದ್ಯುತ್ ಸರಬರಾಜಿನಲ್ಲಿ ಸಮಯದಲ್ಲಿ ಬದಲಾವಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.25–33/11ಕೆ.ವಿ ಗೊಬ್ಬರ(ಬಿ) ಉಪವಿಭಾಗದಲ್ಲಿರುವ ಎಫ್–2 ಅರವಳ್ಳಿ ಐ.ಪಿ. ಫೀಡರ್‌ನಲ್ಲಿ ಸಮಯ ಬದಲಾವಣೆ ಮಾಡಲಾಗಿದ್ದು, ಬೆಳಿಗ್ಗೆ 7 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ಪೂ–ರೈಕೆ ಮಾಡಲಾಗುತ್ತದೆ ಎಂದು ಚೌಡಾಪುರ ಜೆಸ್ಕಾಂನ ಕಾರ್ಯ ಮತ್ತು ಪಾಲನೆ ಉಪ–ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಫೆಬ್ರವರಿ 20 ರಂದು ಗರೂರು(ಬಿ) ಗ್ರಾಮದ ರೈತರಿಗೆ ಬೆಳಗಿನ 4 ಗಂಟೆ ಸಮಯದಲ್ಲಿ ವಿದ್ಯುತ್ ಪೂರೈಸುತ್ತಿರುವುದರಿಂದ ನಸುಕಿನ ವೇಳೆಯಲ್ಲಿ ಮೋಸಳೆ ಮತ್ತು ಇತರೆ ಪ್ರಾಣಿಗಳಿಂದ ರೈತರಿಗೆ ತೊಂದರೆಯಾಗುತ್ತಿದೆ. ಇದರ ಹಿನ್ನೆಲೆಯಲ್ಲಿ ಮೇಲಾಧಿಕಾರಿಗಳ ಅನುಮತಿ ಪಡೆದು ಎಫ್–2 ಅರವಳ್ಳಿ ಐ.ಪಿ ಫೀಡರ್‌ನ ಸಮಯ ಬೆಳಿಗ್ಗೆ 4 ರಿಂದ ಬೆಳಿಗ್ಗೆ 11 ಗಂಟೆಯ ಬದಲಾಗಿ, ಬೆಳಿಗ್ಗೆ 7 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ಸರಬರಾಜು ಮಾಡಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಗೆ ಕೇಂದ್ರ

# ಸರ್ಕಾರದ ಮಹತ್ವದ ಯೋಜನೆಯಾದ ಕಿಲ್ಕಾರಿ ಸೇವೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.25– ತಾಯಿ ಮತ್ತು ಶಿಶು ಮರಣದ ದರ ಕಡಿಮೆ ಮಾಡುವುದು ಹಾಗೂ ಗರ್ಭಿಣಿ ತಾಯಂದಿರಿಗೆ ಗುಣಮಟ್ಟದ ಆರೋಗ್ಯ ಸೇವೆ ಹಾಗೂ ಒಂದು ವರ್ಷದೊಳಗಿನ ಮಕ್ಕಳಿಗೆ ಲಸಿಕಾಕರಣದ ಕುರಿತು ಮಾಹಿತಿಯನ್ನು ದೂರವಾಣಿ ಮೂಲಕ ನೇರವಾಗಿ ಕುಟುಂಬಗಳಿಗೆ ತಲುಪಿಸುವ ಕೇಂದ್ರ ಸರ್ಕಾರದ ಮಹತ್ವದ ಯೋಜನೆಯೇ ಕಿಲ್ಕಾರಿ ಸೇವೆ ಆಗಿದೆ ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದ್ದಾರೆ.

ಕಿಲ್ಕಾರಿಯು ಭಾರತ ಸರ್ಕಾರವು ಗರ್ಭಿಣಿ,ಬಾಣಂತಿಯರಿಗೆ ತಂದಿರುವ ಉಚಿತ ಆರೋಗ್ಯ ಮಾಹಿತಿ ನೀಡುವ ಮೊಬೈಲ್ ಸೇವೆಯಾಗಿದ್ದು, ಈ ಉಚಿತ ಸೇವೆಯು ಗರ್ಭಧಾರಣೆಯ 4 ನೇ ತಿಂಗಳಿನಿಂದ, ಮಗುವಿನ ಮೊದಲ ಜನ್ಮದಿನದವರೆಗಿನ ಅವಧಿಯಲ್ಲಿ ತಾಯಿಯ ಆರೋಗ್ಯದ ಬಗ್ಗೆ ಹಾಗೂ ಮಕ್ಕಳಿಗೆ ನೀಡುವ ಲಸಿಕೆಗಳ ಬಗ್ಗೆ ಮಾಹಿತಿಯನ್ನು ಮುಂಚಿತವಾಗಿ ಕರೆಗಳ ಮೂಲಕ ತಿಳಿಸಲಾಗುತ್ತದೆ.

ಕಿಲ್ಕಾರಿ ನೋಂದಣಿ ಹೇಗೆ ಮಾಡಬೇಕು: ಗರ್ಭಧಾರಣೆಯ ಅಥವಾ ಮಗುವಿನ ಜನನದ ವಿವರಗಳನ್ನು ಆಶಾ ಕಾರ್ಯಕರ್ತೆ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ, ಸಮುದಾಯ ಆರೋಗ್ಯ ಅಧಿಕಾರಿ ಅಥವಾ ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಮೋಬೈಲ್ ಸಂಖ್ಯೆ ನೀಡಿ ನೋಂದಾಯಿಸಿಕೊಳ್ಳಬೇಕು.ನಂತರ ಈ ಮಾಹಿತಿಯನ್ನು ಆರ್.ಸಿ.ಹೆಚ್ (ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ) ಪೋರ್ಟಲ್‌ನಲ್ಲಿ ನಮೂದಿಸಲಾಗುತ್ತದೆ.

ಗರ್ಭಿಣಿಯರು ಪಾಲಿಸಬೇಕಾದ ಅಂಶಗಳು ಇಂತಿವೆ: ಆರೋಗ್ಯ ಇಲಾಖೆಗೆ ತಾವು ಚಾಲ್ತಿಯಲ್ಲಿರುವ ಸೂಕ್ತ ಮೋಬೈಲ್ ಸಂಖ್ಯೆಯನ್ನು ನೀಡಬೇಕು. ತಮ್ಮ ಮೊಬೈಲ್‌ನಲ್ಲಿ ಕಿಲ್ಕಾರಿ ಸಂಖ್ಯೆಯನ್ನು (0124–4451660) ಸೇವ್ ಮಾಡಬೇಕು. ಈ ಸಂಖ್ಯೆಯಿಂದ ಕರೆಗಳು ಬಂದಾಗ ಸ್ವೀಕರಿಸಬೇಕು.

## ಪರಮಾತ್ಮನ ಮರೆತದ್ದೇ ದುಃಖಕ್ಕೆ ಕಾರಣ: ಪ್ರಭುದೇವ ಸ್ವಾಮೀಜಿ ಹೇಳಿಕೆ

# 'ಗುರುವಚನ' 13ನೇ ಆವೃತ್ತಿ ಬಿಡುಗಡೆ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 25 : ಪರಮಾತ್ಮನನ್ನು ಮರೆತದ್ದೇ ದುಃಖಕ್ಕೆ ಕಾರಣವಾಗಿದೆ ಎಂದು ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಹೇಳಿದರು. ಲಿಂಗಾಯತ ಮಹಾ ಮಠದ ವತಿಯಿಂದ ಇಲ್ಲಿಯ ಬಸವಗಿರಿಯಲ್ಲಿ ಈಚೆಗೆ ನಡೆದ 261ನೇ ಮಾಸಿಕ ಶರಣ ಸಂಗಮ ಹಾಗೂ ಲಿಂಗಾಯತ ಧರ್ಮಗ್ರಂಥ ಗುರುವಚನದ 13ನೇ ಆವೃತ್ತಿಯ ಬಿಡುಗಡೆ ಸಮಾರಂಭದ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ತಾಯಿಯನ್ನು ಕಳೆದುಕೊಂಡ ಮಗು ಮತ್ತೆ ತಾಯಿ ಸಿಕ್ಕಾಗಲೇ ಸಮಾಧಾನ, ನಿಶ್ಚಿಂತವಾಗುತ್ತದೆ. ಹಾಗೆಯೇ ಸೃಷ್ಟಿಕರ್ತ ಸಿಗುವವರೆಗೆ ಶಾಂತಿ ಇಲ್ಲ ಎಂದು ತಿಳಿಸಿದರು.

ದೇವರ ನೆನಹು ಮನುಷ್ಯನನ್ನು ಬಹು ಎತ್ತರಕ್ಕೆ ಏರಿಸುತ್ತದೆ ಎಂದರು.

ವ್ಯಕ್ತಿಯಲ್ಲಿ ದೋಷ ಬರಬಹುದು. ಆದರೆ, ಗುರುವಚನದಲ್ಲಿ ದೋಷವಿಲ್ಲವೆಂದು ವಚನಗಳಿಗೆ ಪಟ್ಟ ಕಟ್ಟಿದ್ದರು. ಅಂದು ಬಸವಣ್ಣ ಕಂಡ ಕನಸು ಅಕ್ಕ ಅನ್ನಪೂರ್ಣತಾಯಿ ಕಾರ್ಯ ರೂಪಕ್ಕಿಳಿಸಿದರು. ಅದು ಇಂದಿಗೂ ಮುಂದುವರಿಯುತ್ತಿದೆ ಎಂದು ಹೇಳಿದರು.

ಭಕ್ತಿಯಿಂದ ಇಷ್ಟಲಿಂಗ ಪೂಜೆ ಹಾಗೂ ಧರ್ಮ ಗ್ರಂಥ ಓದುವವರಲ್ಲಿ ತಾನಾಗಿಯೇ ಅಮೋಘ ಶಕ್ತಿ ಬರುತ್ತದೆ ಎಂದು ಶಿವಾನಂದ ದೇವರು ನುಡಿದರು.

ಮಕ್ಕಳಿಗೆ ಕಡ್ಡಾಯವಾಗಿ ಧರ್ಮದ ಬಗ್ಗೆ ತಿಳಿಸಬೇಕು. ಯಾರೊಂದಿಗೂ ದ್ವೇಷ, ಮಾತ್ಸರ್ಯ ಹೊಂದಬಾರದು. ಆನಂದದಿಂದ ಬದುಕು ಸಾಗಿಸಬೇಕು ಎಂದು ತಿಳಿಸಿದರು.

ಗುರುವಚನ ಲಿಂಗಾಯತ ಧರ್ಮಕ್ಕೆ ಅಕ್ಕ ಅನ್ನಪೂರ್ಣತಾಯಿ ಅವರ ವಿಶೇಷ ಕೊಡುಗೆ. ಬಸವಣ್ಣನವರ ಕರಣ ಹಸಿಗೆ ಮತ್ತು ಪ್ರಭುದೇವರ ಪದಮಂತ್ರ ಗೋಪ್ಯಗಳು ಗ್ರಂಥದಲ್ಲಿವೆ ಎಂದು ಸಾಹಿತಿ ರಮೇಶ ಮಠಪತಿ ಹೇಳಿದರು.

ಅಕ್ಕ ಅವರು 2008 ರಲ್ಲಿ ಗುರುವಚನದ ಮೊದಲ ಮುದ್ರಣ ಮಾಡಿಸಿದ್ದರು. ಗ್ರಂಥ ಈವರೆಗೆ 12 ಮುದ್ರಣಗಳನ್ನು ಕಂಡಿದೆ. 12 ಸಾವಿರ ಮನೆಗಳಿಗೆ ಗ್ರಂಥ ತಲುಪಿದೆ ಎಂದು ತಿಳಿಸಿದರು.

ಎರಡು–ಮೂರು ವರ್ಷಗಳಿಂದ ಗ್ರಂಥದ ಪ್ರತಿಗಳು ಇಲ್ಲದ ಕಾರಣ ಪ್ರಭುದೇವರು ಗ್ರಂಥದ 13ನೇ ಮುದ್ರಣ ಮಾಡಿಸಿ ಶರಣ ಲೋಕಕ್ಕೆ ಸಮರ್ಪಿಸಿದ್ದಾರೆ. ಅಕ್ಕನವರ ಕಾರ್ಯ ಮುಂದುವರಿಸಿ, ಹಳ್ಳಿ ಹಳ್ಳಿಗಳಲ್ಲಿ ಗ್ರಂಥದ ಮೆರವಣಿಗೆ ಮಾಡುತ್ತ ವಚನ ವಿಜಯೋತ್ಸವ ಆಚರಿಸುತ್ತಿರುವುದು ಶ್ಲಾಘನೀಯ ಎಂದರು.

ಬಸವಕಲ್ಯಾಣದ ಜೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ವೀರೇಶ ಕುಂಬಾರ ಕಾರ್ಯಕ್ರಮ ಉದ್ಘಾಟಿಸಿದರು. ಸ್ಟೇಟ್ ಬ್ಯಾಂಕ್ ಆಫ್ ಹೈದರಾಬಾದ್ ನಿವೃತ್ತ ವ್ಯವಸ್ಥಾಪಕ ಕರಬಸಪ್ಪ ಬೀದೆ ಗುರುವಚನ ಗ್ರಂಥದ 13ನೇ ಆವೃತ್ತಿ ಬಿಡುಗಡೆ ಮಾಡಿದರು. ನಿವೃತ್ತ ಎಎ???ಐ ಮಾರುತಿ ಪಾಟೀಲ ಅಧ್ಯಕ್ಷತೆ ವಹಿಸಿದ್ದರು.

ಪರುಷಕಟ್ಟೆಯ ಚನ್ನಬಸವಣ್ಣ ಪ್ರಾರ್ಥನೆಗೈದರು. ಕಲ್ಪನಾ ಬೀದೆ ವಚನ ಗಾಯನ ಮಾಡಿದರು. ನೀಲಾಂಬಿಕೆ ಶಿವಕುಮಾರ ಪಾಖಾಲ್ ಭಕ್ತಿ ದಾಸೋಹಗೈದರು. ಶಿವಕುಮಾರ ಪಾಖಾಲ್ ಸ್ವಾಗತಿಸಿದರು.

# ಬಸವ ತತ್ವ ಬೆಳೆಸಿದ್ದು ಮಾತಾಜಿ:ಹುಲಸೂರ ಶ್ರೀ



ಮಲ್ಲಮ್ಮನುಡಿವಾರ್ತೆ ಬೀದರ. ಮಾ.25: 21ನೇ ಶತಮಾನದಲ್ಲಿ ಕರ್ನಾಟಕದಾದ್ಯಂತ ಬಸವ ತತ್ವವನ್ನು ಪ್ರಭಾವಶಾಲಿಯಾಗಿ ಬೆಳೆಸಿದ್ದ ಶ್ರೇಯ ಜಗದ್ಗುರು ಮಾತೆ ಮಹಾದೇವಿ ಅವರಿಗೆ ಸಲ್ಲುತ್ತದೆ ಎಂದು ಹುಲಸೂರಿನ ಶಿವಾನಂದ ಸ್ವಾಮೀಜಿ ಹೇಳಿದರು.

ನಗರದ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಭಾನುವಾರ ನಡೆದ ಜಗದ್ಗುರು ಮಾತೆ ಮಹಾದೇವಿ ಸಂಸ್ಮರಣೆ ಕಾರ್ಯಕ್ರಮ ಹಾಗೂ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಮಾಸಿಕ ಸಭೆಯ ಸಾನಿಧ್ಯ ವಹಿಸಿ ಅವರು ಮಾತನಾಡಿದರು.

ಮಾತಾಜಿ ಅವರು ಬಸವ ತತ್ವಪ್ರಚಾರಕ್ಕೆ ಹೊಸ ಆಯಾಮ ನೀಡಿದ್ದರು. ಅವರಿಂದ ಪ್ರೇರಣೆ ಪಡೆದ ಅನೇಕರು ಇಂದು ಬಸವ ತತ್ವಪ್ರಚಾರಕರಾಗಿದ್ದಾರೆ ಎಂದು ತಿಳಿಸಿದರು.

ಇಂದು ಎಲ್ಲ ಬಸವ ಪರ ಸಂಘಟನೆಗಳು ಒಂದಾಗಿ, ಒಮ್ಮನಸ್ಸಿನಿಂದ ಬಸವಣ್ಣನವರ ತೇರು ಎಳೆಯಬೇಕಾಗಿದೆ ಎಂದರು.

ನೇತೃತ್ವ ವಹಿಸಿದ್ದ ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು ಮಾತನಾಡಿ, ಬಸವಣ್ಣನವರು ಲಿಂಗಾಯತ ಧರ್ಮದ ಗುರು ಎಂದು ಹೆಚ್ಚು ಪ್ರಚಾರ ಮಾಡಿದ ಕೀರ್ತಿ ಮಾತೆ ಮಹಾದೇವಿ ಅವರದ್ದು ಎಂದು ಹೇಳಿದರು.

ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕ ಕ್ರಿಯಾಶೀಲವಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮಾತನಾಡಿ, ಮಹಾಸಭಾದಿಂದ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಪ್ರತಿ ತಿಂಗಳ ಅಮಾವಾಸ್ಯೆಯಂದು ಬಸವ ತತ್ವದ ಕುರಿತ ಚಿಂತನ–ಮಂಥನದ 'ವಚನ ಮಂಟಪ' ಕಾರ್ಯಕ್ರಮ ಹಮ್ಮಿಕೊಳ್ಳಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಬಸವಾದಿ ಶರಣರ ತತ್ವಗಳ ಕುರಿತು ಸಂಪನ್ಮೂಲ ವ್ಯಕ್ತಿಗಳು ಉಪನ್ಯಾಸ ನೀಡಲಿದ್ದಾರೆ ಎಂದು ಹೇಳಿದರು.

ಬಸವ ಜಯಂತಿಯ ನಂತರ ನಗರದಲ್ಲಿ ಮಹಾಸಭಾದಿಂದ ಪ್ರಕಟಿಸಲಾದ ವಚನ ದರ್ಶನ ಮಿಥ್ಯ ವರ್ಸಸ್ ಸತ್ಯ ಕೃತಿ ಬಿಡುಗಡೆ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ತಿಳಿಸಿದರು.

ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ, ಜಾಗತಿಕ ಲಿಂಗಾಯತ ಮಹಾಸಭಾ ಕೇಂದ್ರ ಸಮಿತಿಯ ಹಿರಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ ಮಾತನಾಡಿದರು.

ರಾಷ್ಟ್ರೀಯ ಬಸವ ದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ, ಮಹಾಸಭಾ ಜಿಲ್ಲಾ ಘಟಕದ ಹಿರಿಯ ಉಪಾಧ್ಯಕ್ಷ ಸಿದ್ದಯ್ಯ ಕಾವಡಿ, ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಜೊನ್ನಿಕೇರಿ, ಖಜಾಂಚಿ ವೀರಭದ್ರಪ್ಪ ಬುಯ್ಯಾ, ಬಸವಕಲ್ಯಾಣ ತಾಲ್ಲೂಕು ಘಟಕದ ಅಧ್ಯಕ್ಷ ಬಸವರಾಜ ತೊಂಡಾರೆ, ವಕೀಲ ಗಂಗಶೆಟ್ಟಿ ಪಾಟೀಲ, ಪ್ರಮುಖರಾದ ರಾಜೇಂದ್ರಕುಮಾರ ಗಂದಗೆ, ಆನಂದ ದೇವಪ್ಪ, ಬಸವರಾಜ ಭತಮುರ್ಗೆ, ಬಸವರಾಜ ಪಾಟೀಲ ಹಾರೂರಗೇರಿ, ಬಾಬುರಾವ್ ದಾನಿ, ಕಂಟೆಪ್ಪ ಗಂದಿಗುಡಿ, ಸುವರ್ಣಾ ಧನ್ನೂರ, ನೀಲಮ್ಮ ರೂಗನ್, ಸಂಜುಕುಮಾರ ಪಾಟೀಲ, ಗಣೇಶ ಬಿರಾದಾರ, ರವಿ ಪಾಪಡೆ, ಮಲ್ಲಿಕಾರ್ಜುನ ಪಂಚಾಕ್ಷರಿ ಉಪಸ್ಥಿತರಿದ್ದರು.

ಲಕ್ಷ್ಮಿ ಬಿರಾದಾರ ವಚನ ಗಾಯನ ನಡೆಸಿಕೊಟ್ಟರು. ಜಯದೇವಿ ಯದಲಾಪುರೆ ಸ್ವಾಗತಿಸಿದರು.

ಯೋಗೇಂದ್ರ ಯದಲಾಪುರೆ ನಿರೂಪಿಸಿದರು. ಸುರೇಶ ಸ್ವಾಮಿ ವಂದಿಸಿದರು.

## ನಾಳೆ, ನಾಡಿದ್ದು ಬೆಂಗಳೂರಿನಲ್ಲಿ ಒಳ ಮೀಸಲಾತಿ ಜಾರಿ ಸಂಬಂದ ವಿಚಾರ ಸಂಕಿರಣ:

## ಸಮಾಜ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಫರ್ನಾಂಡಿಸ್ ಹಿಪ್ಪಳಗಾಂವ ಕರೆ



### ಒಳ ಮೀಸಲಾತಿ ಜಾರಿಗೆ ರಾಜಕೀಯ ಷಡ್ಯಂತ್ರ ಅಡ್ಡಿ: ಫರ್ನಾಂಡಿಸ್

ಒಳ ಮೀಸಲಾತಿ ಜಾರಿ ವಿಳಂಬವಾಗಲು ರಾಜಕೀಯ ಷಡ್ಯಂತ್ರವೇ ಕಾರಣ ಎಂದು ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ರಾಜ್ಯ ಕಾರ್ಯಾಧ್ಯಕ್ಷ ಫರ್ನಾಂಡಿಸ್ ಹಿಪ್ಪಳಗಾಂವ ತಿಳಿಸಿದರು.

ಪತ್ರಕರ್ತರ ಪ್ರಶ್ನೆಯೊಂದಕ್ಕೆ ಉತಗತರಿಸಿದ ಅವರು, ಎ.ಐ.ಸಿ.ಸಿ ಅಧ್ಯಕ್ಷ ಡಾ.ಮಲ್ಲಿಕಾರ್ಜುನ್ ಖರ್ಗೆ ಹಾಗೂ ಹಾಲಿ ಸಮಾಜ ಕಲ್ಯಾಣ ಸಚಿವ ಹೆಚ್.ಸಿ ಮಹಾದೇವಪ್ಪ ಅವರೆ ನಮ್ಮ ಹಾಗೂ ಪರಿಶಿಷ್ಟ ಬಲಗೈ ಬಂಧುಗಳ ಮಧ್ಯ ಬಿರುಕು ಮೂಡಿಸಲು ಪ್ರಯತ್ನಿಸಿರುವರು. ಆದರೆ ನಾವಿಬ್ಬರು ಯಾವತ್ತು ಒಂದೆ ನಾಣ್ಯದ ಮುಖಗಳು. ಹಳ್ಳಗಳಲ್ಲಿ ನಮಗೆ ಹಾಗೂ ಪರಿಸದಿಷ್ಟ ಬಲಗೈ ಜನಗಳಿಗೆ ಉತ್ತಮ ಬಾಂಧವ್ಯ ಇದೆ. ಸಂಬಂಧ ಸರಿಯಾಗಿದೆ. ಹಾಲಿನಂಥ ನಮ್ಮ ಸಂಬಂಧದಲ್ಲಿ ಹುಳಿ ಹಿಂಡುವ ಕಾರ್ಯ ಈ ನಾಯಕರು ಬಿಡಬೇಕು ಎಂದರು.

ಇಂದು ಒಳಮೀಸಲಾತಿ ವಿರೋಧಿಸುತ್ತಿರುವ ಎಸ್.ಸಿ ರೈಟ್ ಸಂಘಟನೆಗಳು ಎರಡು ವರ್ಷಗಳ ಹಿಂದಿನ ಹೋರಾಟ ನೆನಪು ಮಾಡಲಿ. ಡಿ.ಎಸ್.ಎಸ್ ರಾಜ್ಯ ಸಂಚಾಲಕ ಡಿ.ಜಿ ಸಾಗರ ಹಾಗೂ ಮಾವಳ್ಳಿ ಶಂಕರ ಇಬ್ಬರು ಬೆಂಗಳೂರಿನ ಹೋರಾಟ ಸಂದರ್ಭದಲ್ಲಿ ಒಳ ಮೀಸಲಾತಿ ಹೋರಾಟ ಜಾರಿಯಾಗಬೇಕೆಂದು ಒತ್ತಾಯಿಸಿದ್ದರು. ಈಗ ಅವರೆ ವಿರೋಧಿಸುತ್ತಿರುವುದು ಎಷ್ಟರ ಮಟ್ಟಿಗೆ ಸರಿ? ಎಂದು ಪ್ರಶ್ನೆ ಮಾಡಿದರು.

ಕಾಂತರಾಜ ವರದಿ ಜಾರಿ ಮಾಡದೇ ಸದಾಶಿವ ಆಯೋಗದ ವರದಿ ಹಾಗೂ ಮಾಧುಸ್ವಾಮಿ ಅವರ ವರದಿ ಜಾರಿ ಮಾಡಬೇಕು. ಎರಡು ತಿಂಗಳ ಹಿಂದೆ ನಾಗಮೋಹನದಾಸ ವರದಿ ಜಾರಿ ಮಾಡುವುದಾಗಿ ಹೇಳಿದ್ದರು. ಆದರೆ ಅದು ವಿಳಂಬವಾಗುತ್ತಿರುವುದಕ್ಕೆ ಕಳವಳ ವ್ಯಕ್ತಪಡಿಸಿದರು.

ಸಮಿತಿಯ ಜಿಲ್ಲಾಧ್ಯಕ್ಷ ವಿಜಯಕುಮಾರ ಹಿಪ್ಪಳಗಾಂವ, ಉಪಾಧ್ಯಕ್ಷ ಕಮಲಾಕರ ಹೆಗಡೆ, ಜಿಲ್ಲಾ ವಕ್ತಾರ ಶಿವಣ್ಣ ಹಿಪ್ಪಳಗಾಂವ, ಜಿಲ್ಲಾ ಕಾರ್ಯದರ್ಶಿ ದತ್ತಾತ್ರೇಯ ಜ್ಯೋತಿ, ಸಮಾಜ ಮುಖಂಡ ಸುಧಾಕರ ಸೂರ್ಯವಂಶಿ, ಮಹಾ ಪ್ರಧಾನ ಕಾರ್ಯದರ್ಶಿ ರಾಹುಲ ನಂದಿ ಪತ್ರಿಕಾಗೋಷ್ಠಿಯಲ್ಲಿದ್ದರು.

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 25 : ಈ ತಿಂಗಳ 27 ಹಾಗೂ 28 ರಂದು ರಾಜ್ಯ ರಾಜ್ಯಧಾನಿ ಬೆಂಗಳೂರಿನ ವಸಂತ ನಗರದಲ್ಲಿರುವ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ರಾಷ್ಟ್ರಾಧ್ಯಕ್ಷರಾದ ಮಂದಾಕೃಷ್ಣ ಮಾದಿಗ ಅವರ ಮಾರ್ಗದರ್ಶನದಲ್ಲಿ ಒಳ ಮೀಸಲಾತಿ ಜಾರಿ ಕುರಿತ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಎಂದು ಸಮಿತಿ ರಾಜ್ಯ ಕಾರ್ಯಾಧ್ಯಕ್ಷ ಫರ್ನಾಂಡಿಸ್ ಹಿಪ್ಪಳಗಾಂವ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, 27ರಂದು ಕಾರ್ಯಾಗಾರ ಹಾಗೂ ರಾಜ್ಯ ಕಾರ್ಯಕಾರಿಣಿ ಸಭೆ ಜರುಗುವುದು. 28ರಂದು ಒಳ ಮೀಸಲಾತಿ ಬೆಂಬಲಿಸುವ ಎಲ್ಲ ಸಂಘಟನೆಗಳ ಪ್ರಮುಖರು, ಕಾರ್ಯಕರ್ತರು, ಐ.ಎ.ಎಸ್, ಐ.ಪಿ.ಎಸ್, ಕೆ.ಎ.ಎಸ್ ಹಾಲಿ, ಮಾಜಿ ಅಧಿಕಾರಿಗಳು, ಹಾಲಿ, ಮಾಜಿ ಶಾಸಕರು, ಸಚಿವರು ಜೊತೆಗೆ ಮಾದರ ಚನ್ನಯ್ಯ ಸ್ವಾಮಿಜಿಗಳು ಸೇರಿದಂತೆ ಇತರೆ ಮಠಾಧೀಶರು ಪಾಲ್ಗೊಳ್ಳುವರು. ನಂತರ ಮಧ್ಯಾಹ್ನದ ಬಳಿಕ ಮುಂದಿನ ಹೋರಾಟದ ಬಗ್ಗೆ ಮಂದಾಕೃಷ್ಣ ಮಾದಿಗ ಅವರ ನೇತೃತ್ವದಲ್ಲಿ ಮೇಲಿನ ಎಲ್ಲ ಮಹನಿಯರ ಜೊತೆ ಮುಂದಿನ ಹೋರಾಟದ ಬಗ್ಗೆ ವಿಶೇಷ ಸಭೆ ಜರುಗುವುದು. ಈ ಎರಡು ದಿವಸದ ಕಾರ್ಯಾಗಾರ ಹಾಗೂ ಸಭೆಯಲ್ಲಿ ಜಿಲ್ಲೆಯ ಸಮಾಜ ಬಾಂಧವರು, ವಕಿಲರು, ಒಳ ಮೀಸಲಾತಿ ಪರ ಹೋರಾಟಗಾರರು, ಸಂಘಟನೆಗಳ ಪ್ರಮುಖರು, ಒಟ್ಟಾರೆ ಒಳ ಮೀಸಲಾತಿ ಪರ ಬೆಂಬಲಿಸುವ ಎಲ್ಲರು ಪಾಲ್ಗೊಳ್ಳಬೇಕೆಂದು ಫರ್ನಾಂಡಿಸ್ ಕರೆ ನೀಡಿದರು.

## ದುಬೈನಲ್ಲಿ ಕನ್ನಡ ಕವನ ವಾಚಿಸಿದ ಟೋಕರೆ



ಬೀದರ. ಮಾ. 25 : ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಕೋಶಾಧ್ಯಕ್ಷ ಶಿವಶಂಕರ ಟೋಕರೆ ಅವರು ದುಬೈನಲ್ಲಿ ಕನ್ನಡ ಕವನ ವಾಚಿಸಿ ಗಮನ ಸೆಳೆದಿದ್ದಾರೆ.

ದುಬೈನ ಇಂಡಿಯಾ ಇಂಟರ್‌ನ್ಯಾಷನಲ್ ಐಕಾನ್ ಅವಾರ್ಡ್ ವೇದಿಕೆಯಲ್ಲಿ ಕನ್ನಡದಲ್ಲಿ ಕವನ ವಾಚನ ಮಾಡಿ ಕನ್ನಡಾಭಿಮಾನ ಮೆರೆದಿದ್ದಾರೆ.

ಸನ್ಮಾನ: ದುಬೈನಲ್ಲಿ ಕನ್ನಡ ಕವನ ವಾಚಿಸಿದ್ದಕ್ಕಾಗಿ ರಾಜ್ಯ ಲಿಂಗಾಯತ ನೌಕರರ ಸಂಘದ ರಾಜ್ಯ ಅಧ್ಯಕ್ಷರೂ ಆದ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ ಶಿವರಾಜ ಕಪಲಾಪುರೆ ನಗರದಲ್ಲಿ ಮಂಗಳವಾರ ಟೋಕರೆ ಅವರನ್ನು ಶಾಲು ಹೊದಿಸಿ ಸನ್ಮಾನಿಸಿದರು. ಟೋಕರೆ ಅವರು ವಿದೇಶದಲ್ಲಿ ಮಾತೃಭಾಷೆ ಅಭಿಮಾನ ಮೆರೆದಿದ್ದಾರೆ. ಕನ್ನಡದ ಕೀರ್ತಿ ಹೆಚ್ಚಿಸಿದ್ದಾರೆ ಎಂದು ಅವರು ಹೇಳಿದರು.

ಜಿಲ್ಲಾ ಲಿಂಗಾಯತ ನೌಕರರ ಸಂಘದ ಅಧ್ಯಕ್ಷ ದಿಲೀಪ್ ಡೊಂಗರೆ ಇದ್ದರು.

# ರೇವೂರ (ಬಿ) ಗ್ರಾಮದಲ್ಲಿ ದೇವದಾಸಿ ಮಹಿಳೆಯರಿಗೆ ಆರೋಗ್ಯ ತಪಾಸಣಾ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮಾ.25: ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ದೇವದಾಸಿ ಪುನರ್ಸವತಿ ಯೋಜನೆ ಕಲಬುರಗಿ ಯೋಜನೆಯಡಿ ಮಾಜಿ ದೇವದಾಸಿ ಮಹಿಳೆಯರಿಗಾಗಿ ತಾಲೂಕು ಮಟ್ಟದ ಆರೋಗ್ಯ ತಪಾಸಣಾ ಶಿಬಿರವನ್ನು ಇತ್ತೀಚೆಗೆ ಅಫಜಲಪೂರ ತಾಲೂಕಿನ ರೇವೂರ (ಬಿ) ಗ್ರಾಮದ ಪ್ರಾಥಮಿಕ ಆರೋಗ್ಯ ಗ್ರಾಮದಲ್ಲಿ ಆಯೋಜಿಸಲಾಯಿತು.

ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ರೇವೂರ (ಬಿ) ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಪ್ರಸನ್ನ ಕಟ್ಟಿ ಅವರು ಮಾತನಾಡಿ, ದೇವದಾಸಿ ಮಹಿಳೆಯರಿಗೆ ಪುನರ್ವಸತಿ ಕಲ್ಪಿಸಿ ಸ್ವಾವಲಂಭಿ ಜೀವನ ನಡೆಸಲು ಅನುಕೂಲವಾಗುವಂತೆ ರಾಜ್ಯ ಸರ್ಕಾರವು ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ದೇವದಾಸಿ ಪುರ್ವಸತಿ ಯೋಜನಾ ಕಚೇರಿಯಿಂದ ಸಿಗಬಹುದಾದ ಸೌಲಭ್ಯಗಳ ಸದುಪಯೋಗ ಪಡೆಯಬೇಕು.

ಈ ಶಿಬಿರದಲ್ಲಿ ತಮ್ಮ ರಕ್ತ ತಪಾಸಣೆ, ಬಿ.ಪಿ, ಶುಗರ್, ಮತ್ತಿತರ ಕಾಯಿಲೆಗಳಿಗೆ ತಪಾಸಣೆ ಮಾಡಿಕೊಂಡು ಔಷಧೋಪಚಾರ ಪಡೆದು ಆರೋಗ್ಯಕರ ಜೀವನ ನಡೆಸಬೇಕು ಎಂದರು.

ಕಾರ್ಯಕ್ರಮದಲ್ಲಿ ರೇವೂರ(ಬಿ) ಗ್ರಾಮದ ಮುಖಂಡ ಹಸನಪ್ಪ ಮ್ಯಾಕೇರಿ, ನಿಗಮದ ಯೋಜನಾನುಷ್ಠಾನಾಧಿಕಾರಿ ಬಸವರಾಜ ಆರ್. ನಿಂಬರ್ಗಿಕರ್, ಸ್ಟಾಪ್ ನರ್ಸ್ ಆಶಾರಾಣಿ ಹಾಗೂ ನಿಗಮದ ಯೋಜನಾನುಷ್ಠಾನಾಧಿಕಾರಿಯಾದ ವೈ. ಡಿ. ಬಡಿಗೇರ್ ಉಪಸ್ಥಿತರಿದ್ದರು.

## ಎ.ಕೆ.ಬಿ.ಎಮ್.ಎಸ್ ಬೀದರಿನಿಂದ ವೆಂಕಟೇಶ ಮೊರಖಂಡಿಕರ್ ಅವಿರೋಧ ಆಯ್ಕೆಯಾಗಲಿ : ಅಶೋಕ್ ಹಾರನಹಳ್ಳಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 25 : ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಬೀದರ್ ಜಿಲ್ಲಾ ಪ್ರತಿನಿಧಿಯಾಗಿ ಹಿರಿಯ ಪತ್ರಕರ್ತ ವೆಂಕಟೇಶ ಮೊರಖಂಡಿಕರ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಬೇಕೆಂದು ಪ್ರಸ್ತುತ ಮಹಾಸಭಾದ ರಾಜ್ಯಾಧ್ಯಕ್ಷ ಅಶೋಕ್ ಹಾರನಹಳ್ಳಿ ತಿಳಿಸಿದರು.

ಮುಂದಿನ ತಿಂಗಳು ಏಪ್ರಿಲ್ 13 ರಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯ ಕಾರ್ಯಕಾರಣಿಗೆ ಚುನಾವಣೆ ನಡೆಯಲಿದೆ ಮುಂಬರುವ 3 ವರ್ಷಕ್ಕೆ ಮಹಾಮಂಡಳಿ ಆಡಳಿತ ನಿರ್ವಹಿಸಲು ಹೊಸ ತಂಡದ ಆಯ್ಕೆ ಆಗಲಿದೆ. ಅದರಂತೆ ಡಾ.ಭಾನುಪ್ರಕಾಶ ಶರ್ಮಾ ಅವರು ಶೃಂಗೇರಿ ಶ್ರೀ ಶ್ರೀ ಭಾರತೀ ತೀರ್ಥ ಶ್ರೀಗಳ ಆಶೀರ್ವಾದದಿಂದ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆ ಆಗಬೇಕು ಎಂದು ನಮ್ಮೆಲ್ಲರ ಸಮರ್ಥನೆ ಇದೆ.

ಅದರಂತೆ ಮೊನ್ನೆ ಬೀದರಿನಲ್ಲಿ ಶೃಂಗೇರಿ ಕಿರಿಯ ಶ್ರೀಗಳಾದ ಶ್ರೀ ಶ್ರೀ ವಿದುಶೇಖರ ಭಾರತಿ ತೀರ್ಥ ಸ್ವಾಮೀಜಿ ಅವರ ಆಜ್ಞೆಯಂತೆ ಬ್ರಾಹ್ಮಣ ಬಾಂಧವರು ಒಗ್ಗಟ್ಟಿನಿಂದ ಹಿರಿಯ ಪತ್ರಕರ್ತ ವೆಂಕಟೇಶ ಮೊರಖಂಡಿಕರ್ ಅವರನ್ನು ಜಿಲ್ಲಾ ಪ್ರತಿನಿಧಿಯಾಗಿ ಮತ್ತೊಮ್ಮೆ ಸೇವೆ ಸಲ್ಲಿಸಲು ಆಶೀರ್ವದಿಸಿದ್ದಾರೆ.

ಇಂದು ಬೆಂಗಳೂರಿನ ಬನಶಂಕರಿಯ ಗಾಯತ್ರಿ ಭವನದಲ್ಲಿ ಹಿರಿಯ ಪತ್ರಕರ್ತ ವೆಂಕಟೇಶ ಮೊರಖಂಡಿಕರ್ ಮಹಾ ಸಭಾದ ಬೀದರ ಜಿಲ್ಲಾ ಪ್ರತಿನಿಧಿಯಾಗಿ ನಾಮಪತ್ರ ಸಲ್ಲಿಸಿದ್ದು ಜಿಲ್ಲೆಯ ವಿಪ್ರ ಬಾಂಧವರು ಇವರ ಅವಿರೋಧ ಆಯ್ಕೆ ಮಾಡಬೇಕೆಂದು ಅಶೋಕ ಹಾರನಹಳ್ಳಿ ಮನವಿ ಮಾಡಿದರು.

ನಾಮಪತ್ರ ಸಲ್ಲಿಸಿದ ಸಂದರ್ಭದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯಧ್ಯಕ ಸ್ಥಾನದ ಪ್ರತಿನಿಧಿ ಡಾ. ವೇದ ಬ್ರಹ್ಮ ಭಾನುಪ್ರಕಾಶ ಶರ್ಮಾ, ಉಪಾಧ್ಯಕ್ಷರಾದ ಡಾ. ರಾಘವೇಂದ್ರ ಭಟ್, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಶಾಸಕರಿಂದ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ

# ನೀರಿನ ಸಮಸ್ಯೆ ಬಗೆಹರಿಸಿ: ಶಾಸಕ ಪ್ರಭು ಚವ್ಹಾಣ



ಮಲ್ಲಮ್ಮ ನುಡಿ ವಾರ್ತೆ

ಔರಾದ.ಬೇಸಿಗೆಯ ತೀವ್ರತೆ ಹೆಚ್ಚುತ್ತಿದ್ದಂತೆ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕಿನ ಸಾಕಷ್ಟು ಗ್ರಾಮಗಳಲ್ಲಿ ನೀರಿನ ಸಮಸ್ಯೆಯಾಗುತ್ತಿರುವ ಬಗ್ಗೆ ದೂರುಗಳು ಬರುತ್ತಿದ್ದು, ಅಧಿಕಾರಿಗಳು ಚುರುಕಿನಿಂದ ಕೆಲಸ ಮಾಡಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು.ಬಿ ಚವ್ಹಾಣ ಅವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮತ್ತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಔರಾದ(ಬಿ) ತಾಲ್ಲೂಕು ಪಂಚಾಯತ್ ಕಛೇರಿ ಸಭಾಂಗಣದಲ್ಲಿ ಮಾರ್ಚ್ 25ರಂದು ಕುಡಿಯುವ ನೀರಿಗೆ ಸಂಬಂಧಿಸಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಅವರು ಮಾತನಾಡಿದರು.

ನೀರಿನ ಸಮಸ್ಯೆಯ ಕುರಿತು ಪಂಚಾಯಿತಿ ಅಧಿಕಾರಿಗಳಿಂದ ಗ್ರಾಮವಾರು ಮಾಹಿತಿ ಪಡೆದ ಶಾಸಕರು, ಪ್ರತಿದಿನ ಒಂದಿಲ್ಲೊಂದು ಗ್ರಾಮದ ಜನರು ನೀರಿನ ಸಮಸ್ಯೆ ಹೇಳಿಕೊಂಡು ಬರುತ್ತಿದ್ದಾರೆ. ಸಾರ್ವಜನಿಕರಿಂದ ನಿರಂತರ ದೂರುಗಳು ಬರುತ್ತಿವೆ. ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಕಛೇರಿಯಲ್ಲಿ ಲಭ್ಯವಿದ್ದು, ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಖಾಸಗಿ ಬೋರ್‌ವೆಲ್ ಇಲ್ಲವೇ ಹೊಸ ಬೋರ್‌ವೆಲ್ ಕೊ-ರೆಸಿ ನೀರು ಸರಬರಾಜು ಮಾಡಬೇಕು. ಸಾಧ್ಯವಾದಷ್ಟು ಸ್ಥಳೀಯವಾಗಿಯೇ ಪರಿಹಾರ ಕಲ್ಪಿಸಬೇಕು. ಸಮಸ್ಯೆಯ ತೀವ್ರತೆ ಹೆಚ್ಚಿರುವ ಗ್ರಾಮಗಳಲ್ಲಿ ಮಾತ್ರ ಟ್ಯಾಂಕರ್ ಮೂಲಕ ನೀರು ಪೂರೈಸಲು ಆದ್ಯತೆ ಕೊಡಬೇಕೆಂದು ಹೇಳಿದರು.

ಇನ್ನೆರಡು ತಿಂಗಳು ನೀರಿನ ಸಮಸ್ಯೆ ಹೆಚ್ಚಿನ ಪ್ರಮಾಣದಲ್ಲಿರುತ್ತದೆ. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಒಳಗೊಂಡು ಎಲ್ಲ ತಾಲ್ಲೂಕು ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ತಾಲ್ಲೂಕು ಕೇಂಧ್ರದಲ್ಲಿ ವಾಸ್ತವ್ಯ ಮಾಡಬೇಕು. ಎಲ್ಲರೂ ತಮ್ಮ ಮೊಬೈಲ್ ಫೋನ್‌ಗಳನ್ನು ಚಾಲ್ತಿಯಲ್ಲಿಡಬೇಕು. ಸಾರ್ವಜನಿಕರ ಕರೆಗಳಿಗೆ ತಕ್ಷಣ ಸ್ಪಂದಿಸಬೇಕು. ಸಣ್ಣಪುಟ್ಟ ಸಮಸ್ಯೆಗಳಿದ್ದಲ್ಲಿ ತಕ್ಷಣ ಸರಿಪಡಿಸಿಕೊಳ್ಳಬೇಕು. ಎಲ್ಲಿಯೂ ನೀರಿನ ಕೊರತೆ-ಯಾಗದಂತೆ ನೋಡಿಕೊಳ್ಳಬೇಕೆಂದು ಸೂಚಿಸಿದರು.

ಜೆಜೆಎಂ ಕಾಮಗಾರಿ ಸಮರ್ಪಕವಾಗಿ ನಡೆದರೆ ಇಷ್ಟೊಂದು ಸಮಸ್ಯೆ ಇರುತ್ತಿರಲಿಲ್ಲ. ಗುತ್ತಿಗೆದಾರರು ಮತ್ತು ಅಧಿಕಾರಿಗಳ ಕಾರಣದಿಂದಾಗಿ ಯೋಜನೆ ಸಂಪೂರ್ಣ ವಿಫಲವಾಗಿದೆ. ಈ ಯೋಜನೆಯಡಿ ಅವಕಾಶವಿರುವ ಕಡೆ ಹೊಸ ಬಾವಿ, ಕೊಳವೆ ಬಾವಿ ಕೊರೆಸಿಕೊಳ್ಳಬೇಕು. ಕೆಲವು ಕಡೆ ಜೆಸ್ಕಾಂನಿಂದ ಕೆಲಸ ಬಾಕಿ ಉಳಿದಿದೆ ಎಂದು ಅಧಿಕಾರಿಗಳು ಶಾಸಕರ ಗಮನಕ್ಕೆ ತಂದಾಗ ಕುಡಿಯುವ ನೀರಿನ ಕೆಲಸಗಳನ್ನು ಆದ್ಯತೆಯ ಮೇಲೆ ಮಾಡಿಕೊಡಬೇಕು. ಈ ವಿಷಯದಲ್ಲಿ ವಿಳಂಬಕ್ಕೆ ಆಸ್ಪದ ಕೊಡಬಾರದೆಂದು ಜೆಸ್ಕಾಂ ಅಧಿಕಾರಿಗೆ ತಿಳಿಸಿದರು.

ವಸತಿ ಯೋಜನೆಯ ಕುರಿತು ಪ್ರಗತಿ ಪರಿಶೀಲನೆ ನಡಸಿದ ಶಾಸಕರು, ಎಲ್ಲ ಗ್ರಾಮ ಪಂಚಾಯಿತಿಗಳಿಗೆ ಗುರಿ ನಿಗದಿಪಡಿಸಲಾಗಿದೆ. ಮಾಸಾಂತ್ಯದೊಳಗೆ ಪ್ರಗತಿ ಕೆಲಸ ಕಾಣಿಸಬೇಕು. ವಸತಿ ರಹಿತ ಕಡುಬಡವರಿಗೆ ಮನೆಗಳನ್ನು ಒದಗಿಸಬೇಕೆಂದು. ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವವರ ವಿರುದ್ಧ ಕಠಿಣ ಕ್ರಮ ಜರುಗಿಸುವಂತೆ ಇಓಗೆ ನಿರ್ದೇಶನ ನೀಡಿದರು.

ಔರಾದ(ಬಿ) ಪಟ್ಟಣದ ಹಲವೆಡೆ ಕುಡಿಯುವ ನೀರಿನ ಸಮಸ್ಯೆ ಹೆಚ್ಚಿನ ಪ್ರಮಾಣದಲ್ಲಿದೆ. ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು ಗಂಭೀರತೆಯಿಂದ ಕೆಲಸ ಮಾಡಬೇಕು. ಯಾವೊಂದು ವಾರ್ಡ್‌ನಲ್ಲಿಯೂ ನೀರಿನ ಕೊರತೆಯಾಗಬಾರದೆಂದು ಹೇಳಿದರು.

ಬಿಲ್ ಪಾವತಿಯಲ್ಲಿ ಲೋಪ-ಅಧಿಕಾರಿಗಳು ತರಾಟೆಗೆ:* ಜಲ ಜೀವನ್ ಮಿಷನ್ ಯೋಜನೆ(ಜೆಜೆಎಂ) ಅಡಿ ಬಿಲ್ ಪಾವತಿಗೆ ಸಂಬಂಧಿಸಿದಂತೆ ಕಡಿಮೆ ಕೆಲಸವಾದರೂ ಗುತ್ತಿಗೆದಾರರಿಗೆ ಹೆಚ್ಚಿನ ಬಿಲ್ ಪಾವತಿಸಿದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳಿಗೆ ಶಾಸಕರು ತೀವ್ರ ತರಾಟೆಗೆ ತೆಗೆದು-ಕೊಂಡರು.

ಖೇರ್ಡಾ(ಬಿ)ನಲ್ಲಿ ಶೇ.30ರಷ್ಟು ಮಾತ್ರ ಕೆಲಸವಾಗಿದ್ದು, ಶೇ.70ರಷ್ಟು ಬಿಲ್ ಪಾವತಿಸಲಾಗಿದೆ. ಸಾವರಗಾಂವನಲ್ಲಿ ಶೇ.40ರಷ್ಟು ಕೆಲಸವಾದರೆ ಬಿಲ್ ಶೇ.60ರಷ್ಟು ಪಾವತಿಸಲಾಗಿದೆ. ಅದರಂತೆ ಹುಲ್ಯಾಳ, ಬಾವಲಗಾಂವ, ಹೊಕ್ರಾಣಾ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕೆಲಸ ಕಡಿಮೆಯಾದರೂ ಹೆಚ್ಚಿನ ಬಿಲ್ ಪಾವತಿಸಿರುವುದನ್ನು ಗಮನಕ್ಕೆ ಬರುತ್ತಿದ್ದಂತೆ ಶಾಸಕರು ಅಧಿಕಾರಿಗಳ ವಿರುದ್ಧ ಕೆಂಡಾಮಂಡಲರಾದರು. ನೀವು ಹೀಗೆ ಮಾಡುವುದರಿಂದಲೇ ಯೋಜನೆ ಸಂಪೂರ್ಣ ಹಳ್ಳ ಹಿಡಿದಿದೆ. ಇಂತಹ ಪ್ರಕರಣಗಳನ್ನು ಪತ್ತೆ ಹಚ್ಚಿ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು. ಸಂಬಂಧಪಟ್ಟ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಬೇಕೆಂದು ಸೂಚಿಸಿದರು.

ಔರಾದ(ಬಿ) ತಹಸೀಲ್ದಾರ ಮಲಶೆಟ್ಟಿ ಚಿದ್ರೆ, ಕಮಲನಗರ ತಹಸೀಲ್ದಾರ ಅಮಿತಕುಮಾರ ಕುಲರ್ಣಿ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ, ಗ್ರಾಮೀಣ ಕುಡಿಯುವ ನೀರು ಸರಬರಾಜು ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಮಾಣಿಕರಾವ ಕೆರೂರ್, ಜೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ರವಿ ಕಾರಭಾರಿ, ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ಸ್ವಾಮಿದಾಸ ಸೇರಿದಂತೆ, ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

## ತೀವ್ರ ಬೇಸಿಗೆ ಹಿನ್ನೆಲೆಯಲ್ಲಿ ಜನ-ಜಾನುವಾರುಗಳಿಗೆ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ - ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಜೈನ್




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ:25-ಬೇಸಿಗೆಗಾಲ ಪ್ರಾರಂಭಗೊಂಡಿದ್ದು, ತಾಪಮಾನ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು ಮತ್ತು ಮಾಪನಾ ಶಾಸ್ತ್ರ ಇಲಾಖೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸರ್ಕಾರದ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಶ್ರೀ ಮನೋಜ ಜೈನ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಜನರಿಗೆ ನೀರಿನ ಸಮಸ್ಯೆಯಾಗದಂತೆ ಅವಶ್ಯಕ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು. ಜಲ ಮೂಲಗಳ ಪರೀಕ್ಷಿಸಿದ ನೀರನ್ನು ಪೂರೈಸಲು ಕ್ರಮ ಕೈಗೊಳ್ಳಬೇಕು. ತೀವ್ರ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳ ಬಗ್ಗೆ ನಿಗಾಯಿಟ್ಟು ನೀರು ಪೂರೈಕೆಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.

ಪ್ರತಿ ಗ್ರಾಮ ಪಂಚಾಯತ್ ವಾರು 15ನೇ ಹಣಕಾಸು ಅನುದಾನ ಲಭ್ಯವಿದ್ದು ,ಸಂಬಂಧಪಟ್ಟ ಅಧಿಕಾರಿಗಳು ಸಕ್ರಿಯರಾಗಿ ಕಾರ್ಯನಿರ್ವಹಿಸಬೇಕು. ಜಿಲ್ಲೆಯಲ್ಲಿ ಮುಂದಿನ ಮೂರು ತಿಂಗಳು ಅವಧಿಗೆ ನೀರಿನ ಲಭ್ಯತೆ ಆಧಾರದ ಮೇಲೆ, ಪರಿಶೀಲಿಸಿ ದುರಸ್ತಿಯಲ್ಲಿರುವ ಶುದ್ಧ ಕುಡಿಯುವ ನೀರನ ಘಟಕಗಳನ್ನು ದುರಿಸ್ತಿಗೊಳಿಸ ಬೇಕು. ಪ್ರತಿ ಗ್ರಾಮ ಪಂಚಾಯತವಾರು ಯೋಜನಾ ಬದ್ಧವಾಗಿ, ಯೋಜನೆ ರೂಪಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ನೀರಿಗಾಗಿ ತುರ್ತು ಸಂದರ್ಭದಲ್ಲಿ ಅನುದಾನ ಲಭ್ಯ ಇರುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ಜಾನುವಾರು ಹಾಗೂ ಪಕ್ಷಿಗಳ ಅನುಕೂಲಕ್ಕಾಗಿ ಕುಡಿಯುವ ನೀರಿಗಾಗಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಅಡಿ ಈ ಹಿಂದೆ ನೀರಿನ ತೊಟ್ಟಿಗಳನ್ನು ನಿರ್ಮಿಸಲಾಗಿದ್ದು, ಅವುಗಳನ್ನು ಪರಿಶೀಲಿಸಿ ಸಕ್ರಿಯವಾಗಿರುವಂತೆ ನೋಡಿಕೊಳ್ಳಬೇಕು. ಅಭಿಯಾನ ರೂಪದಲ್ಲಿ ಈ ಕಾರ್ಯ ಮಾಡುವಂತೆ ಅವರು ಸೂಚಿಸಿದರು.

ಜಲಧಾರೆ ಯೋಜನೆ ಪೂರ್ಣಗೊಳ್ಳುವವರೆಗೆ ಜಲಜೀವನ ಮಿಷನ್ ಯೋಜನೆಯಡಿ ಕಾಮಗಾರಿ ಪೂರ್ಣಗೊಂಡಿರುವ ಕಡೆ ನೀರು ಲಭ್ಯವಾಗುವಂತೆ ನೋಡಿಕೊಳ್ಳಬೇಕು. ತೀವ್ರ ತಾಪಮಾನ ಇರುವ ಹಿನ್ನೆಲೆಯಲ್ಲಿ, ಈ ಕುರಿತು ಮುನ್ನೆಚ್ಚರಿಕೆಗಳ ಬಗ್ಗೆ ಸಾರ್ವಜನಿಕರಲ್ಲಿ ಪ್ರತಿ ಗ್ರಾಮವಾರು ಮುನ್ನೆಚ್ಚರಿಕೆಗಳ ಬಗ್ಗೆ ಅರಿವು ಮೂಡಿಸಬೇಕು. ಶಿಬಿರ ಏರ್ಪಡಿಸಿ ಅರಿವು ಮೂಡಿಸಬೇಕು. ವಿವಿಧ ಆಸ್ಪತ್ರೆಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸೌಲಭ್ಯ ಇರುವಂತೆ ನೋಡಿಕೊಳ್ಳಬೇಕು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ತಾಲೂಕ ಪಂಚಾಯತ್ ಕಾರ್ಯನಿರ್ವಹಣಾ ಅಧಿಕಾರಿಗಳು ಪರಸ್ಪರ ಸಮನ್ವಯತೆ ಸಾಧಿಸಿಕೊಂಡು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಅವಶ್ಯಕತೆ ಇರುವ 132 ಟೀಚಿಂಗ್ ಸ್ಟಾಫ್ ಹಾಗೂ 732 ನಾನ್ ಟೀಚಿಂಗ್ ಸ್ಟಾಫ್ ಮತ್ತು ಕ್ಲಿನಿಕಲ್ ವಿಭಾಗಕ್ಕೆ ಅವಶ್ಯಕತೆ ಇರುವ ಸಾಧನ, ಸಲಕರಣೆಗಳ ಬಗ್ಗೆ ಸಮಗ್ರ ವರದಿಯನ್ನು ಕಾಲೇಜ್ ಡೀನ್ ಮೂಲಕ ಸಲ್ಲಿಸಬೇಕು. ಅದರಂತೆ ಜಿಲ್ಲೆಯಲ್ಲಿ 150 ಅಂಗನವಾಡಿ ಕಾರ್ಯಕರ್ತೆ-ಯರ ಹಾಗೂ 311 ಅಂಗನವಾಡಿ ಸಹಾಯಕಿಯರ ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದ್ದು, ಶಾಶ್ವತ ಪರಿಹಾರ ನೀಡಿದ ಒಳ್ಳೆಯ ಕ್ರಮ ಇದಾಗಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಹಾಗೂ ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮದಿಂದ ಕೈಗೊಳ್ಳಬೇಕಾದ ಕಾಮಗಾರಿಗಳ ಬಗ್ಗೆ ಸೂಕ್ತ ಕ್ರಿಯಾಯೋಜನೆ ರೂಪಿಸಿ ಅನುಮೋದನೆ ಪಡೆಯುವಂತೆ ಸೂಚಿಸಿದರು. ಅದರಂತೆ ಕೆಕೆಆರ್‌ಡಿಬಿ ಮತ್ತು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳ ಕುರಿತು ತುಲನಾತ್ಮಕ (ಕಂಪೇರಿಟಿವ್) ವರದಿ ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಉದ್ಯೋಗ ಖಾತ್ರಿ ಯೋಜನೆ, ಸ್ವಚ್ಛ ಭಾರತ ಮಿಷನ್, ವಿವಿಧ ವಸತಿ ಸೌಲಭ್ಯಗಳು ಕಲ್ಪಿಸಲು ಗುರಿಗೆ ತಕ್ಕಂತೆ ಪ್ರಗತಿ ಸಾಧಿಸಬೇಕು. ಆಹಾರ ಇಲಾಖೆಯಿಂದ ಆಹಾರಧಾನ್ಯ ಕಳ್ಳ ಸಾಗಾಣಿಕೆ ಬಗ್ಗೆ ತೀವ್ರ ನಿಗಾ ಇಡಬೇಕು. ಸೈದಾಪುರ್ ತ್ಯಾಜ್ಯ ನಿರ್ವಹಣಾ ಘಟಕದ ಬಗ್ಗೆ ವರದಿ ಸಲ್ಲಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಸುಶೀಲ.ಬಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ: 9449732000

## ಮಹಿಳಾ ದಿನಾಚರಣೆ - ಸಾಧಕರಿಗೆ ಸನ್ಮಾನ ಮಹಿಳೆ ಭೂತಾಯಿ ಸ್ವರೂಪಿನಿ : ಜೆ.ಟಿ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-ಜನನಿ ಮತ್ತು ಜನ್ಮಭೂಮಿಯ ಋಣ ತೀರಿಸಲು ಯಾರಿಂದಲೂ ಸಾಧ್ಯವಿಲ್ಲ. ಅಂಥ ಸ್ತ್ರೀಯನ್ನು ಭೂಮಿಗೆ ಹೋಲಿಸಲಾಗಿದ್ದು, ಮಹಿಳೆ ಭೂತಾಯಿ ಸ್ವರೂಪಿನಿಯಾಗಿದ್ದಾಳೆ ಎಂದು ಬೀಳಗಿ ಶಾಸಕ ಜೆ.ಟಿ.ಪಾಟೀಲ ಹೇಳಿದರು.

ನವನಗರದ ಕಲಾಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಹಾಗೂ ಸಹಭಾಗಿತ್ವ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಂಡ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯ ಸಮಾರೋಪ ಹಾಗೂ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ತಾಯಿಗಿಂತ ಬಂಧುವಿಲ್ಲ. ಉಪ್ಪಿಗಿಂತ ರುಚಿಯಿಲ್ಲ ಎಂಬ ನಾಣ್ನುಡಿ ಅನಾದಿಕಾಲದಿಂದಲೂ ಬಂದಿದೆ. ಪ್ರತಿಯೊಬ್ಬ ಹೆಣ್ಣು ಮಗಳು ಅದೆಷ್ಟೇ ತೊಂದರೆ ಬಂದರೂ ತಾಳ್ಮೆಯಿಂದ ನಿರ್ವಹಿಸುತ್ತಾರೆ ಎಂದರು.

ಮಹಿಳೆ ಕುಟುಂಬ ನಿರ್ವಹಣೆಯಲ್ಲಿ ಯಾವ ಆರ್ಥಿಕ ತಜ್ಞರಿಗಿಂತಲೂ ಕಡಿಮೆ ಇಲ್ಲ. ಅವಿದ್ಯಾವಂತಳಾಗಿದ್ದರೂ ಕುಟುಂಬ ನಿರ್ವಹಣೆಯಲ್ಲಿ ಗಂಡ, ಅತ್ತೆ, ಮಾವ, ಮಕ್ಕಳು, ದನಕರುಗಳ ಜೋಪಾನದ ಜೊತೆಗೆ ಕುಟುಂಬದ ಎಲ್ಲ ಸದಸ್ಯರಿಗೆ ಊಟ ಬಡಿಸುವ ಗುರುತರ ಜವಾಬ್ದಾರಿ ವಹಿಸಿ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸುತ್ತಾಳೆ ಎಂದು ಪಾಟೀಲ ಹೇಳಿದರು.

ಹಿಂದೆ ಮಹಿಳೆಯರಿಗೆ ಅಡುಗೆ ಮನೆಯೇ ಸೀಮಿತವಾಗಿತ್ತು. ಆದರೆ ಇಂದು ಶೇ.50 ರಷ್ಟು ಮೀಸಲಾತಿ ರಾಜಕೀಯ ರಂಗದಲ್ಲಿಯೂ ಕಲ್ಪಿಸಲಾಗಿದೆ. ಅಲ್ಲದೇ ಇಂದು ಸ್ತ್ರೀ ಎಲ್ಲ ಕ್ಷೇತ್ರಗಳಲ್ಲೂ ಮುಂಚೂಣಿಯಲ್ಲಿದ್ದಾಳೆ. ಇತ್ತೀಚಿನ ಗಗನಯಾತ್ರಿ ಸುನಿತಾ ವಿಲಿಯಂ ಸಾಧನೆ ಮೆಚ್ಚುವಂತಹದ್ದಾಗಿದೆ. ಇಂತಹ ಅದೇಷ್ಟೋ ಮಹಿಳೆಯರು ದೇಶಕ್ಕಾಗಿ, ಸ್ವಾತಂತ್ರ್ಯಕ್ಕಾಗಿ ಶೈಕ್ಷಣಿಕ, ಕ್ರೀಡೆ ಮುಂತಾದ ಕ್ಷೇತ್ರದಲ್ಲಿ ಪ್ರಸಿದ್ದಿ ಪಡೆದಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ಮಾತನಾಡಿ, ಹೆಣ್ಣು ಅಬಲೆಯಲ್ಲ ಸಬಲೆಯಾಗಿದ್ದಾಳೆ. ಮಹಿಳೆಗೆ ನಮ್ಮ ದೇಶದಲ್ಲಿ ಸಿಗುವ ಗೌರವ, ಮಾನ್ಯತೆ ವಿಶ್ವದ ಯಾವ ದೇಶದಲ್ಲಿಯೂ ದೊರಕುವದಿಲ್ಲ. ತಾಯಿಯಾಗಿ, ಪತ್ನಿಯಾಗಿ, ಸಹೋದರಿಯಾಗಿ ನಿಲ್ಲುವಂತವಳು ಮಹಿಳೆಯಾಗಿದ್ದಾಳೆ. ಇಂದು ಹೆಣ್ಣು ಮಕ್ಕಳ ಸಂಖ್ಯೆ ಕಡಿಯಾಗುತ್ತಿರುವುದು ಆತಂಕಕಾ-ರಿಯಾಗಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಹೆಣ್ಣಿಗೆ ವಿಶಿಷ್ಟ ಸ್ಥಾನ ಮಾನ ಕೊಡುವ ನಿಟ್ಟಿನಲ್ಲಿ ಬೇಟಿ ಬಚಾವೋ ಬೇಟಿ ಪಡಾವೋ ಕಾರ್ಯಕ್ರಮ ರೂಪಿಸಿದ್ದಾರೆ ಎಂದರು.

ಜಿ.ಪಂ ಸಿಇಒ ಶಶಿಧರ ಕುರೇರ ಮಾತನಾಡಿ, ಜಿಲ್ಲೆಯ ಸ್ವಸಹಾಯ ಸಂಘಗಳು ಉತ್ತಮವಾಗಿ ಕಾರ್ಯಚಟುವಟಿಕೆಗಳನ್ನು ಮಾಡುವ ಮೂಲಕ ರಾಜ್ಯದಲ್ಲಿ ಹೆಸರು ಮಾಡಿದ್ದಾರೆ. ಇಲಾಖೆಯಿಂದ ಸಾಕಷ್ಟು ತರಬೇತಿಗಳನ್ನು ನೀಡಿ ಅವರ ಆರ್ಥಿಕ ಮಟ್ಟವನ್ನು ಹೆಚ್ಚುವಂತೆ ಮಾಡಲಾಗಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಮಾತನಾಡಿ, ಮಗುವಿಗೆ ಮೊಟ್ಟ ಮೊದಲು ನಗುವನ್ನು ಕಲಿಸಿಕೊಡುವ ಮೂಲಕ ಪರಂಪರೆಯನ್ನು ಕಲಿಸಿಕೊಡುವಲ್ಲಿ ಮಹಿಳೆಯ ಪಾತ್ರ ಹೆಚ್ಚಿನದಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಹಿಳೆಯರಿಗಾಗಿ ಸೈಬರ್ ಸುರಕ್ಷತೆ ಕುರಿತು ಡಿ.ಎಸ್.ಪಿ ಮಂಜುನಾಥ ಗಂಗಲ್, ಮಹಿಳೆಯರಲ್ಲಿ ಮಾನಸಿಕ ಒತ್ತಡ ನಿರ್ವಹಣೆ ಕುರಿತು ಮನೋರೋಗ ತಜ್ಞೆ ಡಾ.ಸೌಮ್ಯ ಎಸ್.ಪಾಟೀಲ ಉಪನ್ಯಾಸ ನೀಡಿದರು.

ಈ ಸಂಭರ್ದದಲ್ಲಿ ಸಾಧಕ ಮಹಿಳೆಯರಿಗೆ ಸನ್ಮಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಮಿತಿ ಅಧ್ಯಕ್ಷ ಡಾ.ಎಸ್.ಎಚ್.ತೆಕ್ಕೆನ್ನವರ, ಜಿ.ಪಂ ಮುಖ್ಯ ಯೋಜನಾಧಿಕಾರಿ ಪುನಿತ್ ಆರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶ್ರೀ ಅಕ್ಕಮಹಾದೇವಿ ಚೈತನ್ಯ ಪೀಠದಲಿ



ಮಲ್ಲಮ್ಮ ನುಡಿ ವಾರ್ತೆ

ಶ್ರೀಶೈಲ: ಶ್ರೀ ಅಕ್ಕಮಹಾದೇವಿ 15ನೇ ಸಂಸ್ಮರಣೋತ್ಸವ

ದ್ವಾದಶ ಜ್ಯೋತೀರ್ಲಿಂಗಗಳಲ್ಲಿ ಒಂದಾಗಿರುವ ಶ್ರೀಶೈಲ ಮಹಾಕ್ಷೇತ್ರವು ಕನ್ನಡಿಗರ ಶ್ರಧಾಭಕ್ತಿಯ ದಿವ್ಯ ತಾಣವಾಗಿದೆ. ಯುಗಾದಿಯಂದು ನಡೆಯುವ ಶ್ರೀ ಭ್ರಮರಾಂಬ ಶ್ರೀ ಮಲ್ಲಿಕಾರ್ಜುನ ಸ್ವಾಮಿರವರ ಜಾತ್ರಾ ಮಹೋತ್ಸವದಲ್ಲಿ ನಾಡಿನ ಲಕ್ಷಾಂತರ ಭಕ್ತಾದಿಗಳು ಬಂದು ಹೋಗುವರು. ತನ್ನಿಮಿತ್ತವಾಗಿ ಕರುನಾಡಿನ ಹೆಮ್ಮೆಯ ಕುವರಿ 'ಮಹಾಯೋಗಿನಿ' 'ಪರಮತಪಸ್ವಿ' ಪೂಜ್ಯ ಶ್ರೀ ಕರುಣಾದೇವಿ ಮಾತಾರವರು ತಮ್ಮ ಶ್ರೀ ಅಕ್ಕ ಮಹಾದೇವಿ ಚೈತನ್ಯ ಪೀಠದಲ್ಲಿ 'ಮಹಾಶಿವಶರಣೆ' ವೈರಾಗ್ಯನಿಧಿ ಶ್ರೀ ಅಕ್ಕಮಹಾದೇವಿಯವರ 15ನೇ ಸಂಸ್ಮರಣೋತ್ಸವನ್ನು ಮಾರ್ಚ 29 ಶನಿವಾರ ಬೆಳಗ್ಗೆ 11.30ಕ್ಕೆ ಹಮ್ಮಿಕೊಂಡಿರುವರು. ತನ್ನಿಮಿತ್ತವಾಗಿ ಅಂದು ಬೆಳಗ್ಗೆ 6.30 ಕ್ಕೆ ಚೈತನ್ಯ ಪೀಠದಿಂದ ಶ್ರೀ ಅಕ್ಕಮಹಾದೇವಿಯ ವೈಭವದ ಪಲ್ಲಕ್ಕಿ ಮೆರವಣಿಗೆ ನಡೆಯವುದು. ನಂತರ ಸಂಸ್ಮರಣೋತ್ಸವ ಸಮಾರಂಭ ನಡೆಯುವುದು. ಒಂದು ವಾರಗಳ ಕಾಲ ನಡೆಯುವ ಜಾತ್ರೆಯಲ್ಲಿ ಬರುವ ಪಾದಾಯಾತ್ರಿಗಳು ಮತ್ತು ಸಾವಿರಾರು ಜನ ಭಕ್ತಾದಿಗಳಿಗೆ ಮಹಾ ದಾಸೋಹವನ್ನು ನಡೆಯುವುದು. ವಿಶೇಷವಾಗಿ ಚೈತನ್ಯ ಪೀಠದಲ್ಲಿ ಕೊಳ್ಳೇಗಾಲ ಮತ್ತು ಮುಡುಕುತೊರೆ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನ ಪರಿಸರದ ಹದಿನೆಂಟು ಗ್ರಾಮಗಳ ಭಕ್ತಾದಿಗಳು 'ಮೈಸೂರಮ್ಮನ ಪರೀಶ ಹೆಸರಿನಲ್ಲಿ ನೂರಾರು ಜನ ಭಕ್ತರು ಪಾದಾಯಾತ್ರೆಯಿಂದ ಶ್ರೀಶೈಲಕ್ಕೆ ಬಂದು ಚೈತನ್ಯ ಪೀಠದಲ್ಲಿ ತಂಗಿ ದಾಸೋಹವನ್ನು ನೆರವೇರಿಸುವರು. ನಂತರ ಶ್ರೀ ದೇವಿ ಭ್ರಮರಾಂಭಗೆ ಅಂಗೈಯಗಲದ ಚಿನ್ನದ ತಾಳಿ ಮಂಗಳಸೂತ್ರವನ್ನು ಅರ್ಪಿಸುವುದು ವಿಶೇಷವಾಗಿದೆ. ಜಾತ್ರೆಗೆ ಬರುವ ರಾಜ್ಯದ ಭಕ್ತಾದಿಗಳು ಭಕ್ತಿ ಸೇವೆ ಮತ್ತು ಶಾಂತತೆಯಿಂದ ನಡೆದು-ಕೊಂಡು ಕರ್ನಾಟಕ ರಾಜ್ಯಕ್ಕೆ ಕೀರ್ತಿ ಗೌರವ ತರಬೇಕೆಂದು ಮತ್ತು ಶ್ರೀಶೈಲ ದೇವಸ್ಥಾನ ಆಡಳಿತ ಮಂಡಳಿಯವರು ನಾಡಿನ ಭಕ್ತರನ್ನು ಆಂಧ್ರದವರಂತೆ ಪ್ರೀತಿ ಗೌರವದಿಂದ ಕಾಣಬೇಕೆಂದು ಚೈತನ್ಯ ಪೀಠದ ಸಂಚಾಲಕರಾಗಿರುವ ಶ್ರೀ ಡಾ॥ ರಾಜಶೇಖರ ಶಿವಾಚಾರ್ಯರು ಪತ್ರಿಕಾ ಪ್ರಕಟಣೆಯಲ್ಲಿ ಕೋರಿದ್ದಾರೆ.

## ವಿಶ್ವ ಕ್ಷಯ ರೋಗ ದಿನಾಚರಣೆ : ಜಾಗೃತಿ ಜಾಥಕ್ಕೆ ಮಾಂತೇಶ್ ಎಸ್ ದರಗದ ಅವರಿಂದ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಷ್ಟ್ರೀಯ ಕ್ಷಯರೋಗ ನಿರ್ಮೂಲನ ಕಾರ್ಯಕ್ರಮದಡಿಯಲ್ಲಿ ವಿಶ್ವ ಕ್ಷಯರೋಗ ದಿನಾಚರಣೆ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಪ್ಪಳ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಕೊಪ್ಪಳ ನಗರದಲ್ಲಿ ಸೋಮವಾರ ಏರ್ಪಡಿಸಲಾದ ಜಾಗೃತಿ ಜಾಥಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಕ್ಷಯ-ರೋಗ ನಿರ್ಮೂಲನಾಧಿಕಾರಿ ಡಾ.ಶಶೀಧರ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಸೇರಿದಂತೆ ಇತರರು ಉಪಸ್ಥಿತರಿದ್ದರು. ಜಾಗೃತಿ ಜಾಥ: ಹಳೇ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಈ ಜಾಗತಿಕ ಜಾಥವು ಅಲ್ಲಿಂದ ಪ್ರಾರಂಭಗೊಂಡು ಬಸ್ ನಿಲ್ದಾಣ, ಸಿಂಪಿ ಲಿಂಗಣ್ಣ ರಸ್ತೆ, ದಿವಟರ್ ವೃತ್ತ, ಜವಾಹಾರ ರಸ್ತೆ ಮಾರ್ಗವಾಗಿ ಸಾಹಿತ್ಯ ಭವನದವರೆಗೆ ನಡೆಯುವ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿ. ಜಾಥದಲ್ಲಿ ಜಿಲ್ಲೆಯ ಆರೋಗ್ಯ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಆಶಾ ಕಾರ್ಯಕರ್ತರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.




ಹುಮನಾಬಾದ:ತಾಲ್ಲೂಕಿನ ತಾಳಮಡಗಿ ಗ್ರಾಮದ ಗ್ರಾಮ ಪಂಚಾಯತ್ ಸದಸ್ಯ ರಾಜಪ್ಪ ಭಾವಿದೊಡ್ಡಿ ರವರು ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆ ಓದುತ್ತಿರುವುದನ್ನು ಕಾಣಬಹುದು. ವೈಜಿನಾಥ ಪಾಟೀಲ ಕಠಳ್ಳಿ ಇದ್ದರು.

ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮದಲ್ಲಿ ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ಸಲಹೆ

# ಗ್ರಾಹಕರಿಗಿರುವ ಹಕ್ಕುಗಳ ಮಾಹಿತಿ ಹೊಂದಬೇಕು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.25–ದಿನನಿತ್ಯ ಜೀವನದಲ್ಲಿ ಯಾವುದೇ ವಸ್ತು ಕೊಂಡುಕೊಳ್ಳುವವರು ಗ್ರಾಹಕರಾಗುತ್ತಾರೆ.ಮಾರಾಟಗಾರರ ಜೊತೆವ್ಯವಹರಿಸುವಪ್ರತಿಯೊಬ್ಬ ಗ್ರಾಹಕರುತಮಗಿರುವಹಕ್ಕುಗಳ ಬಗ್ಗೆ ಮಾಹಿತಿ ಹೊಂದಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಆಹಾರನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ,ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರ ಸಂಯುಕ್ತಾಶ್ರಯದಲ್ಲಿ "ಸುಸ್ಥಿರ ಜೀವನಶೈಲಿಗಳಿಗೆ ಕೇವಲ ಪರಿವರ್ತನೆ" ಎಂಬ ಘೋಷವಾಕ್ಯದಡಿ ನಗರದ ಡಾ.ರಾಜ್ ಕುಮಾರ್ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಆಧುನಿಕ ತಂತ್ರಜ್ಞಾನ ಅಭಿವೃದ್ಧಿಯಾದಂತೆ ನಾವು ಅದರ ಅನುಗುಣವಾಗಿ ಹೊಂದಿಕೊಳ್ಳುವುದು ಅನಿವಾರ್ಯವಾಗಿದೆ.ಆನ್‌ಲೈನ್ ಅಥವಾಆಫ್‌ಲೈನ್‌ನಲ್ಲಿಗ್ರಾಹಕರು ತಾವು ಖರೀದಿಸುವ ವಸ್ತುಗಳ ಗುಣಮಟ್ಟ,ಪ್ರಮಾಣದ ಬಗ್ಗೆ ಗಮನಹರಿಸಬೇಕು ಎಂದು ಕಿವಿಮಾತು ಹೇಳಿದರು.

ಗ್ರಾಹಕರುಮಾರಾಟಗಾರರಿಂದ ಮೋಸ, ವಂಚನೆ ಅಥವಾ ಸಮಸ್ಯೆ ಉಂಟಾದಲ್ಲಿ ಜಿಲ್ಲಾ ಗ್ರಾಹಕರ ನ್ಯಾಯಾಲಯದಲ್ಲಿ ದೂರು ನೀಡಿ ಪರಿಹಾರ ಕಂಡುಕೊಳ್ಳಬಹುದು ಎಂದು ಮಾಹಿತಿ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಮಾತನಾಡಿ, ಗ್ರಾಹಕರು ಪ್ರತಿಯೊಂದು ವಸ್ತುವನ್ನು ಖರೀದಿ ಮಾಡುವಾಗ ಎಚ್ಚರ ವಹಿಸಿಬೇಕು. ಮುಂಬರುವ ದಿನಗಳಲ್ಲಿ ಕೃತಕ ಬುದ್ಧಿಮತ್ತೆಯು ವರ್ತಕರ ಹಾಗೂ ಗ್ರಾಹಕರ ಮಧ್ಯೆ ವಂಚನೆಯಾಗದಂತೆ ಕಾರ್ಯ ನಿರ್ವಹಿಸಲು ಅಭಿವೃದ್ಧಿ ಪಡಿಸುತ್ತಿದ್ದು, ಇದು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ತಂತ್ರಜ್ಞಾನಅಭಿವೃದ್ಧಿಯಾದಂತೆ, ಮಾನವ ರಹಿತ ಯಂತ್ರಗಳೂ ಕಾರ್ಯನಿರ್ವಹಿಸಬಹುದಾದಂತಹ ವಾತಾವರಣವು ಸೃಷ್ಟಿಯಾಗಲಿದೆ. ಇವುಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಇಲ್ಲದಿದ್ದಲ್ಲಿ ಮಾರಕವಾಗಬಹುದು ಎಂದು ಅಭಿಪ್ರಾಯ ಪಟ್ಟರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ತಿಪ್ಪೇಸ್ವಾಮಿ.ಎನ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಗ್ರಾಹಕರು ತಾವು ಕೊಂಡುಕೊಳ್ಳುವ ವಸ್ತುಗಳಲ್ಲಿ ಯಾವುದೇ ರೀತಿಯ ಮೋಸವಾದಾಗ ಮತ್ತು ತಮಗಾದ ಅನ್ಯಾಯದ ವಿರುದ್ಧ ಪ್ರಶ್ನಿಸುವ ಮನೋಭಾವನೆ ಬೆಳೆಸಿಕೊಂಡು, ತಮಗಿರುವ ಗ್ರಾಹಕರ ಹಕ್ಕುಗಳ ಪರವಾಗಿ ಧ್ವನಿಯೆತ್ತಿ ಕಾನೂನಾತ್ಮಕವಾಗಿ ನ್ಯಾಯಪಡೆದುಕೊಳ್ಳಬಹುದಾಗಿದೆ ಎಂದರು.

ಅಭಿವೃದ್ಧಿ ಹೊಂದಿದ ತಂತ್ರಜ್ಞಾನದಲ್ಲಿ ಗ್ರಾಹಕರ ಹಕ್ಕುಗಳಿಗೆ ಚ್ಯುತಿ ಉಂಟಾದಾಗ ಇರುವ ಗ್ರಾಹಕರ ಹಕ್ಕುಗಳ ಬಗ್ಗೆ ಜನಸಾಮಾನ್ಯರಿಗೆ, ಸಾರ್ವಜನಿಕರಿಗೆ, ಗ್ರಾಹಕರಿಗೆ ಮಾಹಿತಿ ಒದಗಿಸುವ ಮೂಲಕ ಜಾಗೃತಿ ಮೂಡಿಸಬೇಕು ಎಂದು ಅಧಿಕಾರಿಗಳಿಗೆ, ವರ್ತಕರಿಗೆ ತಿಳಿಸಿದರು.

ಜಿಲ್ಲಾ ಹಿರಿಯ ವಕೀಲರಾದ ಎನ್.ಪ್ರಕಾಶ ಅವರು "ಸುಸ್ಥಿರ ಜೀವನಶೈಲಿಗಳಿಗೆ ಕೇವಲ ಪರಿವರ್ತನೆ" ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಗ್ರಾಹಕರು ವಸ್ತುಗಳನ್ನು ಖರೀದಿಸುವಾಗ ಸುರಕ್ಷಿತ ಹಕ್ಕು, ಮಾಹಿತಿ ಹಕ್ಕು, ಆಯ್ಕೆಯ ಹಕ್ಕು, ಕೊಂಡುಕೊಳ್ಳುವ ಹಕ್ಕು, ಗ್ರಾಹಕರ ಶಿಕ್ಷಣದ ಹಕ್ಕುಗಳ ಕುರಿತು ಮಾಹಿತಿ ತಿಳಿದುಕೊಳ್ಳುವುದು ಅಗತ್ಯವಾಗಿದೆ. ಗ್ರಾಹಕರ ಕುಂದು ಕೊರತೆಯ ಸಮಸ್ಯೆಗಳನ್ನು ನಿಖರವಾದ ಮಾಹಿತಿಯೊಂದಿಗೆ ಧಾವೆ ಹೂಡುವುದರ ಮೂಲಕ ಗ್ರಾಹಕರ ವ್ಯಾಜ್ಯಗಳ ಪರಿಹಾರ ಕೇಂದ್ರದಲ್ಲಿ ಕಾನೂನಾತ್ಮಕವಾಗಿ ಪರಿಹಾರ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಹಿರಿಯವಕೀಲರಾದ ಅಂಕಲಯ್ಯ ಅವರು ಮಾತನಾಡಿ, ಪ್ರಸ್ತುತ ದಿನಮಾನಗಳಲ್ಲಿ ಜಗತ್ತು ತಂತ್ರಜ್ಞಾನದ ಅಭಿವೃದ್ಧಿಯಿಂದ ಕೃತಕ ಬುದ್ಧಿಮತ್ತೆಯು ಅವಲಂಬನೆಗೊಳ್ಳುತ್ತಿದ್ದು, ನ್ಯಾಯಬೆಲೆ ಅಂಗಡಿಗಳಲ್ಲಿ ಉಪಯೋಗಿಸುವುದರಿಂದ ನಿಖರ ತೂಕದ ಜೊತೆಗೆ ನಿಗದಿತ ಸಮಯವನ್ನು ಉಳಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತೂಕ ಮತ್ತು ಅಳತೆ ಕುರಿತ ವಂಚನೆಯ ಜಾಗೃತಿ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಮಹಿಳಾಸದಸ್ಯೆಯಾದ ಮಾರ್ಲಾ ಶಶಿಕಲಾ, ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಅಮೃತಾ.ಪಿ.ಚವ್ಹಾಣ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರವ್ಯವಹಾರಗಳಇಲಾಖೆಯ ಉಪನಿರ್ದೇಶಕರಾದ ಸಕೀನಾ ಸೇರಿದಂತೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು, ನ್ಯಾಯಬೆಲೆ ಅಂಗಡಿಯ ಮಾಲೀಕರುಹಾಗೂಮತ್ತೀತರರು ಉಪಸ್ಥಿತರಿದ್ದರು.

ಸರಳಾದೇವಿ ಕಾಲೇಜಿನಲ್ಲಿ ಮದ್ಯ ಮತ್ತು ಮಾದಕ ದುಷ್ಪರಿಣಾಮ ಕುರಿತು ವಿಚಾರ ಸಂಕಿರಣ

# ಯುವ ಸಮುದಾಯ ದುಶ್ಚಟಗಳಿಗೆ ಬಲಿಯಾಗದೇ ಆದರ್ಶ ಜೀವನ ರೂಪಿಸಿಕೊಳ್ಳಬೇಕು: ಡಾ.ಪ್ರಹ್ಲಾದ ಚೌದ್ರಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.25–ಯುವಕ–ಯುವತಿಯರು ಮದ್ಯ ಮತ್ತು ಮಾದಕವಸ್ತುಗಳಿಗೆಬಲಿಯಾಗದೇ ಉತ್ತಮ ಆದರ್ಶ ಜೀವನ ರೂಪಿಸಿಕೊಳ್ಳಬೇಕು ಎಂದು ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಪ್ರಾಂಶುಪಾಲರಾದ ಡಾ.ಪ್ರಹ್ಲಾದ ಚೌದ್ರಿ ಅವರು ಹೇಳಿದರು.

ಕರ್ನಾಟಕಮದ್ಯಪಾನಸಂಯಮ ಮಂಡಳಿ,ಬೆಂಗಳೂರು,ವಾರ್ತಾ ಮತ್ತುಸಾರ್ವಜನಿಕಸಂಪರ್ಕ ಇಲಾಖೆ, ಬಳ್ಳಾರಿ ಮತ್ತು ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಸ್ವಾಯತ್ತ), ಬಳ್ಳಾರಿ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಎ,ಬಿ,ಸಿ ಮತ್ತು ಡಿ ಘಟಕ ಇವರ ಸಂಯುಕ್ತಾಶ್ರಯದಲ್ಲಿ ನಗರದ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ 'ಮದ್ಯ ಮತ್ತು ಮಾದಕ ದುಷ್ಪರಿಣಾಮ' ಕುರಿತು ವಿಚಾರ ಸಂಕಿರಣ ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನವು ಹೂವಿನಂತೆ ಸುಂದರವಾಗಿದ್ದು, ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತುಗಳಿಗೆ ವಿದ್ಯಾರ್ಥಿಗಳು ಸಹ ದಾಸರಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದು ಅಭಿಪ್ರಾಯ ಪಟ್ಟರು.

ವಿದ್ಯಾರ್ಥಿಗಳು ದುಶ್ಚಟಗಳಿಗೆ ವ್ಯಸನಿಗಳಾಗದೇ ವಿದ್ಯಾಭ್ಯಾಸದ ಕಡೆಗೆ ಗಮನಹರಿಸಬೇಕು. ತಮ್ಮ ಮನೆಯ ನೆರೆ–ಹೊರೆಯಲ್ಲಿ ಯಾರಾದರೂ ವ್ಯಸನಿಗಳು ಕಂಡುಬಂದಲ್ಲಿ ಆರೋಗ್ಯ ಇಲಾಖೆಯ ಸಂಬಂಧಿಸಿದ ವಿಭಾಗಕ್ಕೆ ಮಾಹಿತಿ ನೀಡಬೇಕು. ಇದರಿಂದ ಅವರನ್ನು ಮುಖ್ಯವಾಹಿನಿಗೆ ತರಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

ಜಿಲ್ಲಾಕುಷ್ಠರೋಗನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ವಿಶೇಷ ಉಪನ್ಯಾಸಕರಾಗಿ ಭಾಗವಹಿಸಿ ಮಾತನಾಡಿ, ಮದ್ಯ ಮತ್ತು ಮಾದಕ ವಸ್ತುಗಳಿಗೆ ಅವಲಂಬಿತರಾದವರು ಮಾನಸಿಕವಾಗಿ,ಶಾರೀರಿಕವಾಗಿ ಕುಗ್ಗುತ್ತಾರೆ. ಇದರಿಂದ ತನ್ನ ಜೀವನ ಮತ್ತು ಕುಟುಂಬವು ಕಷ್ಟದಲ್ಲಿ ಸಿಲುಕುತ್ತದೆ. ಹಾಗಾಗಿ ಮನುಷ್ಯನು ಶಾರೀರಿಕವಾಗಿ, ದೈಹಿಕವಾಗಿ ಸದೃಢನಾಗಿರಬೇಕೆಂದರೆ ಮದ್ಯ ಮತ್ತು ಮಾದಕ ವಸ್ತುಗಳಿಂದ ದೂರವಿರಬೇಕು ಎಂದು ಹೇಳಿದರು.

ಮದ್ಯ–ಮಾದಕವಸ್ತುವ್ಯಸನಿಗಳಾಗಿದ್ದಲ್ಲಿ ರಾಜ್ಯ ಸರ್ಕಾರವು ರಾಷ್ಟ್ರೀಯ ಟೆಲಿ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ ಟೆಲಿ ಮನಸ್ ಎಂಬ 14416 ಉಚಿತ ಸಹಾಯವಾಣಿ ಆರಂಭಿಸಿದ್ದು, ಸಹಾಯವಾಣಿಗೆ ಕರೆ ಮಾಡಿ ಆಪ್ತಸಮಾಲೋಚನೆ ಪಡೆಯಬಹುದು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ, 16 ರಿಂದ 22 ರ ವಯಸ್ಸಿನ ಯುವ ಸಮುದಾಯದಲ್ಲಿ ಹೆಚ್ಚಾಗಿ ಮಾದಕ ವಸ್ತುಗಳಿಗೆ ವ್ಯಸನಿಗಳಾಗುವುದು ಕಂಡುಬರುತ್ತಿದ್ದು, ಪ್ರಸ್ತುತದಲ್ಲಿ ಶೇ.55 ರಷ್ಟು ಈ ವಯಸ್ಸಿನ ಅಂತರದ ಯುವ ಸಮುದಾಯವು ಒಳಗೊಂಡಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಯುವಕರು ಮೊಬೈಲ್ ಗೀಳಿಗೆ ದಾಸರಾಗಬಾರದು. ಚಲನಚಿತ್ರಗಳನ್ನು ಮನರಂಜನೆದೃಷ್ಟಿಯಿಂದ ನೋಡಬೇಕು. ಒಳ್ಳೆಯ ಸಂದೇಶ ಮಾತ್ರ ಆಯ್ಕೆ ಮಾಡಬೇಕು. ಕೆಟ್ಟ ಅಭ್ಯಾಸಗಳನ್ನು ಅನುಕರಣೆ ಮಾಡಬಾರದು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳು ಗುರಿಯನ್ನಿಟ್ಟುಕೊಂಡು ಮುನ್ನಡೆಯಬೇಕು. ತಮ್ಮಲ್ಲಿನ ಪ್ರತಿಭೆಯನ್ನು ಅರಿತುಕೊಳ್ಳಬೇಕು. ದೇಶದ ಭವಿಷ್ಯವು ಈಗಿನ ಯುವ ಸಮುದಾಯವೇ. ಅದಕ್ಕಾಗಿ ದೇಶ ಕಟ್ಟುವ ಪ್ರತಿಭೆಗಳಾಗಿ ಹೊರಹೊಮ್ಮಬೇಕು ಎಂದು ತಿಳಿಸಿದರು.

ಬಳಿಕ ಗಣ್ಯರು ರಾಷ್ಟ್ರೀಯ ಟೆಲಿ ಮಾನಸಿಕ ಆರೋಗ್ಯ ಕಾರ್ಯಕ್ರಮದ ಟೆಲಿ ಮನಸ್ ಎಂಬ 14416 ಉಚಿತ ಸಹಾಯವಾಣಿಯ ಜಾಗೃತಿ ಭಿತ್ತಿಚಿತ್ರ ಪ್ರದರ್ಶಿಸಿದರು.

ಸಸಅ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆಯ ಎ ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ.ಬಿ.ರಾಮಸ್ವಾಮಿ ಅವರು ಕಾರ್ಯಕ್ರಮ ನಿರೂಪಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿ ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ.ಪ್ರವೀಣ್ ಕುಮಾರ್ ಅವರು ಗಣ್ಯರನ್ನು ಸ್ವಾಗತಿಸಿದರು. ಬಿ ಘಟಕದ ಕಾರ್ಯಕ್ರಮಾಧಿಕಾರಿ ಡಾ.ಚನ್ನಬಸವಯ್ಯ ಹೆಚ್.ಎಂ ಅವರು ವಂದಿಸಿದರು.

ಈ ಸಂದರ್ಭದಲ್ಲಿ ಡಿ ಘಟಕದ ಕಾರ್ಯಕ್ರಮಾಧಿಕಾರಿ ಪ್ರೊ.ನಾಜಿಯಾ ಖಾಜಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ವಾರ್ತಾ ಮತ್ತು ಸಾರ್ವಜನಿಕಸಂಪರ್ಕ ಇಲಾಖೆಯ ಪ್ರಥಮ ದರ್ಜೆ ಸಹಾಯಕ ವಿ.ಸಿ.ಗುರುರಾಜ, ಸಿಬ್ಬಂದಿಗಳಾದ ವಿಜಯ್ ಕುಮಾರ್, ಹನುಮೇಶ್.ಹೆಚ್., ಮಲ್ಲೇಶಪ್ಪ.ವೈ., ಹನುಮಂತಪ್ಪ.ವಿ, ಶ್ರೀಧರ ಕಾವಲಿ ಸೇರಿದಂತೆ ಕಾಲೇಜಿನ ಭೋದಕ–ಭೋದಕೇತರ ಸಿಬ್ಬಂದಿ, ವಿದ್ಯಾರ್ಥಿ–ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಮಹಿಳೆಯರು ನಿಯಮಿತವಾಗಿ ತಪಾಸಣೆಗೆ ಒಳಗಾಗಬೇಕು: ಮೇಯರ್ ಮುಲ್ಲಂಗಿ ನಂದೀಶ್



ಮಲ್ಲಮ್ಮ ನುಡಿ ವಾರ್ತೆ


ಬಳ್ಳಾರಿ,ಮಾ.25–ಹೆಣ್ಣುಮಕ್ಕಳಲ್ಲಿ ಕಂಡುಬರಬಹುದಾದಂತಹ ಗರ್ಭಕಂಠದ ಕ್ಯಾನ್ಸರ್ ಸುಲಭವಾಗಿ ಲಭ್ಯವಿರುವ ಸ್ಕ್ರೀನಿಂಗ್ ವಿಧಾನಗಳ ಮೂಲಕ ಆರಂಭದಲ್ಲಿ ಪತ್ತೆಹಚ್ಚಬಹುದಾಗಿದ್ದು, ಮಹಿಳೆಯರು ಸಕಾಲದಲ್ಲಿ ಚಿಕಿತ್ಸೆ ಪಡೆಯಬೇಕು ಎಂದು ಬಳ್ಳಾರಿ ಮಹಾನಗರಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್ ಅವರು ಹೇಳಿದರು. ಮಂಗಳವಾರದಂದು, ಬಯೋಸೈಫರ್ ಲ್ಯಾಬ್ ಹಾಗೂ ಬಳ್ಳಾರಿ ಮಹಾನಗರ ಪಾಲಿಕೆ, ಸಂಜೀವಿನಿ ಆಸ್ಪತ್ರೆ, ನವಕರ್ನಾಟಕ ಆಸ್ಪತ್ರೆ, ಸಿರಿ ಡಯಗ್ನೋಸ್ಟಿಕ್ ಲ್ಯಾಬ್ ಇವರ ಸಹಯೋಗದಲ್ಲಿ ನಗರದ ಬಿಡಿಎಎ ಫುಟ್‌ಬಾಲ್ ವೇದಿಕೆ ಸಭಾಂಗಣದಲ್ಲಿ ಮಹಾನಗರ ಪಾಲಿಕೆಯ ಮಹಿಳಾ ಪೌರಕಾರ್ಮಿಕರಿಗೆ ಆಯೋಜಿಸಿದ್ದ ಉಚಿತ ತಪಾಸಣಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಉಚಿತ ನೋಂದಣಿ, ಅನುಭವಿ ವೈದ್ಯರೊಂದಿಗೆ ಉಚಿತ ಸಮಾಲೋಚನೆ ಮತ್ತು ಉಚಿತ ಪರೀಕ್ಷೆ ಕೈಗೊಳ್ಳಲಾಗುತ್ತದೆ. ಮಹಿಳೆಯರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ವೈದ್ಯರಾದ ಡಾ.ಶಂಕರ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಅವರು ಮಾತನಾಡಿ, ಮಹಿಳೆಯರಲ್ಲಿ ಕಂಡುಬರುವ ಗರ್ಭಕಂಠದ ಕ್ಯಾನ್ಸರ್ ಮತ್ತು ಸ್ತನ ಕ್ಯಾನ್ಸರ್‌ಗಳಿಂದ ಮಹಿಳೆಯರು ಸಾವನ್ನಪ್ಪಿದ ಪ್ರಕರಣಗಳು ಕಂಡುಬರುತ್ತಿವೆ. ಇದಕ್ಕಾಗಿ 10 ವರ್ಷದಿಂದ 45 ವರ್ಷದೊಳಗಿನ ಹೆಣ್ಣುಮಕ್ಕಳು ತಪ್ಪದೇ ಪ್ರಾರಂಭಿಕ ಹಂತದಲ್ಲಿ ತಪಾಸಣೆ ಮಾಡಿಸಿಕೊಳ್ಳಬೇಕು. ಒಂದು ವೇಳೆ ದೃಢಪಟ್ಟಲ್ಲಿ ಎರಡು ಹಂತದ ಡೋಸ್‌ಗಳಲ್ಲಿ ಗುಣಪಡಿಸಬಹುದಾಗಿದೆ ಎಂದು ಹೇಳಿದರು.

ದೇಶದಲ್ಲಿ ಗರ್ಭಕಂಠದ ಕ್ಯಾನ್ಸರ್ ಮತ್ತು ಸ್ತನ ಕ್ಯಾನ್ಸರ್ ಹೆಚ್ಚಾಗಿ ಕಂಡುಬರಬಹುದಾಗಿದ್ದು, ತಪಾಸಣೆ ಮತ್ತು ಚಿಕಿತ್ಸೆಗಾಗಿ ಕೇಂದ್ರ ಸರ್ಕಾರವು ವಿಶೇಷ ಅನುದಾನ ಮೀಸಲಿರಿಸಿದೆ ಎಂದು ತಿಳಿಸಿದರು.

ಬಳಿಕ ಕಾರ್ಯಕ್ರಮದಲ್ಲಿ ಮಹಿಳಾ ಪೌರಕಾರ್ಮಿಕರಿಗೆ ತಪಾಸಣೆ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪಮೇಯರ್ ಡಿ.ಸುಕುಂ, ಸಾಮಾಜಿಕ, ಆರೋಗ್ಯ ಮತ್ತು ಶಿಕ್ಷಣ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಎಂ.ಕೆ.ಪದ್ಮಾರೋಜ, ಪ್ರಭಾರಿ ಆರೋಗ್ಯಾಧಿಕಾರಿ ಡಾ.ಮುನಾಫ್ ಪಟೇಲ್, ವೈದ್ಯರಾದ, ಡಾ.ಶಮೀರ್, ಡಾ.ಗಂಗಾಧರ ಸೇರಿದಂತೆ ಪಾಲಿಕೆಯ ಅಧಿಕಾರಿ ಮತ್ತು ಸಿಬ್ಬಂದಿ, ಮಹಿಳಾ ಪೌರ ಕಾರ್ಮಿಕರು ಹಾಗೂ ಮತ್ತೀತರರು ಇದ್ದರು.



ಕಮಲನಗರ:ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ಗ್ರಾಮ ದೇವತೆ ಭಾಗ್ಯವಂತಿ ದೇವಿಯ 9ನೇ ಜಾತ್ರೆ ಜರುಗಿತು. ಸೋಮವಾರ ರಾತ್ರಿಇಡಿ ಭಜನೆ ಆರಾಧನೆ ನಡೆದವು, ಭಕ್ತರಿಗೆ ವಿಶೇಷ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. (ಮಲ್ಲಮ್ಮ ನುಡಿ ವರದಿ)

## ಮಾ.27 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಮಾ.25–ಬಳ್ಳಾರಿನಗರ ಜೆಸ್ಕಾಂ ಉಪವಿಭಾಗ–2ರ ವ್ಯಾಪ್ತಿಯಲ್ಲಿ ರಸ್ತೆ ಅಗಲೀಕರಣ ಕಾರ್ಯಕೈಗೊಳ್ಳುತ್ತಿರುವುರಿಂದ ಮಾ.27 ರಂದು ಬೆಳಿಗ್ಗೆ 9.30 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ಎಫ್–13 ವ್ಯಾಪ್ತಿಯ ದೇವಿನಗರ, ಸಿರುಗುಪ್ಪ ರಸ್ತೆ, ಇಂದಿರಾ ನಗರ, ಸಂಜಯನಗರ, ಶಿವಲಿಂಗ ನಗರ, ಶಾಸ್ತ್ರೀನಗರ, ಬಸವನಕುಂಟೆ, ಎಂ.ಕೆ.ನಗರ, ಹವಂಬಾವಿ, ಅಶೋಕ ನಗರ, ಶ್ರೀನಿವಾಸ ನಗರ, ಕುರಿಹಟ್ಟಿ, ಎಸ್.ಪಿ.ಸರ್ಕಲ್, ವೀರಣ್ಣಗೌಡ ನಗರ, ರಾಜೇಶ್ವರಿ ನಗರ, ಕೆ.ಎಂ.ಎಫ್, ಭುವನಗಿರಿ ಕಾಲೋನಿ, ಎಸ್.ಎಲ್.ವಿ ಕಾಲೋನಿ, ಶಿವಗಿರಿ ಕಾಲೋನಿ, ರಾಮನಗರ, ಶ್ರೀನಿವಾಸ ನಗರ. ಸೂರ್ಯ ಕಾಲೋನಿ, ಮರಾಠಿ ಗಲ್ಲಿ ಸೇರಿದಂತೆ ಇತರೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷ್ಣ ನದಿಯ ಬ್ರಿಡ್ಜ್ ಹತ್ತಿರ ಅಪರಿಚಿತ ಶವ ಪತ್ತೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.25 : ಗಬ್ಬೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ ಗೂಗಲ್ ಗ್ರಾಮದ ಹತ್ತಿರ ಇರುವ ಕೃಷ್ಣ ನದಿಯ ಬ್ರಿಡ್ಜ್ ಹತ್ತಿರ ಸುಮಾರು 30–35 ವರ್ಷದ ಅಪರಿಚಿತ ಗಂಡಸು ಶವಪತ್ತೆಯಾದ ಬಗ್ಗೆ ಗಬ್ಬೂರ ಠಾಣೆಯಲ್ಲಿ ಪ್ರಕರಣ(ಯುಡಿಆರ್/02/2025) ದಾಖಲಾಗಿದೆ.

ಶವದ ಹೆಸರು, ವಿಳಾಸ ಗೊತ್ತಿಲ್ಲ. ಸದೃಢ ದೇಹ ಇದ್ದು, ಕಣ್ಣುಗಳು ಹೊರ ಬಂದಿರುತ್ತವೆ. ಮತ್ತು ನಾಲಿಗೆಯು ಬಾಯಿಯಿಂದ ಹೊರಬಂದಿದೆ. ಹಳದಿ ಬಣ್ಣದ ತುಂಬು ತೋಳಿನ ಟಿ–ಶರ್ಟ್ ಮತ್ತು ನೀಲಿ ಬಣ್ಣದ ಫ್ಯಾಂಟ್ ಧರಿಸಿರುತ್ತಾನೆ. ಈ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಗಬ್ಬೂರು ಠಾಣೆ ನಂ–9480803860, ಸಿಪಿಐ ದೇವದುರ್ಗ–ಮೋ ನಂ–9480803835 ಇವರಿಗೆ ಸಂಪರ್ಕಿಸಬಹುದಾಗಿದೆ ಎಂದು ಗಬ್ಬೂರು ಠಾಣೆಯ ಪೊಲೀಸ್ ಸಬ್ ಇನ್ಸಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನವೀಯ ಮೌಲ್ಯಗಳು ಜೀವನದ ಆಧಾರ ಸ್ತಂಭ:–ಡಿಕೆ ಸುನಂದಾ ಬೀದಿ.




ಮಲ್ಲಮ್ಮ ನುಡಿ ವಾರ್ತೆ

ಔರಾದ:–ಮಾನವೀಯ ಮೌಲ್ಯಗಳು ಉಗಮ ಹೆಣ್ಣು ಮಕ್ಕಳಿಂದ ಪ್ರಾರಂಭವಾಗುತ್ತಿದೆ, ಸಂಸ್ಕಾರಮೌಲ್ಯಗಳ ಜೀವನದಲ್ಲಿ ಅಳವಡಿಸಿಕೊಳ್ಳಲು ಹೆಣ್ಣುಮಕ್ಕಳ ಪಾತ್ರಪ್ರಮುಖವಾಗಿದೆ, ಎಂದು ಪ್ರಜಾ ಪಿತಾ ಬ್ರಹ್ಮಕುಮಾರಿ ವಿಶ್ವವಿದ್ಯಾಲಯ ಭಾನುವಾರ ಆಯೋಜಿಸಲಾಗಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ರಾಜಯೋಗಿನಿ ಡಿಕೆ ಸುನಂದಾ ಬೀದಿ ಯವರು ದಿವ್ಯಸಾನಿಧ್ಯ ವಹಿಸಿ ಮಾತನಾಡಿದರು.

ಭಾನುವಾರ ಪಟ್ಟಣದ ಕನಕ ಭವನದಲ್ಲಿ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ಸಂಚಾಲಕಿ ಬಿ.ಕೆ ಸುಹಾಸಿನಿ ಬಹೀನಜಿ ಮಾತನಾಡಿ, ಹೆಣ್ಣು ಮಕ್ಕಳು ಯಾವುದರಲ್ಲಿ ಕಮ್ಮಿ ಇಲ್ಲ ಭಾರತ ಸ್ವತಂತ್ರಗೋಸ್ಕರ ತನ್ನ ಪ್ರಾಣವನ್ನು ಸಲ್ಲಿಸಿದರು, ತಾಯಿ ಮನಸ್ಸು ಮಾಡಿದರೆ ಮಕ್ಕಳನ್ನು ಎತ್ತರ ಸ್ಥಾನಕ್ಕೆ ಏರಿಸಲು ಸಾಧ್ಯ ಅದೇ ತಂದೆಯಿಂದ ಆಗುವುದಿಲ್ಲ ತಾಯಿಯ ಮಮಕಾರ ಪ್ರತಿಯೊಬ್ಬರಿಗೂ ಅವಶ್ಯಕತೆ ಇರುತ್ತದೆ, ಈಗ ದೇಶದಲ್ಲಿ ಪ್ರತಿಯೊಂದು ಕ್ಷೇತ್ರದಲ್ಲಿ ಹೆಣ್ಣು ಮಕ್ಕಳೇ ಮುಂದೆ ಇದ್ದಾರೆ, ಹೆಣ್ಣು ಮಕ್ಕಳು ಅಂತರಿಕ್ಷೆ ಹೋಗಿ ಬರುತ್ತಿದ್ದಾರೆ. ಎಂದು ಮಾತನಾಡಿದರು

ತಾಲೂಕು ಆರೋಗ್ಯಾಧಿಕಾರಿ ಡಾ. ಗಾಯತ್ರಿ ಮಾತನಾಡಿದರು.

ಪಪಂ ಅಧ್ಯಕ್ಷೆ ಸರುಬಾಯಿ ಘುಳೆ, ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕಿ ಆರತಿಪಾಟೀಲ್ ಮಾತನಾಡಿದರು. ಡಾ. ಮೀನಾಕ್ಷಿ ಸ್ವಾಮಿ, ಆಪ್ತ ಸಮಾಲೋಚಕಿ ಪುಷ್ಪಾಂಜಲಿ ಎಂ.ಪಾಟೀಲ್ ಇತರರಿದ್ದರು. ಶಾಂತಾಬಹೇನಜಿ ಸ್ವಾಗತಿಸಿದರು. ಛಾಯಾ ಬಹೇನಜಿ ನಿರೂಪಣೆ ಮಾಡಿ ವಂದಿಸಿದರು.

ಕು. ಪ್ರಾಪ್ತಿ ಗಿರಣೆ, ಕು. ಸಾಕ್ಷಿ ಗಡಂತೆ, ಕು. ಸಂಧ್ಯಾ ಪಂಚಾಕ್ಷರಿ ನೃತ್ಯ ಎಲ್ಲರ ಗಮನ ಸೆಳೆಯಿತು.

# ವಿಜ್ಞಾನದ ಪ್ರಗತಿ ಹೆಚ್ಚಳಕ್ಕೆ ಗುಣಮಟ್ಟದ ಪ್ರಬಂಧಗಳ ಪ್ರಸಾರ ಮುಖ್ಯ: ಡಾ.ಭುವನೇಶ್ವರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-ವೈಜ್ಞಾನಿಕವಾಗಿ ಹೊಸ ಹೊಸ ಸಂಶೋಧನೆಗಳನ್ನುಮಾಡುವಾಗ ವಿಜ್ಞಾನದ ಪ್ರಗತಿ ಹೆಚ್ಚಿಸಲು ಪ್ರಬಂಧಗಳ ಗುಣಮಟ್ಟಹೆಚ್ಚಿಸಿ ಪ್ರಸಾರಿಸುವಲ್ಲಿ ವೈದ್ಯಸಮೂಹ ಶ್ರಮಿಸಬೇಕು ಎಂದು ಎಸ್.ಎನ್.ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದಡಾ.ಭುವನೇಶ್ವರಿ ಯಳಮಲಿ ಹೇಳಿದ್ದಾರೆ.

ನಗರದ ಎಸ್.ನಿಜಲಿಂಗಪ್ಪ ಮೆಡಿಕಲ್ ಕಾಲೇಜಿನ ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಯ ಚಿಕ್ಕಮಕ್ಕಳ ವಿಭಾಗ ಹಾಗೂ ಮೆಡಿಕಲ್ ಎಜುಕೇಶನ್ ವಿಭಾಗಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಎರಡು ದಿನದ ಕಾರ್ಯಾಗಾರದಲ್ಲಿ "ಆರ್ಟ್ ಅ್ಯಂಡ್ ಸೈನ್ಸ್ ಆಫ್ ರೈಟಿಂಗ್ ರೀಸರ್ಚ್ ಪೇಪರ್" ಎಂಬ ವಿಷಯದ ಕಾರ್ಯಾಗಾರದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿದ್ದ ದೆಹಲಿಯ ಮೌಲಾನಾ ಆಝಾದ್ ಮೆಡಿಕಲ್ ಕಾಲೇಜಿನ ಚಿಕ್ಕಮಕ್ಕಳ ವಿಭಾಗದ ಪ್ರೊಫೆಸರ್ ಡಾ.ಸಿದ್ಧಾರ್ಥ ರಾಮಜಿ ಹಾಗೂ ದೆಹಲಿ ಯುನಿವರಸಿಟಿ ಆಫ್ ಮೆಡಿಕಲ್ ಸೈನ್ಸ್‌ನ ಪ್ರೊಫೆಸರ್ ಡಾ.ಪಿಯುಶ್ ಗುಪ್ತಾ ಮತ್ತು ಡೈರೆಕ್ಟರ್ ಪ್ರೊಫೆಸರ್ ಡಾ.ಎಸ್.ವಿ ಮಧು ಅವರುಗಳು, ಸಂಶೋಧನೆಗಳು ವೈಜ್ಞಾನಿಕ ಸಮುದಾಯಕ್ಕೆ ಹರಡುವ ಪ್ರಗತಿಯ ಸಂಕೇತ ಎಂದು ಹಲವು ಉದಾಹರಣೆಗಳ ಮೂಲಕ ವಿವರಿಸಿದರು.

ಕಾರ್ಯಾಗಾರದಲ್ಲಿ ನಗರದ ಪ್ರಮುಖ ಆಸ್ಪತ್ರೆಯ ವೈದ್ಯರು, ಮೆಡಿಕಲ್ ಕಾಲೇಜು, ದಂತ ಕಾಲೇಜು, ಫಿಜಿಯೋಥೆರಪಿ ಕಾಲೇಜು ಮತ್ತು ನರ್ಸಿಂಗ್ ಕಾಲೇಜಿನವೈದ್ಯಪ್ರಮುಖರೊಂದಿಗೆ ಚಿಕ್ಕಮಕ್ಕಳ ವಿಭಾಗದ ತಜ್ಞವೈದ್ಯರು ಭಾಗವಹಿಸಿದ್ದರು. ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ ಉಪಸ್ಥಿತರಿದ್ದರು.

ಆರ್ಗನೈಜಿಂಗ್ ಚೇರಪರ್ಸನ್ ಮತ್ತು ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಅಶೋಕ ಬಡಕಲಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮ ನಿರೂಪಣೆಯನ್ನು ಡಾ.ನಿರಂಜನ ಕೋರಿ ನಿರೂಪಿಸಿದರು. ಆರ್ಗನೈಜಿಂಗ್ ಸೆಕರೆಟ್ರಿ ಮತ್ತು ಚಿಕ್ಕಮಕ್ಕಳ ವಿಭಾಗದ ತಜ್ಞ ವೈದ್ಯ ಡಾ.ರಮೇಶ್ ಪೋಳ ವಂದಿಸಿದರು. ಕಾರ್ಯಕ್ರಮ ಆಯೋಜಿಸಿದ್ದ ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಅಶೋಕ ಬಡಕಲಿ, ಡಾ.ರಮೇಶ್ ಪೋಳ, ಡಾ.ಸಂಜೀವ ಕೊಳಗಿ ಹಾಗೂ ಇನ್ನುಳಿದ ವೈದ್ಯರನ್ನು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ) ಅಭಿನಂದಿಸಿದರು.

# ಬಾಗಲಕೋಟೆ-ಡಿಕೆಸಿ ಹೇಳಿಕೆ ಖಂಡಿಸಿ ಬಿಜೆಪಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-ಸಂವಿಧಾನಬದಲಾವಣೆಮಾಡ್ತೀವಿ ಎಂಬುದಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿಕೆ ನೀಡಿದ್ದಾರೆ ನಗರದಲ್ಲಿ ಮಂಗಳವಾರ ಬಿಜೆಪಿ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿದರು.

ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ ನೇತೃತ್ವದಲ್ಲಿ ನಡೆದ ಪ್ರತಿಭಟನೆ ಅವರ ಜನಸಂಪರ್ಕ ಕಾರ್ಯಾಲಯದಿಂದ ಆರಂಭಗೊಂಡು ನಗರದ ಡಾ.ಬಿ.ಆರ್.ಅಂಬೇಡ್ಕರ ಸರ್ಕಲ್‌ವರೆಗೆ ನಡೆಯಿತು. ಅಲ್ಲಿ ಡಿ.ಕೆ.ಶಿವಕುಮಾರ ವಿರುದ್ಧ ಘೋಷಣೆ ಕೂಗಿ ಅವರ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪಿ.ಎಚ್.ಪೂಜಾರ, ಡಾ.ಬಾಬಾಸಾಹೇಬ ಅಂಬೇಡ್ಕರ ರಚಿಸಿರುವ ಸಂವಿಧಾನದ ಶೆಡ್ಯೂಲ್‌ನಲ್ಲಿ ಇಲ್ಲದ ಜನರಿಗೆ ಮೀಸಲಾತಿ ಕಲ್ಪಿಸುವ ಮೂಲಕ ಕಾಂಗ್ರೆಸ್ ಸರಕಾರ ಸಂವಿಧಾನಕ್ಕೆ ಅಪಮಾನಮಾಡುತ್ತಿದೆ.ಮುಸ್ಲಿಂರಿಗೆ ಕಾಮಗಾರಿ ಗುತ್ತಿಗೆಗಳಲ್ಲಿ ಶೇ.4 ರಷ್ಟು ಮೀಸಲಾತಿ ಕೊಡುವ ಕಾನೂನು ಮಾಡಿರಬಹುದು. ಆದರೆ ದೂರಗಾಮಿ ಪರಿಣಾಮ ಮೀಸಲಾತಿ ಚರ್ಚೆಗೆ ಧ-ಕ್ಕೆ ತರುವಂತಹ ಹುನ್ನಾರಕ್ಕೆ ಕಾಂಗ್ರೆಸ್ ಸರ್ಕಾರ ಕೈ ಹಾಕಿದೆ ಎಂದು ಆರೋಪಿಸಿದರು.

ಸಂವಿಧಾನ ಬದಲಿಸುವ ಹೇಳಿಕೆ ನೀಡಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಅವರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡರಾದ ಶಂಭುಗೌಡ ಪಾಟೀಲ, ಸಂಗನಗೌಡ ಗೌಡರ, ಡಾ.ಶೇಖರ ಮಾನೆ, ವಿರುಪಾಕ್ಷ ಅಮೃತಕರ, ಮಲ್ಲಿಕಾರ್ಜುನ ಸುರಪುರ, ರಾಘು ನಾಗೂರ, ರಾಜು ಗೌಳಿ, ರಾಜು ಲಮಾಣಿ, ಸುಧೀರ ಜಾಧವ, ಶಾಂತಾಬಾಯಿ ಗೋಣಿ, ವಿಜಯಲಕ್ಷ್ಮೀ ಅಂಗಡಿ, ಗಂಗಾಬಾಯಿ ರಜಪೂತ, ಯಮನಪ್ಪ ಮಂಡಿಕೇರಿ, ರಾಜು ಚಿತ್ತವಾಡಗಿ, ಕುಮಾರ ಗಿರಿಜಾ, ಮಂಜುನಾಥ ಬಳೂರಗಿ, ರಾಜು ನಾಯಕ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಮಕ್ಕಳಿಗೆ ಸಂಸ್ಕಾರ, ಸಂಸ್ಕೃತಿ ಕಲಿಸಿಕೊಡಿ-ಗೀತಾ ದಾನಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-ಮಹಿಳೆ ತನ್ನ ಮಕ್ಕಳಿಗೆ ಶಿಕ್ಷಣ ಕೊಡಿಸಿದರಷ್ಟೇ ಸಾಲದು, ಅವರಿಗೆ ಒಳ್ಳೆಯ ಸಂಸ್ಕಾರ ಕಲಿಸಿಕೊಡುವ ಅವಶ್ಯಕತೆಯಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗೀತಾ ದಾನಶೆಟ್ಟಿ ಹೇಳಿದರು.

ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಸ್ಥಳೀಯ ಮಲ್ಲಮಾಂಬೆ ಮಹಿಳಾ ಮಂಡಳ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಇಂದು ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಬೆಳೆಸುವ ದೊಡ್ಡ ಜವಾಬ್ದಾರಿ ಮಹಿಳೆಯ ಮೇಲಿದೆ ಎಂದರು.

ತನಗಿರುವ ಸಾಮರ್ಥ್ಯದಿಂದ ಇಂದು ಮಹಿಳೆ ಶೈಕ್ಷಣಿಕ, ಕೃಷಿ, ಸಮಾಜ ಸೇವೆ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಸಾಧನೆ ತೋರುತ್ತಿದ್ದಾಳೆ. ಸಾಧಕಮಹಿಳೆಯರನ್ನು ಸಾಧನೆಗಳನ್ನು ಸ್ಪೂರ್ತಿಯಾಗಿ ಇಟ್ಟುಕೊಂಡು ಇನ್ನಷ್ಟು ಬೆಳೆಯಬೇಕಿದೆ ಎಂದು ಹೇಳಿದ ಗೀತಾ ದಾನಶೆಟ್ಟಿ, ಮಹಿಳಾ ದಿನಾಚರಣೆಯಲ್ಲಿ ಸಾಧಕ ಮಹಿಳೆಯರನ್ನು ಗುರುತಿಸಿ ಗೌರವಿಸುವ ಕಾರ್ಯ ಮಾಡುವಂತೆ ಸಲಹೆ ನೀಡಿದರು.

ಇನ್ನೋರ್ವ ಅತಿಥಿ ಸರೋಜ ಕಮತಗಿ ಮಾತನಾಡಿ, ಶಕ್ತಿ ಸ್ವರೂಪಿಣಿಯಾಗಿರುವ ಮಹಿಳೆ ಸಾಕಷ್ಟು ಜವಾಬ್ದಾರಿಗಳನ್ನು ನಿಭಾಯಿಸಿಕೊಂಡು ವಿವಿಧ ಕ್ಷೇತ್ರಗಳಲ್ಲಿ ಇಂದು ಸಾಧಕಳಾಗಿ ಬೆಳೆಯುತ್ತಿರುವುದು ಒಳ್ಳೆಯ ಬೆಳವಣಿಗೆಯಾಗಿದೆ. ಇದರ ಜೊತೆಗೆ ಇಂದು ಮಕ್ಕಳಿಗೆ ಸಂಸ್ಕಾರ ಕಲಿಸಿ ಕೊಡುವ ಅವಶ್ಯಕತೆಯೂ ಇದೆ ಎಂದರು.

ಮಹಿಳಾ ಮಂಡಳದ ಹಿರಿಯರಾದ ಶ್ಯಾವಂತ್ರೆವ್ವ ತೆಗ್ಗಿ ಕಾರ್ಯಕ್ರಮ ಉದ್ಘಾಟಿಸಿದರು. ಕಸಾಪ ತಾಲೂಕು ಅಧ್ಯಕ್ಷ ಪಾಂಡುರಂಗ ಸನ್ನಪ್ಪನವರ ಮಾತನಾಡಿದರು.

ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿ ಅಧ್ಯಕ್ಷ ಪಂಡಿತ ಮಾಚಾ ಅಧ್ಯಕ್ಷತೆ ವಹಿಸಿದ್ದರು. ಹನಮಪ್ಪ ಬೆಣ್ಣೂರ, ಮಹಿಳಾ ಮಂಡಳದ ಅಧ್ಯಕ್ಷೆ ಉಮಾ ಅರಿಷಿಣಗೋಡಿ, ಕಾರ್ಯದರ್ಶಿ ಶಶಿಕಲಾ ಅರಿಷಿಣಗೋಡಿ, ಮುತ್ತಪ್ಪ ಅರಕೇರಿ, ಸಿ.ಎನ್.ಬಾಳಕ್ಕನವರ, ರವಿ ಅರಿಷಿಣಗೋಡಿ ಪಾಲ್ಗೊಂಡಿದ್ದರು.

ಅನಿತಾ ಬೆಣ್ಣೂರ ಪ್ರಾರ್ಥಿಸಿದರು. ಜ್ಯೋತಿ ಅರಿಷಿಣಗೋಡಿ ಸ್ವಾಗತಿಸಿದರು. ರಾಜೇಶ್ವರಿ ಯಡಹಳ್ಳಿ ವಂದಿಸಿದರು. ಮಲ್ಲಮ್ಮ ಅರಕೇರಿ ಹಾಗೂ ಲಕ್ಷ್ಮೀ ಅರಿಷಿಣಗೋಡಿ ನಿರೂಪಿಸಿದರು.

# ಬೆಂಬಲ ಬೆಲೆಯಲ್ಲಿ ಬಿಳಿಜೋಳ ಖರೀದಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-2024-25ನೇ ಸಾಲಿನ ಹಿಂಗಾರು ಋತುವಿನಲ್ಲಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಬಿಳಿಜೋಳ(ಮಾಲ್ದಂಡಿ) ಉತ್ಪನ್ನಕ್ಕೆ ಪ್ರತಿ ಕ್ವಿಂಟಲ್‌ಗೆ 3421 ರೂ. ಹಾಗೂ ಬಿಳಿಜೋಳ (ಹೈಬ್ರಿಡ್) ಪ್ರತಿ ಕ್ವಿಂಟಲ್‌ಗೆ 3371 ರೂ. ಬೆಲೆಯಲ್ಲಿ ಖರೀದಿಸಲಾಗುತ್ತದೆ.

ಮಾರ್ಚ 25 ರಿಂದ ರೈತರ ನೋಂದಣಿ ಕಾರ್ಯ ಆರಂಭಗೊಳ್ಳಲಿದ್ದು, ಎಪ್ರೀಲ್ 1 ರಿಂದ 31 ರವರೆಗೆ ಖರೀದಿ ಕಾರ್ಯ ನಡೆಯಲಿದೆ.

ಬಾಗಲಕೋಟೆಯಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ಮುಖ್ಯಮಾರುಕಟ್ಟೆ ಬಾಗಲಕೋಟೆ. ಎನ್.ಸಿದ್ದಯ್ಯ 7349537313, ಹುನಗುಂದದಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ಎಪಿಎಂಸಿ ಮುಖ್ಯ ಮಾರುಕಟ್ಟೆ ಪ್ರಾಂಗಣ ಹುನಗುಂದ,ದೇವಗಿರಿ8892962080, ಇಲಕಲ್ಲದಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ಎಪಿಎಂಸಿ ಉಪ ಮಾರುಕಟ್ಟೆ ಪ್ರಾಂಗಣ, ದೇವಗಿರಿ 889296080, ಬಾದಾಮಿಯಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ಎಪಿಎಂಸಿ ಮುಖ್ಯ ಮಾರುಕಟ್ಟೆ ಪ್ರಾಂಗಣ ಬಾದಾಮಿ ಅಶ್ವಿನಿ ನಾಲತವಾಡ 8310483296, ಗುಳೇದಗುಡ್ಡದಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ಹೊಳೆಬಸು ಶೆಟ್ಟರ ಗೋದಾಮು ಗುಳೇದಗುಡ್ಡ.ಅಶ್ವಿನಿ ನಾಲತವಾಡ 8310483296.

ಬೀಳಗಿಯಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ.ಟಿ.ಎ.ಪಿ.ಸಿ.ಎಂ.ಎಸ್. ಗೋದಾಮು ಬೀಳಗಿ ಶಶಿಧರ ಕೆ.ಭಜಂತ್ರಿ 8217226077, ಜಮಖಂಡಿಯಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ಎಪಿಎಂಸಿ ಮುಖ್ಯ ಮಾರುಕಟ್ಟೆ ಪ್ರಾಂಗಣ, ಜಮಖಂಡಿ. ಕುಮಾರ 9686258484, ರಬಕವಿ-ಬನಹಟ್ಟಿಯಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ತೇರದಾಳ ರಸ್ತೆ, ಹನಗಂಡಿ, ಕುಮಾರ 9686258484 ಹಾಗೂ ಮುಧೋಳದಲ್ಲಿ ವ್ಯವಸ್ಥಾಪಕರು, ಕೆ.ಎಫ್.ಸಿ.ಎಸ್.ಸಿ. ಮುಧೋಳ, ಕುಮಾರ 968625848 ಖರೀದಿ ಕೇಂದ್ರಗಳಿವೆ.

ರೈತರು ಈಋಗಖಖಖ ಐಡಿ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್ ಛಾಯಾಪ್ರತಿ ಹಾಗೂ ಈ-ಕೆವೈಸಿ ಮಾಡಿ ನೋಂದಣಿಗೆ ಹಾಜರಾಗಬೇಕು.ಹೆಚ್ಚಿನಮಾಹಿತಿಗಾಗಿ ಕೆ.ಎಫ್.ಸಿ.ಎಸ್.ಸಿ.(9448496010) ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಕೆ.ಎಂ. ಜಾನಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿ.ವಿ.ವಿ..ಸಂಘದ ವಿವಿಧ ಕಾಲೇಜುಗಳಿಗೆ 13 ರ‍್ಯಾಂಕ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-ರಾಣಿಚನ್ನಮ್ಮ ವಿಶ್ವವಿದ್ಯಾಲಯ ಬೆಳಗಾವಿ ಹಾಗೂ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ವಿಜಯಪುರ ಇವರಡಿಯಲ್ಲಿ ನಡೆದ ಪರೀಕ್ಷೆಗಳಲ್ಲಿ ನಗರದ ಬಿ.ವಿ.ವಿ.ಸಂಘದ ವಿವಿಧ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳು 13 ರ‍್ಯಾಂಕ್‌ಗಳನ್ನು ಪಡೆಯುವ ಮೂಲಕ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಬಸವೇಶ್ವರ ದೈಹಿಕ ಶಿಕ್ಷಣ ಮಹಾವಿದ್ಯಾಲಯದ ಸಂಗೀತಾ ಗೌಡರ ಬಿಪಿಎಡ್ ಪರೀಕ್ಷೆಯಲ್ಲಿ ಪ್ರಥಮ, ಭುವನೇಶ್ವರಿ ತೇಲಿ 3ನೇ ರ‍್ಯಾಂಕ್ ಪಡೆದಿದ್ದಾರೆ. ಎಂಪಿಎಡ್ ವಿಭಾಗದಲ್ಲಿ ಮೀನಾಕ್ಷಿ ಆರ್. ಪ್ರಥಮ, ಪ್ರಿಯಾ ದ್ವಿತೀಯ ಹಾಗೂ ಲಾವಣ್ಯ ವ್ಹಿ. 3ನೇ ರ‍್ಯಾಂಕ್ ಪಡದಿದ್ದಾರೆ.

ಬಸವೇಶ್ವರ ವಿಜ್ಞಾನ ಮಹಾವಿದ್ಯಾಲಯದ ಸ್ನಾತಕೋತ್ತರ ವಿಭಾಗದ ರಸಾಯನಶಾಸ್ತ್ರ ವಿಷಯದಲ್ಲಿ ನಿಷತ್ ಬೀಳಗಿ 2ನೇ ರ‍್ಯಾಂಕ್ ಪಡೆದರೆ, ಬಿ.ಎಸ್‌ಸಿ.ವಿಭಾಗದಲ್ಲಿ ಪ್ರಜ್ಞಾ ಹಿರೇಮಠ 9ನೇ ರ‍್ಯಾಂಕ್ ಪಡೆದಿದ್ದಾರೆ. ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಬಿ.ಬಿ.ಎ ವಿಭಾಗದಲ್ಲಿ ಪರೇಶ್ ಗುಂಡೆಚಾ 2ನೇ ರ‍್ಯಾಂಕ್ ಹಾಗೂ ಕಾವ್ಯಾ ಇಲ್ಲೂರ 5ನೇ ರ‍್ಯಾಂಕ್ ಪಡೆದಿದ್ದಾರೆ.

ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಬಿಂ.ಕಾಂ ಪದವಿ ವಿಭಾಗದಲ್ಲಿ ಪ್ರೇಮಾ ಹುನಗುಂದ 4ನೇ ರ‍್ಯಾಂಕ್, ಎಮ್.ಎಸ್‌ಸಿ. ಪ್ರಾಣಿಶಾಸ್ತ್ರ ವಿಭಾಗದಲ್ಲಿ ಮಹಿಮಾ ರಾಜಪುರೋಹಿತ 3ನೇ ರ‍್ಯಾಂಕ್ ಹಾಗೂ ಹೀನಾ ಕಮತರ 4ನೇ ರ‍್ಯಾಂಕ್ ಪಡೆದಿದ್ದಾರೆ. ವಿದ್ಯಾಗಿರಿಯಲ್ಲಿರುವ ಬಸವೇಶ್ವರ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಬಿ.ಎಸ್‌ಸಿ. ವಿಭಾಗದಲ್ಲಿ ಮಲ್ಲಮ್ಮ ಆರ್.ಗಾಜಿ 6ನೇ ರ‍್ಯಾಂಕ್ ಪಡೆದಿದ್ದಾರೆ.


ಸಾಧನೆಗೈದ ವಿದ್ಯಾರ್ಥಿಗಳನ್ನು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಸಂಘದ ಸದಸ್ಯರು, ಆಡಳಿತಾಧಿಕಾರಿಗಳಾದ ವ್ಹಿ.ಆರ್.ಶಿರೋಳ, ಡಾ.ವ್ಹಿ.ಎಸ್.ಕಟಗಿಹಳ್ಳಿಮಠ, ಕಾಲೇಜುಗಳ ಆಡಳಿತಮಂಡಳಿಯ ಪದನಿಮಿತ್ತ ಕಾರ್ಯದರ್ಶಿ ಡಾ.ಎಸ್.ಎಮ್.ಗಾಂವಕರ, ಮಹಾವಿದ್ಯಾಲಯಗಳ ಪ್ರಾಚಾರ್ಯರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಅಭಿನಂದಿಸಿದ್ದಾರೆ.

# ವಾತ್ಸಲ್ಯ ಮನೆ ಹಸ್ತಾಂತರ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ತಾಲೂಕಿನ ದುಬಲಗುಂಡಿ ವಲಯದ ದುಬಲಗುಂಡಿ ಗ್ರಾಮದಲ್ಲಿ ಮಾಶಾಸನಾ ಫಲಾನುಭವಿಯಾದ ಶ್ರೀಮತಿ ಚನ್ನಮ್ಮ ಇಮ್ಲೇಕರ ಅವರಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮ ದಡಿಯಲ್ಲಿ ನೂತನವಾತ್ಸಲ್ಯ ಮನೆ ರಚನೆ ಮಾಡಿದ್ದು, ಮನೆ ಹಸ್ತಾಂತರ ಕಾರ್ಯಕ್ರಮವನ್ನು ಮಾನ್ಯ ಜಿಲ್ಲಾ ನಿರ್ದೇಶಕರಾದ ಪ್ರವೀಣ ಕುಮಾರ ಅವರು ಹಸ್ತಾಂತರಿಸಿ, ನಂತರ ಮಾತನಾಡಿದ ಅವರು ಸಮಾಜ ಬದಲಾವಣೆಯಾಗಬೇಕಾದರೆ ಬದುಕಿಗೆ ಮೂಲಭೂತ ಸೌಕರ್ಯಗಳಲ್ಲಿ ಒಂದಾದ ಮನೆಯು ಪ್ರಮುಖವಾಗಿ ಜೀವನ ನಡೆಸಲು ಅಗತ್ಯತೆ ಇದೆ. ಗ್ರಾಮೀಣ ಭಾಗದ ನಿರ್ಗತಿಕರ ಜೀವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವಾತ್ಸಲ್ಯ ಮನೆ ಎಂದು ನಾಮಕರಣ ಮಾಡಿ ನಿರ್ಮಿಸಿ ಕೊಟ್ಟು ಬಡವರ ಬಾಳಲ್ಲಿ ಬೇಳಕಾಗಿದೆ. ಧರ್ಮಸ್ಥಳದ ಪರಮಪೂಜ್ಯರು ಬಡವರಿಗೆ ವಾತ್ಸಲ್ಯ ಮನೆ ನಿರ್ಮಾಣ ಮಾಡಿ ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಜನಕಲ್ಯಾಣ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ, ಈ ಮನೆಗೆ ವಾತ್ಸಲ್ಯಮನೆಯೆಂದು ನಾಮಕರಣ ಮಾಡಿ ನಿರ್ಮಿಸಿಕೊಟ್ಟು ಬಡವರ ಬಾಳಲ್ಲಿ ಬೆಳಕಾಗಿದೆ, ಬೀದರ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು ಈ ವರ್ಷ 26 ಮನೆಗಳನ್ನು ಹಾಗೂ ನಿರ್ಗತಿಕತಾಯಂದಿರಿಗೆ ಮಾನ್ಯರು ಹಸ್ತಾಂತರಮಾಡಿದೆವು ಎಂದು ನುಡಿದರು. ತಾಲೂಕಿನ ಯೋಜನಾಧಿಕಾರಿಗಳಾದ ಶ್ರೀಯುತ ವೀರೇಶ ಎನ್ ಅವರು, ನಿರ್ಗತಿಕ ಬಡ ಕುಟುಂಬಗಳಿಗೆ ಮನೆ ನಿರ್ಮಿಸಿಕೊಡುವುದರ ಮೂಲಕ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನೆರವಾಗಿದೆ. ಇಳಿ ವಯಸ್ಸಿನಲ್ಲಿ ಕುಟುಂಬಕ್ಕೆ ನೆಮ್ಮದಿ ಬೇಕಾದ ಸೂರನ್ನು ನಿರ್ಮಿಸಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು. ಕಾರ್ಯಕ್ರಮದಲ್ಲಿ, ಗ್ರಾಮಪಂಚಾಯತಸದಸ್ಯರು ಶ್ರೀ ರಂಗನಾಥ್ ಬೋಲಾ, ಗ್ರಾಮಪಂಚಾಯತ ಸದಸ್ಯರು ಸೋನಮ್ಮ, ಮಾಜಿ ಗ್ರಾಮಪಂಚಾಯತಸದಸ್ಯರು ರಮೇಶ, ವಾರ್ಡ್ ಮೆಂಬರ್ ಇಂದ್ರಜೀತ್, ಸಮಾಜ ಸೇವಾಕರು ರಾಹುಲ್, ಮೇಲ್ವಿಚಾರರು ಬಸವಲಿಂಗಯ್ಯ ಸೇವ್ ವಾಟರ್, ವಲಯದ ಮೇಲ್ವಿಚಾರರು ಸವಿತಾ, ಜ್ಞಾನ ವಿಕಾಸ ಸಮನ್ವಾಧಿಕಾರಿ ಶ್ರೀಮತಿ ಶೀಲಾ, ಅವಂತಿಕ, ಅನಿತಾ, ಲಕ್ಷ್ಮೀ, ರೇಖಾ, ಸೇವಾಪ್ರತಿನಿಧಿಯರು, ಸಂಘದ ಸದಸ್ಯರು ಇತರರು ಭಾಗವಹಿಸಿದರು.

# ನ್ಯಾಯವಾದಿ ಪ್ರಕಾಶ ಶಿಂತ್ರೆ ನಿಧನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-ನಗರದ ಹಿರಿಯ ನ್ಯಾಯವಾದಿ ಪ್ರಕಾಶ ಟಿ. ಶಿಂತ್ರೆ (62) ಮಂಗಳವಾರ ನಿಧನ ಹೊಂದಿದರು.

ಉತ್ತರ ಭಾರತ ಪ್ರವಾಸಕ್ಕೆ ತೆರಳಿದ್ದ ವೇಳೆ ಅವರು ಕೊನೆಯುಸಿರೆಳೆದಿದ್ದಾರೆ.ಮೃತರಿಗೆ ಪತ್ನಿ, ಓರ್ವ ಪುತ್ರಿ ಇದ್ದಾರೆ. ಕಳೆದ ಮೂರು ದಶಕಗಳಿಂದ ವಕೀಲವೃತ್ತಿ ಮಾಡುತ್ತಿದ್ದ ಅವರು, ಸಂಘ ಪರಿವಾರದ ಹಿರಿಯ ಕಾರ್ಯಕರ್ತರಾಗಿದ್ದರು.ಎರಡು ದಿನಗಳ ಹಿಂದೆ ವಾರಣಾಸಿ, ಪ್ರಯಾಗರಾಜ್, ಅಯೋಧ್ಯ ಪ್ರವಾಸ ಕೈಗೊಂಡಿದ್ದರು. ಮಂಗಳವಾರ ಅಯೋಧ್ಯೆ ಸಮೀಪದಲ್ಲಿ ಅವರ ಆರೋಗ್ಯದಲ್ಲಿ ಏಕಾಏಕಿ ಏರುಪೇರಾಗಿ ಹೃದಯಾಘಾತದಿಂದ ನಿಧನ ಹೊಂದಿದ್ದಾರೆ.

ಪ್ರಕಾಶ ಶಿಂತ್ರೆ ನಿಧನಕ್ಕೆ ಶಾಸಕ ಎಚ್.ವೈ. ಮೇಟಿ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಬಸವೇಶ್ವರ ಬ್ಯಾಂಕ ಅಧ್ಯಕ್ಷ ಪ್ರಕಾಶ ತಪಶೆಟ್ಟಿ, ಮುಖಂಡರಾದ ಮಲ್ಲಿಕಾರ್ಜುನ ಚರಂತಿಮಠ, ಸಂತೋಷ ಹೊಕ್ರಾಣಿ ಸೇರಿದಂತೆ ಅನೇಕ ಗಣ್ಯರು, ಸಂಘ ಪರಿವಾರದ

# ವಿದ್ಯುತ್ ಮಾರ್ಗದಿಂದ ದೂರವಿರಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.25-ಜಿಲ್ಲೆಯ ಮುಧೋಳ ತಾಲೂಕಿನ ಮಿರ್ಜಿ ಗ್ರಾಮದಲ್ಲಿ 110 ಎಮ್ ವೈ.ಎ, 110/11 ಕೆವಿ ವಿದ್ಯುತ್ ಉಪ ಕೇಂದ್ರದ ಸ್ಥಾಪನೆ, ಮತ್ತು ಪ್ರಸ್ತುತ 110/11 ಕೆ.ವಿ. ಉತ್ತೂರು-ಯಾದವಾಡ ಮಾರ್ಗಕ್ಕೆ ಲಿಂಕ್ಸ್ ವಾಹಕವನ್ನು ಬಳಸಿಕೊಂಡು, 110 ಕೆ.ವಿ ಒಳ ಕುಣಿಕೆ-ಹೊರ ಕುಣಿಕೆ ಮಾರ್ಗವನ್ನು 6.226 ಕಿ.ಮೀ.ದೂರದವರೆಗೆ ನಿರ್ಮಿಸುವ ಕಾಮಗಾರಿ ಪೂರ್ಣಗೊಂಡಿ-ದ್ದು, ಈ ವಿದ್ಯುತ್ ಮಾರ್ಗವು ಚನ್ನಾಳ, ಚನ್ನವಸ್ತಿ, ಒಂಟಗೋಡಿ ಕೊರಮ್ಮದೇವಿ ವಸ್ತಿ ಮತ್ತು ಮಿರ್ಜಿ ಗ್ರಾಮಗಳ ಸರಹದ್ದಿನಲ್ಲಿ ಹಾದು ಹೋಗುತ್ತದೆ.

ಸಾರ್ವಜನಿಕರು ಈ ವಿದ್ಯುತ್ ಮಾರ್ಗದಿಂದ ದೂರವಿರಬೇಕಾಗಿ ಕೋರಲಾಗಿದೆ. ದನ-ಕರುಗಳನ್ನು ವಿದ್ಯುತ್ ಗೋಪುರಗಳಿಗೆ ಕಟ್ಟುವುದಾಗಲಿ, ಮಾರ್ಗದ ಮೇಲೆ ಹಸಿ ದಂಟು, ತಂತಿಯನ್ನು ಎಸೆಯುವುದಾಗಲಿ, ಗೋಪುರದ ಮೇಲೆ ಹತ್ತುವುದಾಗಲಿ ಮಾಡಬಾರದು.

ಒಂದು ವೇಳೆ ಮೇಲಿನ ಕಾರಣಗಳಿಂದ ವಿದ್ಯುತ್ ಅಪಘಾತಕ್ಕೊಳಪಟ್ಟರೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜವಾಬ್ದಾರಿಯಲ್ಲ ಎಂದು ಕ.ವಿ.ಪ್ರ.ನಿ.ನಿಯಮಿತ ಯೋಜನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.25-ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ 14 ಹಿರಿಯ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳಿಗೆ ಫಿಟ್ನೆಸ್ ತರಬೇತಿ ನೀಡುವ ಸಲುವಾಗಿ 14 ಫಿಟ್ನೆಸ್ ತರಬೇತುದಾರರ ಸೇವೆ ಪಡೆಯಲು ನೇಮಕಾತಿ ಆದೇಶ ನೀಡುವ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಮಾತ್ರ ತಾತ್ಕಾಲಿಕವಾಗಿ ಮಾಸಿಕ ಸಂಚಿತ ವೇತನ, ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಭಾರತದ ಅರ್ಹ ನಾಗರೀಕರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿ ನಮೂನೆ ಮತ್ತು ಇನ್ನಿತರೆ ದಾಖಲೆಗಳನ್ನು ಏಪ್ರೀಲ್ 15ರ ಸಂಜೆ 4 ಗಂಟೆಯೊಳಗೆ ಮಹಾ ನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ ಬೆಂಗಳೂರು -560001 ಇವರಿಗೆ ಸಲ್ಲಿಸಬೇಕು. ಅರ್ಜಿ ನಮೂನೆ ಮತ್ತು ಹೆಚ್ಚಿನ ಮಾಹಿತಿಯ ಅಧಿಸೂಚನೆಯನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವೆಬ್ ಸೈಟ್ dyes.karnataka.gov.in ನಲ್ಲಿ ಪಡೆಯಬಹುದಾಗಿದೆ. ಹೆಚ್ಚಿನ ವಿವರಗಳಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಯಚೂರು ಇವರನ್ನು ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.25-ಅಪರಿಚಿತ ಅಂದಾಜು 35 ವಯೋಮಾನದ ಗಂಡಸು ವ್ಯಕ್ತಿಯೊಬ್ಬ ಮಾರ್ಚ 25ರಂದು ಇಲ್ಲಿನ ರಾಯಚೂರು ಮತ್ತು ಯರಮರಸ್ ರೈಲ್ವೆ ನಿಲ್ದಾಣಗಳ ಮಧ್ಯೆ, ರಾಯಚೂರ ಮತ್ತು ಲಿಂಗಸೂರ ಹೈವೆ ಬ್ರಿಡ್ಜ್ ಕೆಳಗಡೆ ರೈಲ್ವೆ ಕೀ.ಮೀ ನಂ 565/22-24 ನಲ್ಲಿ ಯಾವುದೋ ಚಲಿಸುವ ರೈಲುಗಾಡಿಯಿಂದ ಆಯಾತಪ್ಪಿ ಕೆಳಗೆ ಬಿದ್ದು ಆಕಸ್ಮಿಕವಾಗಿ ಮೃತಪಟ್ಟ ಬಗ್ಗೆ ರಾಯಚೂರು ರೈಲ್ವೇ ಪೊಲೀಸ್ ಠಾಣೆಯಲ್ಲಿ ಯುಡಿಆರ್ ನಂ:23/2025 ಕಲಂ 194 ಬಿ.ಎನ್.ಎಸ್.ಎಸ್ ರೀತ್ಯಾ ಪ್ರಕರಣ ದಾಖಲಾಗಿದೆ.

# ಮಾ. 27 ರಂದು 2024ನೇ ಸಾಲಿನ ಪ್ರಥಮ ಶ್ರೀ ಸಂತ ಸೇವಾಲಾಲ್ ಪ್ರಶಸ್ತಿ ಪ್ರದಾನ ಸಮಾರಂಭ : ಅಧ್ಯಕ್ಷ ಡಾ.ಎ.ಆರ್. ಗೋವಿಂದಸ್ವಾಮಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮಾ.25 :ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ವತಿಯಿಂದ ಮಾರ್ಚ್ 27 ರಂದು ಸಂಜೆ 6 ಗಂಟೆಗೆ ರವೀಂದ್ರ ಕಲಾಕ್ಷೇತ್ರದಲ್ಲಿ ರಾಜ್ಯ ಮಟ್ಟದ ಬಂಜಾರ ಸಾಹಿತ್ಯ ಹಾಗೂ ಸಾಂಸ್ಕೃತಿಕ ಉತ್ಸವ ಹಾಗೂ 2024ನೇ ಸಾಲಿನ ಪ್ರಥಮ ಶ್ರೀ ಸಂತ ಸೇವಾಲಾಲ್ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಅಧ್ಯಕ್ಷ ಡಾ.ಎ.ಆರ್.ಗೋವಿಂದಸ್ವಾಮಿ ತಿಳಿಸಿದರು.



ಇಂದು ಕನ್ನಡ ಭವನದಲ್ಲಿ ಹಮ್ಮಿಕೊಂಡಿದ್ದ ಪ್ರಶಸ್ತಿ ಪ್ರದಾನ ಸಮಾರಂಭದ ಬಗ್ಗೆ ವಿವರಣೆ ನೀಡಲು ಕರೆದಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅಧ್ಯಕ್ಷರು, ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಪ್ರಶಸ್ತಿ ಪ್ರದಾನ ಮಾಡುವರು ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕ್ನನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಅವರು ಪ್ರಶಸ್ತಿ ವಿಜೇತರ ಕಿರು ಹೊತ್ತಿಗೆ ಬಿಡುಗಡೆ ಮಾಡುವರು. ಉಪಸಭಾಧ್ಯಕ್ಷರಾದ ರುದ್ರಪ್ಪ ಮಾನಪ್ಪ ಲಮಾಣಿ ಅವರು ಘನ ಉಪಸ್ಥಿತಿ ವಹಿಸುವರು. ಚಿಕ್ಕಪೇಟೆ ವಿಧಾನಸಭಾ ಶಾಸಕರಾದ ಡಾ.ಉದಯ್ ಬಿ. ಗರುಡಾಚಾರ್ ಅವರು ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

ಪ್ರಥಮ ಬಾರಿಗೆ 2024ನೇ ಸಾಲಿನ ಶ್ರೀ ಸಂತ ಸೇವಾಲಾಲ್ ಪ್ರಶಸ್ತಿಯನ್ನು ಡಾ.ಬಿ.ಟಿ.ಲಲಿತನಾಯಕ್ ಅವರಿಗೆ ಪ್ರದಾನ ಮಾಡಲಾಗುತ್ತಿದೆ. ಪ್ರಶಸ್ತಿ ಮೊತ್ತ 1 ಲಕ್ಷ ರೂ.ಗಳನ್ನು ನೀಡಿ ಗೌರವಿಸಲಾಗುವುದು.


2023ನೇ ವರ್ಷದ ಗೌರವ ಪ್ರಶಸ್ತಿ ಪುರಸ್ಕೃತರಾದ ಡಾ.ಕೃಷ್ಣಪ್ಪಾ ಭಿಕ್ಕಪ್ಪಾ ಪವಾರ, ಶಂಕರ್ ಎಚ್ ಲಮಾಣಿ, ಬಾಬು ಲಚ್ಚು ರಾಠೋಡ, ರಾಮಚಂದ್ರ ಭಗವಾನ್ ದಾಸ್, ಡಾ. ಸಣ್ಣರಾಮ, 2024ನೇ ಸಾಲಿನಲ್ಲಿ ಶ್ರೀಮತಿ ಪುಟ್ಟಬಾಯಿ ಲಕ್ಷ್ಮಣ ನಾಯಕ್, ಮಹಾದೇವ ಧರಮು ಚವ್ಹಾಣ್, ಪಿ.ಲಕ್ಷ್ಮಣ ನಾಯಕ್, ಶ್ರೀಮತಿ ಸೀತವ್ವಲಮಾಣಿ, ರಾಘವೇಂದ್ರ ನಾಯಕ್ ಇವರುಗಳಿಗೆ ತಲಾ 50 ಲಕ್ಷ ರೂ.ಗಳನ್ನು ನೀಡಿ ಗೌರವಿಸಲಾಗುವುದು.

2023ನೇ ವರ್ಷದ ವಾರ್ಷಿಕ ಪ್ರಶಸ್ತಿ ಪುರಸ್ಕೃತರಾದ ಗೋವಿಂದ, ಶ್ರೀಮತಿ ಸೋಮ್ಲುವ್ವಾ ಪುಟ್ಟಪ್ಪಾ ಲಮಾಣಿ, ವೆಂಕಟೇಶ್ ನಾಯ್ಕ, ಕುಬೇರ ನಾಯ್ಕ್. ಎಲ್, ಶ್ರೀಮತಿ ಸುಮಂಗಲವ್ವ ಪೊ.ಲಂಬಾಣಿ, ರಾಜು ನಾಯಕ್, ಡಾ.ಬಿ.ಎಸ್.ಪುಷ್ಪ, ಸುನೀಲಕುಮಾರ್ ಚವ್ಹಾಣ, ಹನುಮಂತ ನಾಯಕ್ ಶ್ರೀಮತಿ ಆಶಾ ರಾಠೋಡ ಹಾಗೂ 2024ನೇ ಸಾಲಿನ ಡಾ.ಎಲ್.ಪಿ.ನಾಯಕ ಕಠಾರಿ, ಶ್ರೀಮತಿ ಭಾಗ್ಯಬಾಯಿ ಕೆ.ಛತ್ರಪ್ಪ ತಂಬೂರಿ, ಕಾಂತ ನಾಯಕ್, ಎಸ್.ಮೀಠ್ಯಾನಾಯ್ಕ್, ಸಿ.ಹೆಚ್. ಉಮೇಶ್, ಅಶೋಕ ಸೋಮಲು ವಾಲಿಕಾರ, ಎಲ್.ಎಂ.ನಾಗರಾಜು ಇವರುಗಳಿಗೆ ಹಾಗೂ 2022, 2023 ಹಾಗೂ 2024ನೇ ವರ್ಷದ ಅಕಾಡೆಮಿಯ ಪುಸ್ತಕ ಪ್ರಶಸ್ತಿ ಪಡೆದವರಿಗೆ ತಲಾ 25 ಸಾವಿರ ರೂ.ಗಳನ್ನು ನೀಡಿ ಗೌರವಿಸಲಾಗುವುದು ಎಂದರು.

ಪ್ರಶಸ್ತಿ ಪ್ರದಾನ ಸಮಾರಂಭದ ದಿನ ಮದ್ಯಾಹ್ನ 2.30 ಗಂಟೆಗೆ ಹಡ್ಸನ್ ವೃತ್ತದಿಂದ ರವೀಂದ್ರ ಕಲಾಕ್ಷೇತ್ರದವರೆಗೆ ವಿವಿಧ ಬಂಜಾರ ಕಲಾತಂಡಗಳ ಮೆರವಣಿಗೆ, ಸಂಜೆ 4.30 ರಿಂದ 6 ಗಂಟೆಯವರೆಗೆ ವೇದಿಕೆ ಕಾರ್ಯಕ್ರಮಗಳು ಜರುಗಲಿವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ರಿಜಿಸ್ಟ್ರಾರ್ ಡಿ.ಎಂ.ರವಿಕುಮಾರ್ ಉಪಸ್ಥಿತರಿದ್ದರು.

# ಪಾಲನಿಯಪ್ಪನ್,ವಸಂತಕುಮಾರ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಮಾ.25:ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರ ಸಭೆಯ ನಿಮಿತ್ಯವಾಗಿ ಹುಮನಾಬಾದ ಪಟ್ಟಣದ ಮುಖಾಂತರ ಬೀದರ ನಗರಕ್ಕೆ ಪ್ರಯಾಣ ಬೆಳೆಸಿದ ಶ್ರೀ ಗೋಪಿನಾಥ್ ಪಾಲನಿಯಪ್ಪನ್ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷರಾದ ವಸಂತಕುಮಾರ ರವರನ್ನ ಹುಮನಾಬಾದ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾಜಿ ಸಚಿವರಾದ ಶ್ರೀ ರಾಜಶೇಖರ ಬಿ ಪಾಟೀಲ್, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ ಬಿ ಪಾಟೀಲ್, ಶ್ರೀ ಭೀಮರಾವ ಬಿ ಪಾಟೀಲ್ ಹಾಗೂ ಅಧ್ಯಕ್ಷರು ಜಿಲ್ಲಾ ಸಹಕಾರ ಯೂನಿಯನ್ ನಿ ಹಾಗು ಉಪಾಧ್ಯಕ್ಷರು ಡಿ.ಸಿ.ಸಿ ಬ್ಯಾಂಕ್ ಯುವನಾಯಕರಾದ ಶ್ರೀ ಅಭಿಷೇಕ ಆರ್ ಪಾಟೀಲ್ ರವರು ಸ್ವಾಗತ ಕೋರಿ ಸತ್ಕರಿಸಿದರು.

ಮಾಜಿ ವಿಧಾನ ಪರಿಷತ್ ಸದಸ್ಯರಾದ ಶರಣಪ್ಪಾ ಪಾಟೀಲ್ ಮಟ್ಟೂರ, ಚಿಂಚೋಳಿ ಮತಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ಸುಭಾಶ ರಾಠೋಡ್, ಬಸವಕಲ್ಯಾಣ ಮತಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ಧನರಾಜ ತಾಳಂಪಳ್ಳಿ, ಬೀದರ ಸಿಂಡಿಕೇಟ್ ಸದಸ್ಯರಾದ ಅರ್ಜುನ ಕನಕ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಆಫ್ಸರಮಿಯಾ, ಗ್ರಾಮಿಣ ಅಧ್ಯಕ್ಷರಾದ ಓಂಕಾರ ತುಂಬಾ, ಯುವ ಕಾಂಗ್ರೆಸ್ ಅಧ್ಯಕ್ಷರಾದ ಉಮೇಶ ಜಮಗಿ, ಮಾಜಿ ಜಿಲ್ಲಾ ಪಂಚಾಯತ ಉಪಾಧ್ಯಕ್ಷರಾದ ಲಕ್ಷ್ಮಣರಾವ ಬುಳ್ಳಾ, ಪಿ.ಎಲ್.ಡಿ ಬ್ಯಾಂಕನ ಅಧ್ಯಕ್ಷರಾದ ಮಲ್ಲಿಕಾರ್ಜುನ ಮಾಶೆಟ್ಟಿ ಮುಖಂಡರಾದ ಕೇಶಪ್ಪಾ ಬಿರಾದರ ಸುರೇಶ ಘಾಂಗ್ರೆ, ಸುರೇಖಾ ರೆಡ್ಡಿ, ಅಶ್ವಿನಿ ರೆಡ್ಡಿ , ಶೋಭಾ ಪಾಟೀಲ್, ಸುಮಿತ್ರಾ ಪರೀಟ್, ಸಚ್ಚಿನ ಕಲ್ಲೂರ, ಗೌರವಾನ್ವಿತ ಪುರಸಭೆ ಸದಸ್ಯರು , ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ಸಮಾಜಕೇಂದ್ರಿತ ವ್ಯಕ್ತಿ ಶಕ್ತಿಯುತನಾಗಲು ಸಾಧ್ಯ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.25:ಸಮಾಜ ಸೇವೆಗೆ ಸಮರ್ಪಿಸಿಕೊಂಡ ವ್ಯಕ್ತಿ ಶಕ್ತಿಯಾಗಿ ಲೋಕಮಾನ್ಯನಾಗುತ್ತಾನೆ, ನಾಡು ಕಟ್ಟುತ್ತಾನೆ ಎಂದು ಚಿಂತಕ ಶಿವಕುಮಾರ ನಾರಾ ಹೇಳಿದರು.

ಪಟ್ಟಣದ ಸತ್ಯನಿಕೇತನ ಪದವಿ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಸುತ್ತೂರು ಜಗದ್ಗುರು ಸಿದ್ದನಂಜದೇಶಿಕೇಂದ್ರ ಮಹಾಸ್ವಾಮಿಗಳ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಡತನವನ್ನು ಬಂಡವಾಳವಾಗಿಸಿಕೊಂಡು ಬೆಳೆದ ಹರ್ಡೇಕರ ಮಂಜಪ್ಪನವರು ಒಂದು ಸಂಸ್ಥೆ ಮಾಡದ ಕೆಲಸ ಕಾರ್ಯ ಮಾಡಿದರು ಎಂದು ತಿಳಿಸಿದರು.

ಅಧ್ಯಕ್ಷತೆವಹಿಸಿದ ಸಂಸ್ಥೆಯ ಆಡಳಿತಾಧಿಕಾರಿ ಲಿಂಗರಾಜ ಕೋಟೆ ಮಾತನಾಡಿ, ಮಹಾತ್ಮ ಗಾಂಧೀಜಿ ಅವರ ಪ್ರಭಾವಕ್ಕೆ ಒಳಗಾದ ಮಂಜಪ್ಪನವರು ಸರಳತೆಯ ಸಾಕಾರಮೂರ್ತಿಗಳಾಗಿದ್ದರು ಗ್ರಂಥಪ್ರಕಟಣೆ, ಮುದ್ರಣಾಲಯ ಸ್ಥಾಪನೆ, ಶಿಕ್ಷಣ ಸಂಸ್ಥೆ ಹೀಗೆ ಹಲವಾರು ಸಂಸ್ಥೆಗಳನ್ನು ಹುಟ್ಟುಹಾಕಿದ್ದರು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಪ್ರಾಚಾರ್ಯ ಸಂಜೀವಕುಮಾರ ಮಾಶೆಟ್ಟೆ ಮಾತನಾಡಿ, ಬಸವ ಜಯಂತಿ, ಅಕ್ಕಮಹಾದೇವಿ ಜಯಂತಿ, ಶ್ರಾವಣ ಉಪನ್ಯಾಸ ಮಾಲೆ ಮುಂತಾದ ಸ್ಮರಣೀಯ ಕಾರ್ಯಗಳಿಗೆ ನಾಂದಿ ಹಾಡಿದ್ದರು ಎಂದು ತಿಳಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಸದಾಶಯ ನುಡಿ ನುಡಿದರು.

ಸಂತೋಷ ಹಡಪದ ಬಸವ ಗುರುವಿನ ಪೂಜೆ ನೆರವೇರಿಸಿದರು. ಗುಂಡಪ್ಪ ಸಂಗಮಕರ್ ವಚನ ಬೋಧಿಸಿದರು.

ವೀರಣ್ಣ ಕುಂಬಾರ ವಚನ ಗಾಯನ ನಡೆಸಿಕೊಟ್ಟರು.

ನಿವೃತ್ತ ಕೃಷಿ ಅಧಿಕಾರಿ ಸಿಕ್ರೇಶ್ವರ ಶೆಟಕಾರ್ ಮಕ್ಕಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಕುಮಾರಿ ಬಸವಶ್ರೀ ಸ್ವಾಗತಿಸಿದರು. ಭುವನೇಶ್ವರಿ ನಿರೂಪಿಸಿದರು.

# ಪೋಲಿಸ್ ಇಲಾಖೆಗೆ ಮೇಜರ್ ಸರ್ಜರಿ:16 ಪಿ.ಐ,15 ಡಿಎಸ್‌ಪಿ ವರ್ಗಾವಣೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.25:ರಾಜ್ಯ ಪೋಲಿಸ್ ಇಲಾಖೆಯಲ್ಲಿ ಮಹತ್ವದ ಬದಲಾವಣೆಗಳಾಗಿವೆ. 16 ಮಂದಿ ಇನ್‌ಸ್ಪೆಕ್ಟರ್ ಹಾಗೂ 15 ಮಂದಿ ಡಿವೈಎಸ್ ಪಿ (ಸಿವಿಲ್)ಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಆದೇಶಿಸಿದೆ.

ವರ್ಗಾವಣೆಯಾದ ಇನ್‌ಸ್ಪೆಕ್ಟರ್‌ಗಳು:

ದಿನೇಶ್‌ಕುಮಾರ್ ಅವರನ್ನು ತುಮಕೂರಿನಿಂದ ಕೊಡಗಿನ ಕುಶಾಲನಗರ ವೃತ್ತಕ್ಕೆ ವರ್ಗಾವಣೆ ಮಾಡಲಾಗಿದೆ. ಮೋಹನ್‌ರೆಡ್ಡಿ–ಕರ್ನಾಟಕ ಲೋಕಾಯುಕ್ತದಿಂದ ಹಾಸನ ಆಲೂರು ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದ್ದರೆ, ಲಕ್ಷ್ಮೀಕಾಂತ್ ಅವರನ್ನು ಮೈಸೂರು ಹೆಬ್ಬಾಳ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ. ಚಾಮರಾಜನಗರ ಗ್ರಾಮಾಂತರದ ಇನ್ ಸ್ಪೆಕ್ಟರ್ ಚಿಕ್ಕರಾಜಶೆಟ್ಟಿ ಅವರನ್ನು ರಾಮಾಪುರ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಲಾಗಿದೆ.

ಶೇಷಾದ್ರಿ–ಚಾಮರಾಜನಗರ ಜಿಲ್ಲೆಯ ಮಹಿಳಾ ಪೊಲೀಸ್ ಠಾಣೆಯಿಂದ ಗ್ರಾಮಾಂತರ ಠಾಣೆಗೆ, ಸತೀಶ–ಚಿಕ್ಕಮಗಳೂರು ಬಸವನಹಳ್ಳಿ ವೃತ್ತದಿಂದ ಮಹಿಳಾ ಪೊಲೀಸ್ ಠಾಣೆಗೆ ವರ್ಗಾವಣೆಗೊಂಡಿದ್ದಾರೆ.

ಶ್ರೀಕಾಂತ್–ಮಂಡ್ಯ ಡಿಸಿಆರ್‌ಬಿ, ಲಕ್ಷಯ್ಯ, ರಾಮಚಂದ್ರಪ್ಪ, ಸತೀಶ್, ಪ್ರಕಾಶ್, ಬಿ.ಜೆ ಸತೀಶ್, ಕುಮಾರ್, ಸಂತೋಷ್ ಎಂ ಪಾಟೀಲ್, ಸಂಜೀವ ರಾಯಪ್ಪ ಹಾಗೂ ಮಂಜುನಾಥ್ ಅವರುಗಳನ್ನು ಕರ್ನಾಟಕ ಲೋಕಾಯುಕ್ತಕ್ಕೆ ವರ್ಗಾವಣೆ ಮಾಡಲಾಗಿದೆ.

ಡಿವೈಎಸ್‌ಪಿ: ಶಾಂತವೀರ–ರಾಯಚೂರು ಉಪವಿಭಾಗ, ರವಿನಾಥ ಡಿ. ಹರಿಜನ–ಸಿಐಡಿ, ಸುರೇಶ್–ಬಳ್ಳಾರಿ ಗ್ರಾಮಾಂತರ ಸಿರಗುಪ್ಪ ಉಪ ವಿಭಾಗ, ನವೀನ್ ಕುಲಕರ್ಣಿ–ಬೆಂಗಳೂರು ನಗರ ಟಿಟಿಐ, ಶ್ರೀನಿವಾಸರೆಡ್ಡಿ–ಪ್ರಧಾನ ಕಚೇರಿ, ಮಾದಪ್ಪ–ಸಿಐಡಿಯಿಂದ ರಾಜ್ಯ ಗುಪ್ತವಾರ್ತೆ, ಲಕ್ಷ್ಮಿನಾರಾಯಣ–ಪ್ರಧಾನ ಕಚೇರಿ, ಗಿರಿಮಲ್ಲ ತಳಕಟ್ಟಿ–ಪ್ರಧಾನ ಕಚೇರಿ ಹಾಗೂ ಬಸವರಾಜ್ ಅವರನ್ನು ಆಂತರಿಕ ಭದ್ರತಾ ವಿಭಾಗದಲ್ಲಿಯೇ ಮುಂದುವರೆಸಲಾಗಿದೆ.

ಸುಧಾಕರ್, ರವಿಕುಮಾರ್–ಬೆಂಗಳೂರು ನಗರ ಸಿಟಿಎಸ್‌ಬಿ, ಪರಶುರಾಮಪ್ಪ, ಗಜೇಂದ್ರ ಪ್ರಸಾದ್–ವಿವಿಐಪಿ ಭದ್ರತೆ, ಶರಣಪ್ಪ–ಟಿಟಿಐ ನಿಂದ ರಾಜ್ಯ ಗುಪ್ತವಾರ್ತೆ ಮತ್ತು ವೆಂಕಟೇಶ್ ಅವರನ್ನು ಬಳ್ಳಾರಿ ಜಿಲ್ಲೆ ಸಿರಗುಪ್ಪ ಉಪ ವಿಭಾಗದಿಂದ ಸಿಐಡಿಗೆ ವರ್ಗಾಯಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಏ.20 ರಿಂದ ಮೂರು ದಿವಸ ವಚನ ಜಾತ್ರೆ ಸಂಭ್ರಮ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.25:ಪಟ್ಟಣದಲ್ಲಿ ಏ.20 ರಿಂದ 22ರ ವರೆಗೆ ನಡೆಯುವ ವಚನ ಜಾತ್ರೆ–2025 ಮತ್ತು ಶತಾಯಷಿ ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಯಶಸ್ವಿಗೆ ಅಗತ್ಯ ಸಹಾಯ ಸಹಕಾರ ನೀಡುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ತಿಳಿಸಿದರು. ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ವಚನ ಜಾತ್ರೆ–2025 ಮತ್ತು ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ನಿಮಿತ್ತ ಸೋಮವಾರ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ವಿಶ್ವಗುರು ಬಸವಣ್ಣನವರ ವಾರಸುದಾರರಾಗಿ ಈ ಭಾಗವನ್ನು ಬೆಳಗಿಸುವ ಪ್ರಯತ್ನ ಮಾಡಿದ್ದಾರೆ. ಅವರು ದೈಹಿಕವಾಗಿ ನಮ್ಮೊಂದಿಗೆ ಇಲ್ಲದಿದ್ದರೂ ಕೂಡ ಪೂಜ್ಯರ ಚಿಂತನೆ, ಆದರ್ಶ ಸದಾಕಾಲ ನಮ್ಮೊಂದಿಗೆ ಇರುತ್ತವೆ. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಕಳೆದ 25 ವರ್ಷಗಳಿಂದ ಪೂಜ್ಯರ ಸ್ಮರಣೋತ್ಸವ ಅರ್ಥಪೂರ್ಣವಾಗಿ ಆಚರಿಸಿಕೊಂಡು ಬರಲಾಗುತ್ತಿದೆ.



ಈ ವರ್ಷವೂ ವಚನ ಜಾತ್ರೆ, ಪೂಜ್ಯರ ಸ್ಮರಣೋತ್ಸವ ಐತಿಹಾಸಿಕವಾಗಿ ಆಚರಿಸಲು ಸಿದ್ಧತೆಗಳು ಆರಂಭಗೊಂಡಿವೆ. ಈ ಮೂರು ದಿನದ ಧಾರ್ಮಿಕ ಸಮಾರಂಭದಲ್ಲಿ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಸಾನ್ನಿಧ್ಯವಹಿಸಿದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ವಿಶ್ವಗುರು ಬಸವಣ್ಣನವರ ವಿಚಾರಧಾರೆಯನ್ನು ಜನಮಾನಸಕ್ಕೆ ತಲುಪಿಸಿದ ಶತಾಯಿಷಿ ಡಾ.ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ಮತ್ತು ವಚನ ಜಾತ್ರೆ ಸಮಾರಂಭ ಭಕ್ತರ ಸಹಕಾರದಿಂದ ಅರ್ಥಪೂರ್ಣವಾಗಿ ಆಚರಿಸಿಕೊಂಡು ಬರಲಾಗುತ್ತಿದೆ. ಈ ಬಾರಿಯು ಭಕ್ತರು ತನು, ಮನ, ಧನದಿಂದ ಸಹಕರಿಸಿ ಮೂರು ದಿನದ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಪೀಠಾಧಿರಪಿ ಗುರುಬಸವ ಪಟ್ಟದ್ದೇವರು ಮಾತನಾಡಿ, ವಚನ ಜಾತ್ರೆ ಮತ್ತು ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ಅಂಗವಾಗಿ ಏ.10 ರಿಂದ 22ರ ವರೆಗೆ ಪ್ರವಚನ, ಏ.15 ರಿಂದ ಬೆಳಿಗ್ಗೆ 6ಕ್ಕೆ ಸಾಮೂಹಿಕ ವಚನ ಪಾರಾಯಣ ಜತೆಗೆ ವಿವಿಧ ಪ್ರದರ್ಶನ, ಶಿಬಿರಗಳು ಜರುಗಲಿವೆ ಎಂದರು.

ನಾರಂಜಾ ಸಕ್ಕರೆ ಕಾರಖಾನೆ ಅಧ್ಯಕ್ಷ ಡಿ.ಕೆ.ಸಿದ್ರಾಮ ಮಾತನಾಡಿ, ಶತಾಯಿಷಿ ಡಾ.ಚನ್ನಬಸವ ಪಟ್ಟದ್ದೇವರು ಗಡಿಭಾಗದ ನಡೆದಾಡುವ ದೇವರಾಗಿದ್ದರು. ಅಂತಹ ಪೂಜ್ಯರ ಸ್ಮರಣೋತ್ಸವ ಯಶಸ್ವಿಗೆ ತನು, ಮನ, ಧನದಿಂದ ಸಹಕಾರ ನೀಡುತ್ತೇನೆ ಎಂದು ತಿಳಿಸಿದರು.

ಭಾರತೀಯ ಬಸವಬಳಗದ ಅಧ್ಯಕ್ಷ ಬಾಬು ವಾಲಿ ಬಸವ ಗುರುವಿನ ಪೂಜೆ ನೆರವೇರಿಸಿದರು.

ಮಹಾಲಿಂಗ ಸ್ವಾಮೀಜಿ, ಬಸವಮುರುಘೇಂದ್ರ ಸ್ವಾಮೀಜಿ ಸಮ್ಮುಖ ವಹಿಸಿದ್ದರು.

ಈ ಸಂದರ್ಭದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ವಂಕೆ, ಜಿಲ್ಲಾ ರೈತ ಸಂಘದ ಅಧ್ಯಕ್ಷ ಸಿದ್ರಾಮಪ್ಪ ಅಣದೂರೆ, ಪ್ರಮುಖರಾದ ಚಂದ್ರಕಾಂತ ಪಾಟೀಲ, ಸೋಮನಾಥಪ್ಪ ಅಷ್ಟೂರೆ, ಗುಂಡಪ್ಪ ಸಂಗಮಕರ, ಬಸವರಾಜ ವಂಕೆ, ಶಿವಕುಮಾರ ಕಲ್ಯಾಣೆ, ಶಂಭುಲಿಂಗ ಕಾಮಣ್ಣ, ಜೈರಾಜ ಪಾರೆ, ಸಂಗಮೇಶ ವಾಲೆ, ವಿಲಾಸ ಬಕ್ಕಾ, ಡಾ.ಅಮಿತ ಅಷ್ಟೂರೆ, ವಿಶ್ವನಾಥಪ್ಪ ಬಿರಾದಾರ, ಸಿದ್ಧಯ್ಯ ಕಾವಡಿಮಠ, ಬಾಬುರಾವ ಜಲ್ದೆ, ರೇಖಾಬಾಯಿ ಅಷ್ಟೂರೆ, ಮಲ್ಲಮ್ಮ ನಾಗನಕೇರೆ, ಮಹಾನಂದ ದೇಶಮುಖ ಮುಂತಾದವರು ಇದ್ದರು.

ವಚನ ಜಾತ್ರೆ, ಶತಾಯಿಷಿ ಡಾ.ಚನ್ನಬಸವ ಪಟ್ಟದ್ದೇವರ ಸ್ಮರಣೋತ್ಸವ ಐತಿಹಾಸಿಕವನ್ನಾಗಿಸಲು ವಚನ ರಥೋತ್ಸವ ಆಚರಣೆಗೆ ತರುವಂತೆ ಮಠಾಧೀಶರು, ಭಕ್ತರು ಸಲಹೆ ನೀಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಆಚರಣೆಗೆ ತರುವ ಪ್ರಯತ್ನ ಮಾಡಲಾಗುವುದು.

**–ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ**

**ಸ್ವಾಗತ ಸಮಿತಿಗೆ ಆಯ್ಕೆ**

ಇದೇವೇಳೆ ವಚನ ಜಾತ್ರೆ–2025 ಮತ್ತು ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಸ್ವಾಗತ ಸಮಿತಿ ಗೌರವಾಧ್ಯಕ್ಷರಾಗಿ ಮಾಜಿ ಶಾಸಕ ಪ್ರಕಾಶ ಖಂಡ್ರೆ ಮತ್ತು ಸ್ವಾಗತ ಸಮಿತಿ ಅಧ್ಯಕ್ಷರಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಿ ಸ್ವಾಗತ ಸಮಿತಿ ಅಧ್ಯಕ್ಷ ಖಂಡ್ರೆ ಅವರನ್ನು ಉಭಯ ಪೂಜ್ಯರು ಸನ್ಮಾನಿಸಿ, ಗೌರವಿಸಿದರು.

# ಹುಮ್ನಾಬಾದ ತಾಲ್ಲೂಕಾ ವಕೀಲರ ಸಂಘದ ಅಧ್ಯಕ್ಷರಾಗಿ ಮಂಜುನಾಥ ರೆಡ್ಡಿ ಮುಸ್ತರಿ ಅವಿರೋಧ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ. ಮಾ.25: 2025– 2026ರ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆ ಹಿನ್ನೆಲೆ ಚುನಾವಣೆ ನಡೆಯಲಿದ್ದು. ಇಲ್ಲಿನ ತಾಲ್ಲೂಕಾ ವಕೀಲರ ಸಂಘದ ನೂತನ ಅಧ್ಯಕ್ಷರಾಗಿ ಶ್ರೀ ಮಂಜುನಾಥ ರೆಡ್ಡಿ ಮುಸ್ತರಿ ಅವರು ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾ ಅಧಿಕಾರಿಗಳಾದ ಶ್ರೀ ಭೀಮರಾವ ಓತಗೀಕರ ಅವರು ತಿಳಿಸಿದರು. ಅಧ್ಯಕ್ಷರ ಸ್ಥಾನಕ್ಕೆ ತೀವ್ರ ಪೈಪೋಟಿ ನೆಡೆಯುವ ಸಾಧ್ಯತೆ ಕಂಡು ಬಂದಿತು. ಅಧ್ಯಕ್ಷ ಸ್ಥಾನಕ್ಕೆ ಇಬ್ಬರು ನಾಮ ಪತ್ರ ಸಲ್ಲಿಸಿದರು. ಅವರಲ್ಲಿ ಶ್ರೀ ಮಂಜುನಾಥ ರೆಡ್ಡಿ ಮುಸ್ತರಿ ಮತ್ತು ಇನ್ನೊಬ್ಬ ಶ್ರೀ ಪ್ರಬುರಾವ ನಾಗರಾಳೆ ಅವರು ಇವರಿಬ್ಬರು ನಾಮ ಪತ್ರ ಸಲ್ಲಿಸಿದ್ದರು. ಇಂದು ಕೊನೆಯ ದಿನ ನಾಮ ಪತ್ರ ವಾಪಸು ಪಡೆಯುವ ದಿನಾಂಕ ವಿದ್ದ ಕಾರಣ ಶ್ರೀ ಪ್ರಬುರಾವ ನಾಗರಾಳೆ ಅವರು ನಾಮ ಪತ್ರ ವಾಪಸು ಪಡೆದ ಹಿನ್ನೆಲೆ ಶ್ರೀ ಮಂಜುನಾಥ ರೆಡ್ಡಿ ಮುಸ್ತರಿ ಅವರು ಅವಿರೋಧವಾಗಿ ಆಯ್ಕೆಯಾದರು. ಈ ಹಿಂದೆ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ ಮಂಜುನಾಥ ರೆಡ್ಡಿಯವರ ಕಾರ್ಯಗಳನ್ನು ಮೆಚ್ಚುಗೆ ವ್ಯಕ್ತಪಡಿಸಿದ ಹಿರಿಯ ವಕೀಲರಗಳಾದ ಶ್ರೀ ಎ.ಎಮ್. ಕುಲಕರ್ಣಿ, ಇಸ್ಮಾಯಿಲ್ ಸಾಹೇಬ್, ವಿ.ಕೆ.ಪಾಟೀಲರು, ಎಸ್.ಕೆ.ರಾವ, ಭೀಮರಾವ ಓತಗಿಕರ, ಎಂ.ಎಂ.ಬಿರಾದಾರ, ಡಿ.ಮಹಾದೇಪ್ಪಾ, ಸತೀಶಕುಮಾರ ರಾಮಪೂರೆ, ಶ್ರೀಮಂತ ಖ್ಯಾಲಪ್ಪ ಗೋರಂಪಳ್ಳಿ, ಮಲ್ಲಿಕಾರ್ಜುನ ಟಿ.ಹಿರೂಳೆ, ಆರ್. ಎಂ.ಗೋಖಲೆ, ಮಲ್ಲಿಕಾರ್ಜುನ ಭಂಡಾರಿ, ಬಸವರಾಜ ಕೊಡಂಬಲ, ಕಿರಿಯ ವಕೀಲರಗಳಾದ ಸುನೀಲ ಕುಲಕರ್ಣಿ, ಶಂಕರ ಸೇಡೋಳ, ದಯಾನಂದ ಮೋಳಕೆರಾ, ಭರತ ದಿಮಾಕೆ, ಶಿವಶರಣ ಮುದನಾಳ, ಲಕ್ಷ್ಮಣನಂದಿ, ಸೇರಿದಂತೆ ಅನೇಕರು ಸಲಹೆ ಸಹಕಾರದಿಂದ ಇಂದು ನೂತನ ಅಧ್ಯಕ್ಷರಾಗಿ ಶ್ರೀ ಮಂಜುನಾಥ ರೆಡ್ಡಿ ಅವರು ಆಯ್ಕೆಯಾದರು ಎಂದು ಪ್ರಕಟಣೆಯಲ್ಲಿ ತಿಳಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.